ಬೀದರ * ಕಲಬುರಗಿ * ರಾಯಚೂರು * ಕೊಪ್ಪಳ * ಬಳ್ಳಾರಿ * ಬಾಗಲಕೋಟೆ * ವಿಜಯಪೂರ ಜಿಲ್ಲೆಗಳಲ್ಲಿ ಏಕಕಾಲಕ್ಕೆ ಪ್ರಸಾರ
Postal Registration No. BDR/054/2024-2026 • EMAIL ID:mallammanudi@gmail.com

# ಮಲ್ಲಮ್ಮ ನುಡಿ

Mallammanudi Regional NewsPaper
ಸಂಪಾದಕರು: ರಮೇಶರೆಡ್ಡಿ
ಪ್ರಾದೇಶಿಕ ಕನ್ನಡ ದಿನಪತ್ರಿಕೆ ಮೊ.9448604450

VOLUME-ಸಂಪುಟ:12 | ISSUE- ಸಂಚಿಕೆ: 333 | PAGE- ಪುಟ 8 | ಗುರುವಾರ 02.01.2025 ಬೀದರ | RNI NO:KARKAN/2011/48371 | RS.ಬೆಲೆ 2/-

# ಪ್ರಾದೇಶಿಕ ಅಸಮತೋಲನ, ಅಸಮಾನತೆ ತೊಡೆಯಲು ಸಹಕರಿಸಿ: ಮುಖ್ಯಮಂತ್ರಿ ಸಿದ್ದರಾಮಯ್ಯ

ಮಲ್ಲಮ್ಮ ನುಡಿ ವಾರ್ತೆ

ಬೆಂಗಳೂರು ಜ.01:ರಾಜ್ಯದ ಜನರ ಆರ್ಥಿಕ ಶಕ್ತಿ ಹೆಚ್ಚಿಸಲು ಇನ್ನಷ್ಟು ಪರಿಣಾಮಕಾರಿಯಾಗಿ ಕಾರ್ಯ ನಿರ್ವಹಿಸಿ, ಪ್ರಾದೇಶಿಕ ಅಸಮತೋಲನ, ಅಸಮಾನತೆ ತೊಡೆಯಲು ನಿಮ್ಮ ಸಹಕಾರ ಹೆಚ್ಚು ಬೇಕು ಎಂದು ಮುಖ್ಯಮಂತ್ರಿ ಸಿದ್ದರಾಮಯ್ಯ ಅವರು ಐಎಎಸ್, ಐಪಿಎಸ್ ಅಧಿಕಾರಿಗಳಿಗೆ ಕರೆ ನೀಡಿದರು.

ವಿಧಾನಸೌಧದ ಸಮ್ಮೇಳನ ಸಭಾಂಗಣದಲ್ಲಿ ಹಿರಿಯ ಐಎಎಸ್ ಮತ್ತು ಐಪಿಎಸ್ ಅಧಿಕಾರಿಗಳಿಗೆ ಹೊಸವರ್ಷದ ಶುಭಾಶಯಗಳನ್ನು ಕೋರಿ ಮಾತನಾಡಿದರು.

ಬದುಕಿನಲ್ಲಿ ಏಳು ಬೀಳು ಸಹಜ ಮತ್ತು ನಿರಂತರ. ಪರಿಸ್ಥಿತಿಗಳು ಸದಾ ನಮ್ಮ ಪರವಾಗಿ ಇರುವುದಿಲ್ಲ. ಆದರೆ ಆತ್ಮವಿಶ್ವಾಸ ಕಳೆದುಕೊಳ್ಳದೆ ಧೈರ್ಯದಿಂದ ಸಮಸ್ಯೆಗಳನ್ನು, ಸಂದರ್ಭಗಳನ್ನು ನಿರ್ವಹಿಸಿ ಪರಿಹಾರ ಕಂಡುಕೊಳ್ಳಲು ಸಾಧ್ಯವಿದೆ.

ಆಡಳಿತಾಂಗದಲ್ಲಿ ಐಎಎಸ್, ಐಪಿಎಸ್, ಐಆರ್‌ಎಸ್, ಐಎಫ್‌ಎಸ್ ಅಧಿಕಾರಿಗಳ ಜವಾಬ್ದಾರಿ ಹೆಚ್ಚು. ನಾವು ಕಾನೂನುಗಳನ್ನು ರಚಿಸಿ, ಜಾರಿ ಆಗುವ ದಿಕ್ಕಿನಲ್ಲಿ ನಿರಂತರ ನಿಗಾ ವಹಿಸುತ್ತೇವೆ. ಅಧಿಕಾರಿ ವರ್ಗ ಸಮಾಜಕ್ಕೆ ಪೂರಕವಾಗಿ ಕ್ರಿಯಾಶೀಲತೆಯಿಂದ ಕರ್ತವ್ಯ ನಿರ್ವಹಿಸಬೇಕು ಎಂದರು.

ಸಂವಿಧಾನ ಜಾರಿ ಸಂದರ್ಭದಲ್ಲಿ ಬಾಬಾ ಸಾಹೇಬ್ ಅಂಬೇಡ್ಕರ್ ಅವರು ಆಡಿದ ಮಾತುಗಳನ್ನು ಉಲ್ಲೇಖಿಸಿದ ಮುಖ್ಯಮಂತ್ರಿಗಳು, ಸಮಾಜದ ಎಲ್ಲಾ ವರ್ಗಗಳಿಗೆ ಸಾಮಾಜಿಕ-ಆರ್ಥಿಕ ಸ್ವಾತಂತ್ರ್ಯ ಒದಗಿಸಬೇಕು. ಇಲ್ಲದಿದ್ದರೆ ರಾಜಕೀಯ ಸ್ವಾತಂತ್ರ್ಯಕ್ಕೆ ಅರ್ಥ ಬರುವುದಿಲ್ಲ ಎಂದರು.

ಭಾರತದ ಆರ್ಥಿಕತೆ ಕುಸಿತ ಕಂಡಿದ್ದಾಗ ಪ್ರಧಾನಿಯಾಗಿ ಅಧಿಕಾರ ಸ್ವೀಕರಿಸಿದ ಮನಮೋಹನ್ ಸಿಂಗ್ ಅವರು ದೇಶದ ಆರ್ಥಿಕತೆಗೆ ಹೊಸ ಚೈತನ್ಯ ನೀಡಿದರು. ದೇಶದ ಆರ್ಥಿಕ ಬೆಳವಣಿಗೆ ಆಗಿ ಇದರ ಲಾಭ ದೇಶದ ಜನರಿಗೆ ಲಭಿಸುವಂತೆ ಮಾಡಿದರು. ಸಂವಿಧಾನದ ನಿರ್ದೇಶಕ ತತ್ವಗಳಾದ ಸಮಾನತೆ, ಜಾತ್ಯತೀತತೆ, ಸಾಮಾಜಿಕ ನ್ಯಾಯದ ಮೌಲ್ಯಗಳನ್ನು ದೇಶದ



ಜನರ ಮೂಲಭೂತ ಹಕ್ಕುಗಳನ್ನಾಗಿ ಮಾಡಿದರು. ಮಾಹಿತಿ ಹಕ್ಕು, ಆಹಾರದ ಹಕ್ಕು, ಶಿಕ್ಷಣದ ಹಕ್ಕುಗಳನ್ನು ಕಡ್ಡಾಯ ಮಾಡಿದರು. ಆ ಮೂಲಕ ಸಮಾನತೆಯೆಡೆಗೆ ದೇಶವನ್ನು ಮುನ್ನಡೆಸಿದರು ಎಂದು ವಿವರಿಸಿದರು.

ಸಮಾನ ಅವಕಾಶಗಳು ಸಿಕ್ಕಾಗ ಸಮಾನತೆ ದಿಕ್ಕಿಗೆ ನಾವು ಸಾಗಬಹುದು ಎನ್ನುವ ಕಾರಣದಿಂದಲೇ ನಾವು ಐದು ಗ್ಯಾರಂಟಿಗಳನ್ನು ಜಾರಿ ಮಾಡಿದೆವು. ಜನರ ಕೈಯಲ್ಲಿ ಕಾಸು ಇರಬೇಕು, ಜನರ ಕೊಳ್ಳುವ ಶಕ್ತಿ ಹೆಚ್ಚಾಗಬೇಕು. ಇದಕ್ಕೆ ತಕ್ಕಂತೆ ರಾಜ್ಯದ ಜನರ ಜೇಬಲ್ಲಿ ಹಣ ಇರುವ ಗ್ಯಾರಂಟಿಗಳನ್ನು ನಾವು ಜಾರಿ ಮಾಡಿದೆವು. ಮಧ್ಯವರ್ತಿಗಳ ಹಾವಳಿ ಇಲ್ಲದಂತೆ ನೇರ ಜನರಿಗೆ ಹಣ ತಲುಪಿಸುತ್ತಿದ್ದೇವೆ. ಇದು ಇನ್ನಷ್ಟು ಪರಿಣಾಮಕಾರಿಯಾಗಿ ಜನರಿಗೆ ತಲುಪಿಸುವ ಜವಾಬ್ದಾರಿ ನಿಮ್ಮೆಲ್ಲರ ಮೇಲಿದೆ ಎಂದರು.

ಇಲ್ಲಿಯವರೆಗೂ 35 ಸಾವಿರ ಕೋಟಿ ರೂಪಾಯಿಗಳನ್ನು ಕಲ್ಯಾಣ ಕರ್ನಾಟಕ ಅಭಿವೃದ್ಧಿಗೆ ಖರ್ಚು ಮಾಡಿದ್ದೇವೆ. ಈಗಲಾದರೂ ನಂಜುಂಡಪ್ಪ ಅವರ ವರದಿಯಲ್ಲಿನ ಪ್ರಾದೇಶಿಕ ಅಸಮಾನತೆ ಕಡಿಮೆಯಾಗಿದೆಯಾ ಎನ್ನುವುದನ್ನು ಅಧ್ಯಯನ ನಡೆಸಿ ವರದಿ ನೀಡಿಲು ಗೋವಿಂದರಾವ್ ಅವರ ಸಮಿತಿ ರಚಿಸಲಾಗಿದೆ. ಏಕೆ ಉತ್ತರ ಕರ್ನಾಟಕದ ಅಸಮಾನತೆ ಕಡಿಮೆ ಆಗಿಲ್ಲ ಎನ್ನುವ ಬಗ್ಗೆಯೂ ಬೆಳಗಾವಿ ಅಧಿವೇಶನದಲ್ಲೂ ಚರ್ಚಿಸಿದ್ದೇವೆ. ಇದನ್ನು ನಾವು ಗಂಭೀರವಾಗಿ ಪರಿಗಣಿಸಿದ್ದೇವೆ. ನೀವೂ ಅಷ್ಟೇ ಗಂಭೀರವಾಗಿ ಪರಿಗಣಿಸಿ ಪ್ರಾದೇಶಿಕ ಅಸಮತೋಲನ ತೊಡೆದು ಹಾಕಲು ಶ್ರಮಿಸಬೇಕು ಎಂದರು.

ಯುವ ಜನತೆ ನಮ್ಮ ಆಸ್ತಿ: ಇವರ ಭವಿಷ್ಯ ಹಾಳಾಗದಂತೆ ಎಚ್ಚರ ವಹಿಸುವ ಸವಾಲು ಐಪಿಎಸ್ ಅಧಿಕಾರಿಗಳು ಸ್ವೀಕರಿಸಬೇಕು:

ಯುವ ಜನತೆ ನಮ್ಮ ಸಮಾಜದ ಆಸ್ತಿ. ಇವರ ಭವಿಷ್ಯ ಹಾಳಾಗದಂತೆ ಎಚ್ಚರ ವಹಿಸುವ ಸವಾಲನ್ನು ಐಪಿಎಸ್ ಅಧಿಕಾರಿಗಳು ಸ್ವೀಕರಿಸಬೇಕು. ಡ್ರಗ್ಸ್ ಹಾವಳಿ, ಅಪರಾಧಿಕ ಜಗತ್ತಿನ ಕಡೆಗೆ ಯುವ ಜನತೆ ಆಕರ್ಷಿತರಾಗದಂತೆ ಎಚ್ಚರ ವಹಿಸಬೇಕು. ತಂತ್ರಜ್ಞಾನ ಮತ್ತು ವಿಜ್ಞಾನದ ಪ್ರಗತಿ ಆಗುತ್ತಿದೆ. ಈ ಪ್ರಗತಿ ಅಪರಾಧಗಳಿಗೆ ಬಳಕೆ ಆಗದೆ ಯುವ ಜನರ ಭವಿಷ್ಯ ರೂಪಿಸಲು ಸಹಕಾರಿ ಆಗುವಂತೆ ಕರ್ತವ್ಯ ನಿರ್ವಹಿಸಿ ಎಂದು ಸಲಹೆ ನೀಡಿದರು.

ನೀವು ಅಧಿಕಾರಿ ವರ್ಗ ಪ್ರಾಮಾಣಿಕವಾಗಿ ಕರ್ತವ್ಯ ನಿರ್ವಹಿಸಿದರೆ ರಾಜ್ಯದಲ್ಲಿ ಅದ್ಭುತ ಬದಲಾವಣೆ, ಸುಧಾರಣೆಗಳನ್ನು ತರಲು ಸಾಧ್ಯವಿದೆ. ಇದಕ್ಕಾಗಿ ನಿಮ್ಮ ಕಾರ್ಯಕ್ಷಮತೆ ಬಳಕೆಯಾಗಲಿ ಎಂದರು.

ಅಧಿಕಾರಿ ವರ್ಗಕ್ಕೆ ತಮ್ಮ ಸಲಹೆಯ ಅಗತ್ಯ ಇಲ್ಲ. ನೀವು ಆತ್ಮಸಾಕ್ಷಿಗೆ

(2ನೇ ಪುಟ ನೋಡಿ)

## ವಿದ್ಯುತ್ ಟಿಸಿ ತಗುಲಿ ಯುವಕನ ಸಾವು



ಕಲಬುರಗಿ,ಜ.1:ವಾಡಿ ಪಟ್ಟಣದ ಪುರಸಭೆ ವ್ಯಾಪ್ತಿಯ ಸಿದ್ಧಾರ್ಥ ನಗರ ಬಡಾವಣೆಯಲ್ಲಿನ ರಸ್ತೆ ಪಕ್ಕದಲ್ಲಿ ಅಳವಡಿಸಲಾದ ವಿದ್ಯುತ್ ಟ್ರಾನ್ಸ್‌ಫಾರ್ಮರ್ ತಗಲಿ ಯುವಕನೊಬ್ಬ ಮೃತಪಟ್ಟ ಘಟನೆ ಮಂಗಳವಾರ ಸಂಜೆ ನಡೆದಿದೆ.

ಚಂದು ತಂದೆ ರಾಜು (20) ಮೃತಪಟ್ಟ ಯುವಕ. ಸಿದ್ಧಾರ್ಥ ಬಡಾವಣೆಯ ಮುಖ್ಯರಸ್ತೆ ಪಕ್ಕದಲ್ಲಿ ಅಳವಡಿಸಲಾದ ವಿದ್ಯುತ್ ಟ್ರಾನ್ಸ್ ಫಾರ್ಮ ತಗಲಿ ಯುವಕ ಮೃತಪಟ್ಟಿದ್ದಾನೆ ಎಂದು ಮೂಲಗಳಿಂದ ತಿಳಿದು ಬಂದಿದೆ. ಸ್ಥಳಕ್ಕೆ ವಾಡಿ ಠಾಣೆಯ ಪಿಎಸ್‌ಐ ತಿರುಮಲೇಶ್.ಕೆ. ಭೇಟಿ ನೀಡಿ, ಪರಿಶೀಲನೆ ನಡೆಸಿದ್ದಾರೆ.

## ಗುತ್ತಿಗೆದಾರ ಸಚಿನ ಆತ್ಮಹತ್ಯೆ ಪ್ರಕರಣ: ತನಿಖೆಗೆ ವಿಶ್ವಕರ್ಮ ಸಮಾಜದ ಆಗ್ರಹ



ಮಲ್ಲಮ್ಮ ನುಡಿ ವಾರ್ತೆ

ಬಾಗಲಕೋಟೆ,ಜ.1-ಬೀದರ ಜಿಲ್ಲೆ ಬಾಲ್ಕಿ ತಾಲೂಕಿನ ಗುತ್ತಿಗೆದಾರ ವಿಶ್ವಕರ್ಮ ಸಮಾಜದ ಸಚಿನ ಪಾಂಚಾಳ ಆತ್ಮಹತ್ಯೆ ಪ್ರಕರಣದಲ್ಲಿ ಭಾಗಿಯಾಗಿರುವವರನ್ನು ಕೂಡಲೇ ಬಂಧಿಸಿ ಸೂಕ್ತ ಕ್ರಮಕೈಗೊಳ್ಳಬೇಕು ಎಂದು ವಿಶ್ವಕರ್ಮ ಸಮಾಜ ಆಗ್ರಹಿಸಿದೆ.

ಮುರನಾಳ ಶ್ರೀ ಮಳೆರಾಜೇಂದ್ರಸ್ವಾಮಿ ಮಠದ ಪೂಜ್ಯ ಮೌನೇಶ್ವರ ಮಹಾಸ್ವಾಮಿಗಳ ನೇತೃತ್ವದಲ್ಲಿ ವಿಶ್ವಕರ್ಮ ಸಮಾಜದವರು ಜಿಲ್ಲಾಧಿಕಾರಿಗಳ ಮುಖಾಂತರ ರಾಜ್ಯಪಾಲರಗೆ ಮನವಿ ಸಲ್ಲಿಸಿ ತನಿಖೆಗೆ ಒತ್ತಾಯಿಸಿದರು.

ಸಚಿನ ಪಂಚಾಳ ಬರೆದಿರುವ ಡೆತ್‌ನೋಟ ಪ್ರಕಾರ ತನಿಖೆಗೆ ಒಳಪಡಿಸಿ ನೊಂದ ಕುಟುಂಬಕ್ಕೆ ನ್ಯಾಯ ಒದಗಿಸಬೇಕು. ಮಾನವೀಯ ಮೌಲ್ಯಗಳ ಆಧಾರದ ಮೇಲೆ ಬದುಕುತ್ತಿರುವ ಸಮಾಜಕ್ಕೆ ಸಾಮಾಜಿಕ ನ್ಯಾಯ ಹಾಗೂ ಭದ್ರತೆ ಸಿಕ್ಕರೆ ನಾವು ಬದುಕಲು ಸಾಧ್ಯ ಹಾಗಾಗಿ ಸಚಿನ ಕುಟುಂಬಕ್ಕೆ ನ್ಯಾಯ ಸಿಗಬೇಕು. ಇಲ್ಲವಾದಲ್ಲಿ ರಾಜ್ಯದಲ್ಲಿ ವಿಶ್ವಕರ್ಮ ಸಮಾಜದ ರಾಜ್ಯದ ಎಲ್ಲ ಸಂಘನೆಗಳು ಬೆಂಗಳೂರಿನ ಫ್ರೀಡಂ ಪಾರ್ಕನಲ್ಲಿ ಸೇರಿ ಹೋರಾಟವನ್ನು ಕೈಗೊಳ್ಳಬೇಕಾಗುತ್ತದೆ ಎಂದು ಮಳೆರಾಜೇಂದ್ರಸ್ವಾಮಿಮಠ ಪೂಜ್ಯರಾದ ಮೌನೇಶ್ವರ ಮಹಾಸ್ವಾಮಿಗಳು ತಿಳಿಸಿದರು.

ಈ ಸಂದರ್ಭದಲ್ಲಿ ವಿಶ್ವಕರ್ಮ ಸಮಾಜದ ಗಂಗಾಧರ ಬಡಿಗೇರ, ಮುರನಾಳದ ವಿಶ್ವಕರ್ಮ ಸಮಾಜ ಕ್ಷೇಮಾಭಿವೃದ್ಧಿ ಸಂಘದ ಅಧ್ಯಕ್ಷ ಅಶೋಕ ಪತ್ತಾರ, ಉಪಾಧ್ಯಕ್ಷ ಚಂದ್ರಶೇಖರ ಪತ್ತಾರ ಶಿಲ್ಪಿ, ಯುವ ಮುಖಂಡ ಈರಣ್ಣ ಬಡಿಗೇರ ಸೇರಿದಂತೆ ಅನೇಕರು ಇದ್ದರು.

## ವೈದ್ಯಕೀಯ ಶಿಕ್ಷಣ ಸಚಿವರಿಂದ ಯುವನಿಧಿ ಯೋಜನೆಯಡಿ ನೋಂದಣಿ ಪ್ರಕ್ರಿಯೆಗೆ ಚಾಲನೆ

ಕಲಬುರಗಿ,ಜ.01:ವೈದ್ಯಕೀಯ ಶಿಕ್ಷಣ ಹಾಗೂ ಕೌಶಲ್ಯಾಭಿವೃದ್ಧಿ, ಉದ್ಯಮಶೀಲತೆ ಮತ್ತು ಜೀವನೋಪಾಯ ಇಲಾಖೆಯ ಸಚಿವರಾದ ಡಾ. ಶರಣಪ್ರಕಾಶ ಆರ್. ಪಾಟೀಲ ಅವರು ಮಂಗಳವಾರ (ಡಿಸೆಂಬರ್ 31 ರಂದು) ಕಲಬುರಗಿಯಲ್ಲಿ 2024ರ ಯುವ ನಿಧಿ ಯೋಜನೆಯ ನೋಂದಣಿ ಪ್ರಕ್ರಿಯೆಗೆ ಚಾಲನೆ ನೀಡಿದರು.

ಈ ಸಂದರ್ಭದಲ್ಲಿ ಕಲಬುರಗಿ ಜಿಲ್ಲಾ ಉದ್ಯೋಗ ವಿನಿಮಯ ಕಚೇರಿಯ ಸಹಾಯಕ ನಿರ್ದೇಶಕಿ ಭಾರತಿ ಸಿಂಗ್ ಸೇರಿದಂತೆ ಮತ್ತಿತರರು ಉಪಸ್ಥಿತರಿದ್ದರು.

ಯುವನಿಧಿ ಯೋಜನೆಯಡಿ ನೋಂದಣಿಗೆ ಅರ್ಹತೆಗಳು ಇಂತಿವೆ. 2023 ಹಾಗೂ 2024 ರಲ್ಲಿ ಪದವಿ/ ಸ್ನಾತಕೋತ್ತರ ಪದವಿ / ಡಿಪ್ಲೋಮಾ ಉತ್ತೀರ್ಣರಾದ ವಿದ್ಯಾರ್ಥಿಗಳು, ಪದವಿ/ ಸ್ನಾತಕೋತ್ತರ ಪದವಿ/ ಡಿಪ್ಲೋಮಾ ಉತ್ತೀರ್ಣರಾಗಿ ಕನಿಷ್ಠ 6 ತಿಂಗಳ ಅವಧಿವರೆಗೆ ಸರ್ಕಾರಿ/ ಖಾಸಗಿ ಉದ್ಯೋಗ ಹೊಂದಿಲ್ಲದವರು. ಸ್ವಯಂ ಉದ್ಯೋಗ ಹೊಂದಿಲ್ಲದವರು, ಉನ್ನತ ವಿದ್ಯಾಭ್ಯಾಸ ಮುಂದುವರಿಸದೇ ಇರುವವರು, ಕರ್ನಾಟಕದಲ್ಲಿ ವಾಸವಿರುವವರು (ಕನಿಷ್ಠ 6 ವರ್ಷಗಳವರೆಗೆ ಪದವಿ / ಸ್ನಾತ-ಕೋತ್ತರ ಪದವಿ / ಡಿಪ್ಲೋಮಾದವರೆಗೆ ಅಧ್ಯಯನ ಮಾಡಿದವರು).

ಈ ಯೋಜನೆಯಡಿ ಪ್ರತಿ ತಿಂಗಳು ಪದವಿ ಹಾಗೂ ಸ್ನಾತಕೋತ್ತರ ಪದವೀಧರರಿಗೆ 3000 ರೂ. ಹಾಗೂ ಡಿಪ್ಲೋಮಾ ತೇರ್ಗಡೆಯಾದವರಿಗೆ 1500 ರೂ.ಗಳ ನಿರುದ್ಯೋಗ ಭತ್ಯೆ ನೀಡಲಾಗುತ್ತಿದ್ದು, ಎಸ್.ಎಸ್.ಎಲ್.ಸಿ., ಪಿ.ಯು.ಸಿ., ಪದವಿ, ಸ್ನಾತಕೋತ್ತರ ಪದವಿ ಹಾಗೂ ಡಿಪ್ಲೋಮಾ ಪ್ರಮಾಣಪತ್ರ ದಾಖಲೆಗಳೊಂದಿಗೆ



ಅರ್ಹ ಅಭ್ಯರ್ಥಿಗಳು ನೋಂದಣಿ ಮಾಡಿಕೊಳ್ಳಬೇಕು. ಅದೇ ರೀತಿ ಜಿಲ್ಲಾಧಿಕಾರಿ ಬಿ.ಫೌಜಿಯಾ ತರನ್ನುಮ್ ಅವರು ಜಿಲ್ಲಾಧಿಕಾರಿಗಳ ಕಚೇರಿ ಸಭಾಂಗಣದಲ್ಲಿ ಹಾಗೂ ಜಿಲ್ಲಾ ಪಂಚಾಯತ್ ಮುಖ್ಯಕಾರ್ಯನಿರ್ವಾಹಕ ಅಧಿಕಾರಿ ಭಂವರ್ ಸಿಂಗ್ ಮೀನಾ ಅವರು ಜಿಲ್ಲಾ ಪಂಚಾಯತ್ ಕಚೇರಿಯಲ್ಲಿ ಅವರು ಯುವ ನಿಧಿ ಯೋಜನೆಯಡಿ 2024ರ ನೋಂದಣಿ ಪ್ರಕ್ರಿಯೆಯ ಪ್ರಚಾರ ಅಭಿಯಾನಕ್ಕೆ ಇತ್ತೀಚೆಗೆ ಚಾಲನೆ ನೀಡಿದರು.

ಸಂದರ್ಭದಲ್ಲಿ ಕಲಬುರಗಿ ಜಿಲ್ಲಾ ಉದ್ಯೋಗ ವಿನಿಮಯ ಕಚೇ-ರಿಯ ಸಹಾಯಕ ನಿರ್ದೇಶಕಿ ಭಾರತಿ ಸಿಂಗ್ ಸೇರಿದಂತೆ ಮತ್ತಿತರರು ಉಪಸ್ಥಿತರಿದ್ದರು.

ಹೆಚ್ಚಿನ ಮಾಹಿತಿಗಾಗಿ ಕಲಬುರಗಿ ಜಿಲ್ಲಾ ಉದ್ಯೋಗ ವಿನಿಮಯ ಕಚೇರಿಯನ್ನು ಹಾಗೂ ಕಚೇರಿ ದೂರವಾಣಿ ಸಂಖ್ಯೆ 08472-274846ಗೆ ಸಂಪರ್ಕಿಸಲು ಕೋರಲಾಗಿದೆ.

## ವಿವಿಧ ಸಂಘಟನೆಗಳಿಂದ ನಾಳೆ ಅರಣ್ಯ ಇಲಾಖೆ ಎದುರು ಅನಿರ್ಧಿಷ್ಟಾವಧಿ ಮುಷ್ಕರ: ಮಾರುತಿ ಕಂಟಿ

ಬೀದರ್:ಜ.1: ಭಾರತೀಯ ಜೈ ಭೀಮ ದಳ ಸೇರಿದಂತೆ ವಿವಿಧ ದಲಿತಪರ ಸಂಘಟನೆಗಳಿಂದ ಅರಣ್ಯ ಇಲಾಖೆ ಎದುರು ಉಪ ಅರಣ್ಯ ಸಂರಕ್ಷಣಾಧಿಕಾರಿಗಳು ಹಾಗೂ ಇತರೆ ಸಹಾಯಕ ಅರಣ್ಯ ಅಧಿಕಾರಿಗಳ ವಿರೂದ್ಧ ಅನಿರ್ಧಿಷ್ಟಾವಧಿ ಮುಷ್ಕರ ಹಮ್ಮಿಕೊಳ್ಳಲಾಗಿದೆ ಎಂದು ಭಾರತೀಯ ಜೈ ಭೀಮ ದಳ ಸಂಘಟನೆಯ ಅಧ್ಯಕ್ಷ ಮಾರುತಿ.ಬಿ.ಕಂಟಿ ಹೇಳಿದರು.

ಬುಧವಾರ ಜಿಲ್ಲಾ ಪತ್ರಿಕಾ ಭವನದಲ್ಲಿ ಸುದ್ದಿಗೋಷ್ಟಿ ಉದ್ದೇಶಿಸಿ ಮಾತನಾಡಿರುವ ಅವರು, 1978 ಕ್ಕಿಂತ ಮುಂಚೆ ನಮ್ಮ ಸಮಾಜ ಬಾಂಧವರು ಸರ್ಕಾರಿ ಜಮಿನಿನಲ್ಲಿ ಉಳಿಮೆ ಮಾಡಿ ಜೀವನ ಸಾಗಿಸುತ್ತಿದ್ದರು. ರಾಜ್ಯದ ಕಂದಾಯ ಇಲಾಖೆಯು 1978=79 ರಲ್ಲಿ ಆ




ಜಮಿನನ್ನು ದಲಿತರಿಗೆ ಉಳಿಮೆ ಮಾಡಲು ಸಂಪೂರ್ಣ ಅನುಮತಿ ನೀಡಿತ್ತು. ಆ ಸಮಯದಲ್ಲಿ ಉಳಿಮೆ ಮಾಡಿಕೊಂಡು ಬದುಕುತ್ತಿದ್ದ ಎಲ್ಲ ದಲಿತ ಸಮುದಾಯದ ಜನರಿಗೆ ಸಿ ಫಾರ್ಮ ನೀಡಿತ್ತು. ಆದರೆ ಇಂದು ಜಿಲ್ಲಾ ಉಪ ಅರಣ್ಯ ಸಂರಕ್ಷಣಾಧಿಕಾರಿ ವಾನತಿ ಹಾಗೂ ಅವರ ಕೆಳ ಹಂತದ ಅಧಿಕಾರಿಗಳು ಸುಮಾರು 4 ದಶಕಕ್ಕೂ ಅಧಿಕ ಸಮಯದಿಂದ ಉಳಿಮೆ ಮಾಡಿಕೊಂಡು ಬದುಕು ಸಾಗಿಸುತ್ತಿದ್ದ ನಮ್ಮ ಜಮಿನು ತಮ್ಮ ಸ್ವಾಧಿನದಲ್ಲಿ ಪಡೆಯುತ್ತಿರುವುದು ದುರದೃಷ್ಟಕರ ಸಂಗತಿ ಎಂದರು.

ಹಣ ಕೊಟ್ಟವರಿಗೆ ಸುಮ್ಮನೆ ಕೂಡುವುದು, ಹಣ ನೀಡದವರಿಗೆ ಕಿರುಕುಳ ನೀಡಿ ಅದನ್ನು ತಮ್ಮ ವಶಕ್ಕೆ ಪಡೆದುಕೊಳ್ಳುವ ಮೂಲಕ ಅರಣ್ಯ ಅಧಿಕಾರಿಗಳು ದೊಡ್ಡ ಮಟ್ಟದ ಭ್ರಷ್ಟಾಚಾರದಲ್ಲಿ ಇಳಿದಿದ್ದಾರೆ. ಹಣವಂತರು ಅಂತಹದೆ ಭೂಮಿಯಲ್ಲಿ ಗಣಿಗಾರಿಕೆ, ದೊಡ್ಡ ಹಫೋಟಲಗಳು, ಬಾರ್ ಐಂಡ್ ರೆಸ್ಟಾರೆಂಟ್‌ಗಳು, ಕಂಪನಿಗಳು, ಶಾಲೆ, ಕಾಲೇಜುಗಳು, ಶಾಪಿಂಗ್ ಮಾಲ್‌ಗಳು ಸೇರಿದಂತೆ ಬೃಹತ್ತಾದ ಉದ್ಯಮ ಆರಂಭಿಸಿದರೆ ಅವರ ವಿರೂದ್ಧ ಯಾವುದೇ ಕ್ರಮ ವಹಿಸದೆ ಗುಬ್ಬಿ ಮೇಲೆ ಬ್ರಹ್ಮಾಸ್ತ್ರಕ್ಕೆ ಡಿ.ಎಫ್.ಒ ವಾನತಿ ಕೈ ಹಾಕಿದ್ದಾರೆ ಎಂದು ಹರಿಹಾಯ್ದರು.

ಇತ್ತಿಚೀಗೆ ಅರಣ್ಯ ಸಚಿವರು ಹಾಗೂ ಜಿಲ್ಲಾ ಉಸ್ತುವಾರಿ ಮಂತ್ರಿ ಈಸ್ವರ ಖಂಡ್ರೆ ಅವರು ಅಮಾಯಕರ ವಿರೂದ್ಧ ಕ್ರಮ ಜರುಗಿಸಕೂಡದು ಎಂದು ಹೇಳಿದರೂ ಅವರ ಮಾತಿಗೆ ವಾನತಿ ಕವಡೆ ಕಾಸಿನ ಕಿಮ್ಮತ್ತು ನೀಡುತ್ತಿಲ್ಲ, ಬದಲಿಗೆ ಪ್ರಧಾನಿ ಖುದ್ದು ಬಂದು ಹೇಳಿದರೂ ಕೇಳುವವಳಲ್ಲ ಎಂದು ಉದ್ದಟತನ ಪ್ರದರ್ಶಿಸುತ್ತಿರುವರು. ರಾಜ್ಯ ಸರ್ಕರ ಇತ್ತಿಚೀಗೆ ಮತ್ತೊಂದು ಆದೇಶ ಹೊರಡಿಸಿ 3 ಎಕರೆ ಒಳಗಿರುವ ಜಮಿನು ಹೊಂದಿರುವ ದಲಿತರ ವಿರೂದ್ಧ ಯಾವುದೇ ಕ್ರಮ ಜರುಗಿಸುವಂತಿಲ್ಲ. ಅಂಥವರ ಜಮಿನು ವಶಪಡಿಸಿಕೊಂಡರು ಮರಳಿಸಬೇಕೆಂದು ಹೇಳಿದರೂ ಕ್ಯಾರೆ ಎನ್ನುತ್ತಿಲ್ಲ. ಆದ್ದರಿಂದ ದರ್ಪದಿಂದ ನಡೆದುಕೊಳ್ಳುವುದಲ್ಲದೇ ಭ್ರಷ್ಟಾಚಾರಕ್ಕೆ ಆಸ್ಪದ ನೀಡುತ್ತಿರುವ ಡಿ.ಎಫ್.ಓ ವಾನತಿ ಹಾಗೂ ಅವರ ಅಧಿನ ಅಧಿಕಾರಿಗಳ ವಿರೂದ್ಧ ಕಾನೂನು ರೀತಿಯ ಕ್ರಮ ಜರುಗಿಸಬೇಕೆಂದು ಕಂಟಿ ಸರ್ಕಾರವನ್ನು ಒತ್ತಾಯಿಸಿದರು.

ವಿವಿಧ ಸಂಘಟನೆಗಳ ಪ್ರಮುಖರಾದ ತುಕಾರಾಮ ಗೌರೆ, ನರ್ಸಿಂಗ ಸಾಮ್ರಾಟ, ರತಿನ್ ಕಮಲ್, ಹಣಮಂತ ಮಟ್ಟೆ, ಅಂಬೇಡ್ಕರ್ ಸಾಗರ, ರಮೆಶ ಗೌಡ ಸಾಗರ ಹಾಗೂ ಇತರರು ಪತ್ರಿಕಾಗೋಷ್ಟಿಯಲ್ಲಿ ಉಪಸ್ಥಿತರಿದ್ದರು.

# ಪ್ರಸ್ತುತ ಸನ್ನಿವೇಶದಲ್ಲಿ ಸಮಗ್ರ ಬೇಸಾಯ ಪದ್ದತಿ ಒಂದು ವರದಾನ: ಡಾ. ವಿ.ವಾಸುದೇವ ನಾಯ್ಕ



ಮಲ್ಲಮ್ಮ ನುಡಿ ವಾರ್ತೆ

ಕಲಬುರಗಿ:ಜ.1:ಕೃಷಿ ವಿಜ್ಞಾನ ಕೇಂದ್ರರದ್ದೇವಾಡ್ಗಿ,ಕೃಷಿ ವಿಸ್ತರಣಾ ಶಿಕ್ಷಣ ಕೇಂದ್ರ, ನಾಲವಾರ ಮತ್ತು ಸೇಡಂ ತಾಲೂಕಿನ ಯುವ ಕೃಷಿ ವೈಬವ, ಭಾಗೋಡಿ, ಇವರ ಸಂಯುಕ್ತಾ ಶ್ರಯದಲ್ಲಿ ತೊಗರಿ, ಜೋಳ, ಕಡಲೆ, ಕಬ್ಬು, ಪಪಾಯ ಮತ್ತು ಬಾಳೆ ಬೆಳೆಗಳ ತಾಂತ್ರಿಕ ಬೇಸಾಯದ ತರಬೇತಿ ಕಾರ್ಯಕ್ರಮವನ್ನು ಪರಮ ಪೂಜ್ಯ ಶ್ರೀ. ಶಾಂತವಿಶ್ವಗುರು ಮುರುಗರಾಜೇಂದ್ರ ಸ್ವಾಮಿಜಿ ಪಿಠಾಧಿಪತಿಗಳು, ಖಾಸಮಠ ಗುರುಮಿಠಕಲ್ ಹಾಗೂ ಬಾಗೋಡಿ ಇವರ ದಿವ್ಯಸಾನಿಧ್ಯದಲ್ಲಿ ನೇರವೆರಿಸಲಾಯಿತು.

ಮೊದಲಿಗೆಈಕಾರ್ಯಕ್ರಮವನ್ನುರೈತ ಗೀತೆಯಮೂಲಕಚಾಲನೆಗೋಳಿಸಿ, ಶ್ರೀ. ಶಿವುಕುಮಾರ ಕಲಬುರ್ಗಿ ಅವರು ವೇದಿಕೆ ಮೇಲಿರುವ ಎಲ್ಲಾಗಣ್ಯರನ್ನುಸ್ವಾಗತಿಸಿದರು. ಈ ಕಾರ್ಯಕ್ರಮವನ್ನು ಶ್ರೀ ಶರಣಗೌಡ ಪಾಟೀಲ್ ಮಾಜಿ ಅಧ್ಯಕ್ಷರು ತಾಲೂಕ ಪಂಚಾಯತಿ ಚಿತ್ತಾಪೂರ ಅವರು ಉದ್ಘಾಟನೆ ಮಾಡಿ, ಪ್ರಸ್ತುತ ಸನ್ನಿವೇಶದಲ್ಲಿ ವಾತಾವರಣದವೈಪರೀತ್ಯದಿಂದರೈತರ ಬೆಳೆಗಳು ಸರಿಯಾದ ರೀತಿಯಲ್ಲಿ ಇಳುವರಿ ಬರದಿರುವುದರಿಂದ ರೈತರು ವಾತವರಣ ವೈಪರೀತ್ಯಕ್ಕೆ ಹೊಂದುವಂತಹತಾಂತ್ರಿಕತೆಗಳನ್ನು ವಿಜ್ಞಾನಿಗಳ ಸಲಹೆಯಂತೆ ತಮ್ಮ ಕ್ಷೇತ್ರದಲ್ಲಿ ಅಳವಡಿಸಿಕೊಂಡು ಹೆಚ್ಚಿನ ಇಳುವರಿಯನ್ನು ಪಡೆಯಬೇಕೆಂದು ಹೇಳಿದರು.

ಮುಖ್ಯ ಅಥಿತಿಗಳಾದ ಡಾ. ಮಹಾಂತಗೌಡ ಪಾಟೀಲ್, ವಿಶ್ರಾಂತ ಕುಲಪತಿಗಳು, ಕೃಷಿ ವಿಜ್ಞಾನಗಳ ವಿಶ್ವವಿದ್ಯಾಲಯ ರಾಯಚೂರು ರವರು ರೈತರನ್ನು ಉದ್ದೇಶಿಸಿ ಮಾತನಾಡಿ ಏರುಪೇರು ಆಗುತ್ತಿರುವ ವಾತಾವರಣಕ್ಕೆ ಅನುಗುಣವಾಗಿ ವಿಜ್ಞಾನಿಗಳ ಸಲಹೆಯಂತೆ ಸೂಕ್ತವಾದ ತಳಿಗಳನ್ನುಆಯ್ಕೆಮಾಡಿಕೊಂಡು, ಸಸಿ ನಾಟಿಮಾಡುವುದರಿಂದ ಕಟಾವಿನ ವರೆಗೂ ವಿಜ್ಞಾನಿಗಳ ಸಲಹೆಯನ್ನುಪಡೆದು ಬೆಳೆಯನ್ನು ಬೆಳೆದರೆ ಉತ್ತಮ ಫಸಲನ್ನು ನೀರಿಕ್ಷೀಸಬಹುದುಮತ್ತುಯುವಕರು ಹೆಚ್ಚಿನ ಸಂಖ್ಯೆಯಲ್ಲಿ ಕೃಷಿಯತ್ತ ಮುಖ ಮಾಡಿದರೆ ನಮ್ಮ ದೇಶದ ಅಭಿವೃದ್ಧಿಯಾಗುವುದು ಎಂದು ಮ್ಮಅಥಿತಿ ಭಾಷಣದಲ್ಲಿ ತಿಳಿಸಿದರು. ಇನ್ನೊರ್ವ ಅಥಿತಿಗಳಾದ, ಡಾ. ವಾಸುದೇವ್ ನಾಯಕ್, ಹಿರಿಯ ವಿಜ್ಞಾನಿ ಮತ್ತು ಮುಖ್ಯಸ್ಥರು, ಕೃಷಿ ವಿಜ್ಞಾನಕೇಂದ್ರರದ್ದೆವಾಡ್ಗಿರವರು ತೋಟಗಾರಿಕೆ ಬೆಳೆಗಳಾದ ಬಾಳೆ, ಪಪಾಯ ಮತ್ತು ಇನ್ನಿತರ ತರಾಕಾರಿ ಬೆಳೆಗಳ ಸುಧಾರಿತ ತಳಿಗಳು ಮತ್ತು ಅವುಗಳು ಉತ್ಪಾದನ ತಾಂತ್ರಿಕತೆಗಳ ಬಗ್ಗೆ ಸವಿಸ್ತಾರವಾಗಿ ಮಾಹಿತಿಯನ್ನು ನೀಡಿದರು. ಡಾ. ಉಮೇಶ ಬಾರಿಕರ್ ಮುಖ್ಯಸ್ಥರು, ಕೃಷಿ ವಿಸ್ತರಣಾ ಶಿಕ್ಷಣ ಕೇಂದ್ರ ನಾಲವಾರರವರು ಕೃಷಿ ಮತ್ತು ತೋಟಗಾರಿಕೆ ಬೆಳೆಗಳಲ್ಲಿ ನೀರು ಮತ್ತು ಮಣ್ಣನ್ನು ಸಂರಕ್ಷಿಸುವುದು ಮತ್ತು ನೀರನ್ನು ಮಿತವಾಗಿ ಪೋಲಾಗದಂತೆ ವಿವಿಧಪದ್ಧತಿಗಳನ್ನು ಬೆಳೆಗಳಲ್ಲಿ ಅಳವಡಿಸಿಕೊಂಡು ಬೆಳೆಯುವುದರಿಂದ ಹೆಚ್ಚಿನ ಇಳುವರಿಯನ್ನುಪಡೆಯಬಹುದು ಎಂದು ಹೇಳಿದರು. ಡಾ. ಜಗದೀಶ ಪಾಟೀಲ್ ಈ ಕಾರ್ಯಕ್ರಮದ ಅಧ್ಯಕ್ಷತೆಯನ್ನುವಹಿಸಿ, ಇಂತಹ ಕಾರ್ಯಕ್ರಮಗಳು ಮೇಲಿಂದ ಮೇಲೆ ಹಮ್ಮಿಕೊಳ್ಳುವುದರಿಂದ ಯುವಕರು ಕೃಷಿಯತ್ತ ಮನಸ್ಸು ಮಾಡಲು ಉತ್ತೇಜನ ನೀಡುತ್ತದೆ ಮತ್ತು ಸಮಯಕ್ಕೆ ಸರಿಯಾಗಿ ರೈತರಿಗೆ ಮಾಹಿತಿ ದೊರಕಿ ಬೆಳೆ ಹಾನಿಯಾಗುವುದನ್ನು ತಡೆದು ಎಲ್ಲಾ ಬೆಳೆಗಳಲ್ಲಿ ಸುಸ್ಥಿರ ಇಳುವರಿಯನ್ನುಪಡೆಯುವುದರಲ್ಲಿ ಸಂದೇಹವಿಲ್ಲವೆಂದು ತಮ್ಮ ಅಧ್ಯಕ್ಷೀಯ ಭಾಷಣದಲ್ಲಿ ತಿಳಿಸಿದರು. ಕೊನೆಯದಾಗಿ ದೇವಿಂದ್ರ ನಾಟೀಕರ್‌ರವರು ವಂದನಾರ್ಪಣೆ ಮಾಡಿದರು. ತರಬೇತಿಯ ನಂತರ ರೈತರು ಮತ್ತು ವಿಜ್ಞಾನಿಗಳು ರೈತರಾದ ದೇವಿಂದ್ರಪ್ಪ ಮೈಲಾರಿರವರ ಹೊಲಕ್ಕೆ ಬೇಟಿನೀಡಿ ವಿವಿಧ ಬೆಳೆಗಳಾದ ತೊಗರಿ, ಕಬ್ಬು, ಬಾಳೆ ಬೆಳೆಗಳನ್ನು ವಿಕ್ಷಣೆ ಮಾಡಿ ಮಾಹಿತಿ ಪಡೆದರು. ಈ ಸಂದರ್ಭದಲ್ಲಿ ಗ್ರಾಮ ಪಂಚಾಯತ ಸದಸ್ಯರುಗಳಾದ ಮುತ್ತಣ್ಣ ಸಿರೂರ, ಜುಲಪೇಕರ್ ಖಾಜಿ, ಶ್ರೀಮತಿ ಚಂದ್ರಕಲಾ, ದೇವಿಂದ್ರ, ಶ್ರೀಮತಿ ಜಗದೇವಿ ಚಂದ್ರಶಾ ನಾಟೀಕರ್, ಶ್ರೀಮತಿ ಲಿಲಾವತಿ ಮಲ್ಲಿಕಾರ್ಜುನ ಎರಿ ಮತ್ತುಶ್ರೀಮತಿ ಸಂಗಿತಾ ದೇವಿಂದ್ರ ಹಾಜರಿದ್ದರು. ಮತ್ತು 80 ಕ್ಕಿಂತ ಹೆಚ್ಚಿನ ರೈತರು ಈ ತರಬೇತಿಯ ಸದುಪಯೋಗವನ್ನುಪಡೆದು-

# ಬಸವಾದಿ ಶರಣರು ಪ್ರಥಮ ಸಂಸತ್ತು ಕಲ್ಪನೆ ನೀಡಿದ್ದಾರೆ: ಪ್ರೀತಮ ಗುಡ್ಡಡಗಿ



ಮಲ್ಲಮ್ಮ ನುಡಿ ವಾರ್ತೆ

ಕಲಬುರಗಿ:ಜ.1:ಬಸವಾದಿಶರಣರು ಆಡಂಬರದ ಜೀವನ ಕಿತ್ತೆಸೆದು, ಸಮಾನತೆ ಉದಾರತಯಲ್ಲಿ ಮಿಂದೆದ್ದು ಕಾಯಕದ ಮಹತ್ವ ಜಗತ್ತಿಗೆ ಸಾರಿ ಪ್ರಥಮ ಸಂಸತ್ತು ಜಗತ್ತಿಗೆ ಅರ್ಪಿಸಿದ್ದಾರೆ ಎಂದು ಕುಮಾರ ಪ್ರೀತಮ್ ಶ್ರೀಶೈಲ ಗುಡ್ಡಡಗಿ ಹೇಳಿದರು.

ಕಲಬುರಗಿ ನಗರದ ಭವಾನಿ ನಗರದಲ್ಲಿರುವ ಬಬಲಾದ ಮಠದಲ್ಲಿ 243ನೇ ಸೋಮವಾರದ ಶಿವಾನುಭವಗೋಷ್ಠಿಕಾರ್ಯಕ್ರಮದಲ್ಲಿ "ಶರಣರು ನಿರ್ಮಿಸಿದ ಪ್ರಥಮ ಸಂಸತ್ತು" ವಿಷಯದ ಕುರಿತು ಮಾತನಾಡುತ್ತಾ12ನೇಶತಮಾನದಲ್ಲಿ ಶರಣರು ಯಾವುದೇ ಪ್ರಚಾರ ಬಯಸದೆ ನಿಸ್ವಾರ್ಥ ಮನಸ್ಸಿನಿಂದ ಸಮ ಸಮಾಜ ಕಟ್ಟಿದ್ದಾರೆ. ಆಚಾರ ವಿಚಾರದೊಂದಿಗೆ ಜೀವನ ಸಾಗಿಸಿ ಇಂದಿಗೂ ಅಮರರಾಗಿ ಉಳಿದಿದ್ದಾರೆ.

ವಿದ್ಯಾರ್ಥಿ, ಯುವಕರು ಶರಣರ ವಚನಗಳು ಪಚನ ಮಾಡಿಕೊಂಡು ಉತ್ತಮ ಸಮಾಜ ನಿರ್ಮಿಸಬೇಕು. ಕೇವಲ ಮಠಕ್ಕೆ, ಪೂಜೆಗೆ ಸೀಮಿತವಾಗದೆ ಗುರುಪಾದಲಿಂಗ ಶಿವಯೋಗಿಗಳು ಇಂತಹ ಸಂಸ್ಕಾರದ ಸಮಾಜ ನಿರ್ಮಿಸುತ್ತಿರುವ ಕಾರ್ಯ ಶ್ಲಾಘನೀಯ ಎಂದು ಹೇಳಿದರು.

ಮುಖ್ಯ ಅತಿಥಿಗಳಾಗಿ ಉದ್ದಿಮೆದಾರರಾದಬಲವಂತರಾಯ ಕಣ್ಣೂರ ಆಗಮಿಸಿದರು. ಇದೇ ಸಂದರ್ಭದಲ್ಲಿ ಬಾಲ ಸಾಹಿತಿ ಕುಮಾರ ಪ್ರೀತಮ್ ಎಸ್ ಗುಡ್ಡಡಗಿ ಅವರಿಗೆ ವಿಶೇಷವಾಗಿ ಗೌರವಿಸಲಾಯಿತು.

ಕಾರ್ಯಕ್ರಮದಲ್ಲಿ ನ್ಯಾಯವಾದಿ ಹಣಮಂತರಾಯ ಅಟ್ಟೂರ, ಮಾಣಿಕ ಮಿರ್ಕಲ್, ಶರಣು ವರನಾಳ, ಶಾಂತು ಕಲಬುರಗಿ, ಆನಂದ ಪಾಟೀಲ, ಕವಿತಾ ದೇಗಾಂವ, ಉಪನ್ಯಾಸಕರಾದ ಕಾಶಿನಾಥ ಪಾಟೀಲ, ಪ್ರಾಂಶುಪಾಲರಾದ ಶ್ರೀಶೈಲ ಗುಡ್ಡಡಗಿ, ಜಗದೇವಿ ಗುಡ್ಡಡಗಿ, ಕಸ್ತೂರಬಾಯಿ ಗುಡ್ಡಡಗಿ, ಜಗನ್ನಾಥ ಸಜ್ಜನ ಶೆಟ್ಟಿ, ಶರಣು ನಾಗೂರ, ಶಿವಕುಮಾರ ಸಾವಳಗಿ, ಗುರುರಾಜ ಹಸರಗುಂಡಗಿ, ಸಿದ್ದಣ್ಣ ವಾಡಿ, ಸಿಂಚನ ದೇಗಾಂವ ಸೇರಿದಂತೆ ಅನೇಕ ಜನ ಉಪಸ್ಥಿತರಿದ್ದರು.

# ಕಬ್ಬು ಕಟಾವಿಗೆ ರೈತರ ಪರದಾಟ ಧಾರಣೆ ಕಡಿತಗೊಳಿಸಿ ಖರೀದಿಸಿ

ಮಲ್ಲಮ್ಮ ನುಡಿ ವಾರ್ತೆ

ಕಮಲಾಪುರ,ಜ.1:ಕಬ್ಬು ಕಟಾವು ಸಾಗಣೆಯಲ್ಲಿ ದಲ್ಲಾಳಿಗಳ ಹಾವಳಿ ಹೆಚ್ಚಾಗಿದೆ. ಕಾರ್ಖಾನೆಯವರು ಸಹ ಕೈಚೆಲ್ಲಿ ಕುಳಿತಿದ್ದು, ರೈತರು ಸಂಕಷ್ಟ ಎದುರಿಸುವಂತಾಗಿದೆ.

ಆಳಂದ ತಾಲ್ಲೂಕಿನ ಭೂಸನೂರ ಕಾರ್ಖಾನೆ ಅಫಜಲಪುರ ತಾಲ್ಲೂಕಿನ ಕೆಪಿಆರ್ ಕಾರ್ಖಾನೆಗೆ ತಾಲ್ಲೂಕಿನ ರೈತರು ಕಬ್ಬು ಸಾಗಿಸುತ್ತಾರೆ. ಈ ಎರಡೂ ಕಾರ್ಖಾನೆಯ ಫೀಲ್ಡ್ ಮ್ಯಾನ್ ಗಳು ಜೂನ್-ಜುಲೈ ತಿಂಗಳಲ್ಲಿ ಕಬ್ಬು ಬೆಳೆದಿರುವ ಜಮೀನುಗಳಿಗೆ ಭೇಟಿ ನೀಡಿ ಸರ್ವೆ ಮಾಡಿ ಕಬ್ಬು ನಮ್ಮ ಕಾರ್ಖಾನೆಗೆ ಸಾಗಿಸುವುದಾಗಿ ಭರವಸೆ ಪ್ರತಿ ವರ್ಷ ಭರವಸೆ ನೀಡುತ್ತಾರೆ. ಕಟಾವು ಮಾಡಬೇಕಾದ ಸಮಯದಲ್ಲಿ ಕಾರ್ಮಿಕರನ್ನು ಕಳುಹಿಸುವುದಿಲ್ಲ. ರೈತರು ಕೇಳಿದರೆ ಇಂದು, ನಾಳೆ ಎಂದು ದಿನ ದೂಡುತ್ತಾರೆ. ಕೊನೆಗೆ ಕಾರ್ಖಾನೆ ಮುಚ್ಚುತ್ತವೆ. ರೈತರು ತಾವು ಬೆಳೆದ ಕಬ್ಬಿಗೆ ಬೆಂಕಿ ಹಚ್ಚಬೇಕಾದ ಪರಿಸ್ಥಿತಿ ಎದುರಾಗುತ್ತದೆ.

ಸದ್ಯ ತಾಲ್ಲೂಕಿನ ಕಬ್ಬು ಬೆಳೆಯ ಶೇ 80ರಷ್ಟು ಜಮೀನುಗಳಲ್ಲಿ ದಲ್ಲಾಳಿಗಳ ಕಾರ್ಮಿಕರೆ ಕಟಾವು ಮಾಡುತ್ತಿದ್ದಾರೆ. ಇವರಿದಾದಲ್ಲಿ ಕಾರ್ಖಾನೆಯವರು ತಮ್ಮ ಕಾರ್ಮಿಕರನ್ನು ಕಳುಹಿಸುವುದಿಲ್ಲ.



ಇಲ್ಲಿ ಕಾರ್ಖಾನೆಯ ಫೀಲ್ಡ್ ಮ್ಯಾನ್ ಗಳು ದಲ್ಲಾಳಿಗಳೊಂದಿಗೆ ಹೊಂದಾಣಿಕೆ ಮಾಡಿಕೊಂಡಿದ್ದಾರೆ. ರೈತರಿಂದ ಕಡಿಮೆ ದರದಲ್ಲಿ ಕಬ್ಬು ಖರೀದಿ ಮಾಡುವ ದಲ್ಲಾಳಿಗಳು ಈ ಫೀಲ್ಡ್ ಮ್ಯಾನ್ ಗಳಿಗೆ ಪಾಲು ಕೊಡುತ್ತಾರೆ. ದಲ್ಲಾಳಿಗಳಿಂದ ಹಣ ಪಡೆದ ಫೀಲ್ಡಮ್ಯಾನ್ ಕಾರ್ಮಿಕರನ್ನು ಕಳುಹಿಸದೆ ರೈತರನ್ನು ವಂಚಿಸುತ್ತಿದ್ದಾರೆ. ಅಲ್ಲಲ್ಲಿ ಕಟಾವು ಮಾಡುತ್ತಿರುವ ಕಾರ್ಖಾನೆಯ ಕೆಲ ಕಾರ್ಮಿಕರು ಸಹ ರೈತರಿಂದ ತಾವೆ ಕಬ್ಬು ಖರೀದಿ ಮಾಡುತ್ತಿದ್ದಾರೆ. ದಲ್ಲಾಳಿಗಳು ರೈತರ ಹೆಸರಿನಲ್ಲಿ ಕಬ್ಬು ಸಾಗಿಸದೇ ತಮ್ಮ ಹೆಸರಿನಲ್ಲಿಯೇ ಕಬ್ಬು ಕಳಿಸಿ ರೈತರಲ್ಲಿ ಆತಂಕ ಸೃಷ್ಟಿಸುತ್ತಿದ್ದಾರೆ. ಇದು ಕಾನೂನು ಬಾಹಿರ ಕೆಲಸವಾಗಿದ್ದು, ರೈತರಿಗೆ ಹಣ ಕೊಡುವುದಾಗಿ ನಂಬಿಸಿ ಮೋಸ ಮಾಡಿದರೆ ಯಾರು ಜವಾಬ್ದಾರರು? ಕೂಡಲೇ ಜಿಲ್ಲಾಧಿಕಾರಿ ದಲ್ಲಾಳಿಗಳು, ಕಾರ್ಖಾನೆ ವಿರುದ್ಧ ಕ್ರಮ ಕೈಗೊಳ್ಳಬೇಕು ಎಂದು ಜಿಲ್ಲಾ ಪಂಚಾಯಿತಿ ಮಾಜಿ ಸದಸ್ಯ ಬಸವರಾಜ ಮಾಲಿಪಾಟೀಲ ಒತ್ತಾಯಿಸಿದ್ದಾರೆ.

ದಲ್ಲಾಳಿಗಳು ಕಾರ್ಖಾನೆಗಿಂತ ಕಡಿಮೆ ದರ ನೀಡುವುದಲ್ಲದೆ. ಪ್ರತಿ ಎಕರೆಗೆ ರೂ 2500, ಮಖದಮ್ ರೂ 1000, ಪ್ರತಿ ಲೋಡ್ಗೆ ರೂ 1500 ಚಾಲಕನ ಭತ್ಯೆ ಪಡೆಯುತ್ತಿದ್ದಾರೆ. ಕೆಲ ರೈತರು ದಲ್ಲಾಳಿಗಳೊಂದಿಗೆ ಶಾಮೀಲಾಗಿದ್ದು, ಈ ಅಕ್ರಮ ನಿಯಂತ್ರಿಸುವುದು ಸವಾಲಿನ ಕೆಲಸವಾಗಿದೆ. ಕಬ್ಬು ಕಟಾವಿನಲ್ಲಿ ವಂಚನೆ, ಸಾಗಿಸುವಲ್ಲಿ ಕಳುವು, ತೂಕದಲ್ಲಿ ಮೋಸ, ಒಂದಾ? ಎರಡಾ ? ಎಲ್ಲೆಡೆ ರೈತನ ತಲೆ ಹೊಡೆಯುವವರೆ ತುಂಬಿದ್ದಾರೆ ಎಂದು ರೈತರು ಬೇಸರ ವ್ಯಕ್ತಪಡಿಸುತ್ತಿದ್ದಾರೆ.

ಕೂಡಲೇ ಕಾರ್ಖಾನೆಯ ಅಧಿಕಾರಿಗಳೊಂದಿಗೆ ಸಭೆ ನಡೆಸಿ ಫೀಲ್ಡಮ್ಯಾನ್ ಗಳ ಅಕ್ರಮ ಬಯಲಿಗೆಳೆಯಬೇಕು. ದಲ್ಲಾಳಿಗಳನ್ನುಕ್ರಮ ಕೈಗೊಂಡು ಆ ಕಾರ್ಮಿಕರನ್ನು ಕಾರ್ಖಾನೆ ಹೊಂದಿಸಿಕೊಳ್ಳಬೇಕು ಎಂದು ರೈತರು ಒತ್ತಾಯಿಸಿದ್ದಾರೆ.

# ದಾರ್ಶನಿಕ ಸಂತ ಡಾ. ಸಿದ್ದ ತೋಟೇಂದ್ರ ಶಿವಾಚಾರ್ಯರು:ಹೊನಕಲ

ಮಲ್ಲಮ್ಮ ನುಡಿ ವಾರ್ತೆ

ಕಲಬುರಗಿ:ಜ.1: ನಾಲವಾರ ಸದ್ಗುರು ಶ್ರೀಕೋರಿಸಿದ್ದೆಶ್ವರರು ಭಕ್ತರ ಪಾಲಿಗೆ ಕಲ್ಪವೃಕ್ಷವಿದ್ದಂತೆ ಅನ್ನುವ ಹಾಗೇ ಭಕ್ತರು ಇಲ್ಲಿಗೆ ಆಗಮಿಸಿ ಶೃದ್ಧಾಭಕ್ತಿಯಿಂದ ನಡೆದರೆ ಜೀವನದಲ್ಲಿ ಸದ್ಗುರು ಶ್ರೀಕೋರಿಸಿದ್ದೇಶ್ವರರು ಒಳ್ಳೆಯ ಬಾಳುನೀಡುವರು ಎಂದು ಜಾನಪದ ಸಾಹಿತಿ ಶ್ರೀಸಿದ್ರಾಮ ಹೊನಕಲ ಹೇಳಿದರು.

ಶ್ರೀಮಠದಲ್ಲಿ ಅಮವಾಸೆ ನಿಮಿತ್ಯ ಮಾಸಿಕ ಶಿವಾನುಭವ ಚಿಂತನೆಯ ಕಾರ್ಯಕ್ರಮದ ಅಥಿತಿ ಸ್ಥಾನ ವಹಿಸಿಕೊಂಡು ಮಾತನಾಡುತ್ತಾ ಶ್ರೀಮಠದ ಪೀಠಾಧಿಪತಿ ಡಾ. ಸಿದ್ದತೊ-



ಟೇಂದ್ರಶಿವಾಚಾರ್ಯರುಹೃದಯ ವೈಶಾಲ್ಯಹಾಗೂಪ್ರಭುದ್ಧತೆಯಿಂದ ಸಾಹಿತಿಗಳು ಕವಿಗಳಾಗಿ ಅನೇಕ ಪುಸ್ತಕಗಳುರಚಿಸಿಹೊರತಂದಿದಾರೆ. ಅಂತಹ ಶ್ರೀಗಳು ಭಕ್ತರಪಾಲಿಗೆ ಹಗಲು-ಇರುಳು ಶ್ರಮಿಸುವರು ಎಂದು ಹೇಳಿದರು.

ಡಾ. ಸಿದ್ದತೊಟೇಂದ್ರ ಶಿವಾಚಾರ್ಯರು ಆಶೀರ್ವಚನ ನೀಡುತಾ ಮೊದಲು ಶಿವಾನುಭವ ಚಿಂತನ ಗದಗ ಹುಬ್ಬಳ್ಳಿಯಲ್ಲಿ ಜರಗುವ ಸಮಾರಂಭಗಳು ನಮ್ಮ ಭಕ್ತರಿಗೆ ಶ್ರೀಮಠದಲ್ಲಿ ಶಿವಾನುಭವ ನಡೆಸುವ

# ಅಡವಿಬಾವಿ ಗ್ರಾಮದಲ್ಲಿ ಕ್ಷಯ ರೋಗ ನಿರ್ಮೂಲನೆ ಕುರಿತು ಜಾಗೃತಿ



ಮಲ್ಲಮ್ಮ ನುಡಿ ವಾರ್ತೆ

ಮಲ್ಲಮ್ಮನುಡಿವಾರ್ತೆಲಿಂಗಸುಗೂರು :ತಾಲೂಕಿನ 100 ದಿನಗಳ ಕ್ಷಯ ರೋಗ ನಿರ್ಮೂಲನೆ ಕುರಿತು ಜಾಗೃತಿ ಕಾರ್ಯಕ್ರಮ ವನ್ನು ಈಚನಾಳ ಆರೋಗ್ಯ ಕೇಂದ್ರ ವ್ಯಾಪ್ತಿಯ ಅಡವಿಬಾವಿ ಗ್ರಾಮದಲ್ಲಿ ಹಮ್ಮಿಕೊಳ್ಳಲಾಯಿತು. ಆರೋಗ್ಯ ಶಿಕ್ಷಣಾಧಿಕಾರಿ ಪ್ರಾಣೇಶ್ ಅವರು ಮಾತನಾಡಿ 100ದಿನಗಳ ಅಭಿಯಾನದಲ್ಲಿ ಎಲ್ಲಾ ಧೂಮಪಾನ ಮಾಡುವವರು. ಮಧುಮೇಹ ಇರುವವರು.60ವರ್ಷ ಮೇಲ್ಪಟ್ಟ ವರು , ಕಾರ್ಮಿಕರು, ಅಪೌಷ್ಠಿಕ ಮಕ್ಕಳು ,25 ಇರ ಗಿಂತ ಕಡಿಮೆ ತೂಕದ ವರನ್ನು ಆಯಾ ಗ್ರಾಮದಲ್ಲಿಯೇ ತಪಾಸಣೆ ಮಾಡಿ ಕಫ ಹಾಗೂ ಎಕ್ಸ್ ರೇ ಗೆ ತಾಲೂಕು ಆಸ್ಪತ್ರೆ, ಸಮುದಾಯ ಆರೋಗ್ಯ ಕೇಂದ್ರಕ್ಕೆ ರೆಫರ್ ಮಾಡಲಾಗುವುದು ಎಂದು ಹೇಳಿದರು.ಸಾರ್ವಜನಿಕರು ಜನ ಪ್ರತಿನಿಧಿಗಳು ಕ್ಷಯ ರೋಗ ನಿರ್ಮೂಲನೆಗೆ ಕೈ ಜೋಡಿಸಲು ಕೋರಿದರು. ಕ್ಷಯ ರೋಗ ಮೇಲ್ವಿಚಾರಕ ರವಿಕುಮಾರ್

ಹೂಗಾರ ಅವರು ಮಾತನಾಡಿ ಕ್ಷಯ ರೋಗ ಲಕ್ಷಣಗಳು ಎರಡು ವಾರಕ್ಕಿಂತ ಹೆಚ್ಚಿನದಿನಗಳ ಕಫದೊಂದಿಗಿನ ಕೇಮ್ಮು. ಕಫದಲ್ಲಿ ಆಗಾಗ್ಗೆ ರಕ್ತಕಾಣುವುದು. ಹಸಿವಾಗದಿರುವದು.ಜ್ವರ, ತೂಕ ಕಡಿ ಮೆಯಾಗುವಿಕೆ ಪ್ರಮುಖ ಲಕ್ಷಣ ಗಳಾಗಿವೆ. ಇಂತಹ ಲಕ್ಷಣ ಇರುವವರು ಇಲಾಖೆಯಿಂದ ದೊರೆಯುವ ಸಂಪೂರ್ಣ ಉಚಿತ ಚಿಕಿತ್ಸೆ ಪಡೆಯಲು ತಿಳಿಸಿದರು.

ಈ ಸಂದರ್ಭದಲ್ಲಿ ಮಾನಸಿಕ ಆರೋಗ್ಯಕಾರ್ಯಕರ್ತೆ ಮಂಜುಳಾ, ಸಮುದಾಯ ಆರೋಗ್ಯ ಅಧಿಕಾರಿ ಹರಿತಾ,ಆರೋಗ್ಯ ನಿರೀಕ್ಷಣಾಧಿಕಾರಿಗಳಾದ ಜಗದೀಶ, ಮಲ್ಲಮ್ಮ,ಆಶಾ ಹನುಮಂತಿ ಸೇರಿದಂತೆ ಇತರರು ಇದ್ದರು

# ವಿಶ್ವಕರ್ಮ ಅಮರ ಶಿಲ್ಪಿ ಜಕಣಾಚಾರಿ ಸಂಸ್ಕರಣಾ ದಿನಾಚರಣೆ ಸರಳವಾಗಿ ಆಚರಣೆ



ಮಲ್ಲಮ್ಮ ನುಡಿ ವಾರ್ತೆ

ಕಲಬುರಗಿ: ಜ.01-ಕಲಬುರಗಿ ಜಿಲ್ಲಾಡಳಿತ, ಕನ್ನಡ ಮತ್ತು ಸಂಸ್ಕೃತಿ ಇಲಾಖೆ ಮಹಾನಗರ ಪಾಲಿಕೆ ಹಾಗೂ ಜಿಲ್ಲಾ ಪಂಚಾಯತ ಇವರುಗಳ ಸಂಯುಕ್ತಾಶ್ರಯದಲ್ಲಿ ಬುಧುವಾರದಂದು ಡಾ.ಎಸ್. ಎಂ. ಪಂಡಿತ್ ರಂಗಮಂದಿರದಲ್ಲಿ ವಿಶ್ವಕರ್ಮ ಅಮರ ಶಿಲ್ಪಿ ಜಕಣಾಚಾರಿ ರವರ ಸಂಸ್ಕರಣಾ ದಿನಾಚರಣೆ ಆಚರಿಸಲಾಯಿತು.

ಮಾಜಿ ಪ್ರಧಾನಮಂತ್ರಿ ಡಾ. ಮನಮೋಹನ್ ಸಿಂಗ್ ಅವರ ನಿಧನದಿಂದ ರಾಷ್ಟ್ರದಾದ್ಯಂತ ಶೋಕಾಚರಣೆ ಹಿನ್ನಲೆಯಲ್ಲಿ ವಿಶ್ವಕರ್ಮ ಅಮರಶಿಲ್ಪಿ ಜಕಣಾಚಾರಿ ಅವರ ಭಾವಚಿತ್ರಕ್ಕೆ ಪೂಜೆ ಸಲ್ಲಿಸಿ ಗೌರವ ಸಲ್ಲಿಸುವ ಮೂಲಕ ಸರಳವಾಗಿ ಜಯಂತಿ ಆಚರಣೆ ಮಾಡಲಾಯಿತು.

ವಿಶ್ವಕರ್ಮ ಮೂರುಝಾವಧೀಶ್ವರ ಮಠ ಸಿಂದಗಿ ಮತ್ತು ಆಲಮೇಲ, ಪರಮ ಪೂಜ್ಯ ಶ್ರೀ ಶ್ರೀ ರಾಮಚಂದ್ರಮಹಾಸ್ವಾಮಿಜಿಗಳು, ವಿಶ್ವಕರ್ಮ ಏಕದಂಡಗಿ ಮಠ ಸೂಲೆಪೇಟ ಪರಮ ಪೂಜ್ಯ ಶ್ರೀ ಶ್ರೀದೊಡ್ಡೇಂದ್ರ ಮಹಾಸ್ವಾಮಿಗಳು,

ಅಫಜಲಪೂರ ವಿಶ್ವಕರ್ಮ ಮೂರುಝುವಧೀಶ್ವರ ಮಠ, ವಿಶ್ವಕರ್ಮ ಏಕದಂಡಗಿ ಮಠ ಸೂಲೆಪೇಟ, ಪರಮಪೂಜ್ಯ ಶ್ರೀ ಪ್ರಣವ ನಿರಂಜ ಮಹಾಸ್ವಾಮಿಗಳು, ಪರಮ ಪೂಜ್ಯ ಶ್ರೀ ಶ್ರೀ ಬ್ರಹ್ಮಾನಂದ ಮಹಾಸ್ವಾಮಿಜಿಗಳು, ಕನ್ನಡ ಮತ್ತು ಸಂಸ್ಕೃತಿ ಇಲಾಖೆಯ ಸಹಾಯಕ ನಿರ್ದೇಶ ದತ್ತಪ್ಪ ಸಾಗನೂರ ಉತ್ಸವ ಸಮಿತಿಯ ಅಧ್ಯಕ್ಷರಾದ ದೇವಿಂದ್ರ ದೇಸಾಯಿ ಕಲ್ಲೂರ, ಸಮಾಜ ಮುಖಂಡರಾದ ಲೋಹಿತ ವಾಹಿ ಕಲ್ಲೂರ, ಅಶೋಕ ಎಸ್.ಪೊದ್ದಾರ, ಕಮಲಾಕರ ವಿಶ್ವಕರ್ಮ ಅರಣಕಲ, ನರಸಿಂಗರಾವ ಹೇಮನೂರ, ಕಲಬುರಗಿ ಜಿಲ್ಲೆಯ ವಿವಿಧ ತಾಲ್ಲೂಕಿನ ಪದಾಧಿಕಾರಿಗಳು ವಿವಿಧ ತಾಲ್ಲೂಕುಗಳು ಅಧ್ಯಕ್ಷರು ಪಧಾಧಿಕಾರಿಗಳು ಭಾಗವಹಿಸಿದ್ದರು.

# ಜ 3 ರಂದು ಸಾವಿತ್ರಿಬಾಯಿ ಫುಲೆ ಜನ್ಮ ದಿನಾಚರಣೆ ಅಂಗವಾಗಿ ಪ್ರಬಂಧ ಸ್ಪರ್ಧೆ: ಕಾಲೇಕರ



ಮಲ್ಲಮ್ಮ ನುಡಿ ವಾರ್ತೆ

ಕಮಲನಗರ:ದೇಶದ ಮೊದಲ ಮಹಿಳಾ ಶಿಕ್ಷಕಿ, ಮಹಿಳಾ ಹಕ್ಕುಗಳ ಹೋರಾಟಗಾರ್ತಿ ಸಾವಿತ್ರಿಬಾಯಿ ಫುಲೆ ಅವರ ಜನ್ಮದಿನಾಚರಣೆ ಅಂಗವಾಗಿ ಡಾ. ಬಿ. ಆರ್. ಅಂಬೇಡ್ಕರ್ ಧಮ್ಮಧಾತು ಬುದ್ದಿಷ್ಟ ಚಾರಿಟೇಬಲ್ ಟ್ರಸ್ಟ್‌ವತಿಯಿಂದ ಜನವರಿ 03 ರಂದು ಗುರಪ್ಪ ಟೊಣ್ಣೆ ಪ್ರಾಥಮಿಕ ಮತ್ತು ಪ್ರೌಢ ಶಾಲೆಯಲ್ಲಿ ಪ್ರಬಂಧ ಸ್ಪರ್ಧೆ ಆಯೋಜಿಸಲಾಗಿದೆ ಎಂದು ಸಂಘದ ಅಧ್ಯಕ್ಷ ಬಾಲಾಜಿ ಕಾಲೇಕರ ಅವರು ಹೇಳಿದರು.

ಸ್ಪರ್ಧೆಯ ನಿಯಮಗಳು: ತಾಲೂಕಿನ ಸ್ಪರ್ಧೆಯಲಿ 5ನೇ ತರಗತಿ ಯಿಂದ 7ನೇ ತರಗತಿ ಮತ್ತು 8ನೇ ತರಗತಿ ಯಿಂದ 10ನೇ ತರಗತಿವರೆ ಎರಡೂ ಹಂತದಲ್ಲಿ ವಿದ್ಯಾರ್ಥಿಗಳು ಭಾಗವಹಿಸಬಹುದು. ಪ್ರಬಂಧ ಕನ್ನಡ, ಮರಾಠಿ, ಇಂಗ್ಲೀಷ್ ಅಥವಾ ಉರ್ದು ಭಾಷೆ ಯಲ್ಲಿ ಬರೆಲು ಅವಕಾಶ ಇದೆ. ಭಾಗವಹಿಸುವ ವಿದ್ಯಾರ್ಥಿಗಳಿಗೆ ಯಾವುದೆ ರೀತಿಯ ಶುಲ್ಕ ಇರುವುದಿಲ್ಲ.

ಪ್ರಬಂಧ ಸ್ಪರ್ಧೆಯಲ್ಲಿ ಭಾಗವಹಿಸಿದ ಎಲ್ಲಾ ವಿದ್ಯಾರ್ಥಿಗಳಿಗೆ ಅಭಿನಂದನಾ ಪ್ರಮಾಣ ಪತ್ರ ನೀಡಲಾಗುವುದು.

ಪ್ರಥಮ ಬಹುಮಾನ 2000 ಸಾವಿರ ರೂ., ದ್ವಿತೀಯ ಬಹುಮಾನ 1500 ಸಾವಿರ ರೂ., ತೃತೀಯ ಬಹುಮಾನ 1000 ಸಾವಿರ ರೂ. ನೀಡಿ ಗೌರವಿಸಲಾಗುವುದು.

ಸ್ಪರ್ಧೆಯಲ್ಲಿ ಪಾಲ್ಗೊಳ್ಳುವರು ಹೆಸರು ನೋಂದಾಯಿಸಲು ಸೂರ್ಯಕಾಂತ ಕಾಲೇಕರ್ : 8792929337. ಡಾ. ಬಾಲಾಜಿ ಸೋಪುರ್ 9606352276 ಭರತ 7338191358/97438847344 ಸಂಪರ್ಕಿಸಬಹುದು. ಚಾರಿಟೇಬಲ್ ಟ್ರಸ್ಟ್ ಕಾವ್ಯದರ್ಶಿ ಯಶವಂತ್, ಭರತ ಇದ್ದರು.

# ಶಾಂತಿನಿಕೇತನ ಶಾಲೆಯಲ್ಲಿ ಹೊಸ ವರ್ಷ ಆಚರಣೆ



ಮಲ್ಲಮ್ಮ ನುಡಿ ವಾರ್ತೆ

ಕೊಪ್ಪಳ : ಜಿಲ್ಲೆಯ ಮಂಗಳೂರು ಗ್ರಾಮದ ಶ್ರೀ ಮಂಗಳೇಶ್ವರ ಶಿಕ್ಷಣ ಸಂಸ್ಥೆ(ರಿ) ಶಾಂತಿನಿಕೇತನ ಹಿರಿಯ ಪ್ರಾಥಮಿಕ ಶಾಲೆಯಲ್ಲಿ ಸಂಸ್ಥೆಯವರು, ಶಿಕ್ಷಕರು, ಮಕ್ಕಳು ಸೇರಿ ಹೊಸ ವರ್ಷದ ಸಂಭ್ರಮಾಚರಣೆ ಕೇಕ್ ಕತ್ತರಿಸುವ ಮೂಲಕ ಹೊಸ ವರ್ಷದ ಆಚರಣೆ ಮಾಡಿದರು.

ಈ ಸಂದರ್ಭದಲ್ಲಿ ಸಂಸ್ಥೆಯ ಕಾರ್ಯದರ್ಶಿ ರವೀಂದ್ರನಾಥ ಕೊಟ್ರಪ್ಪ ತೋಟದ, ಶಿಕ್ಷಕರಾದ ಶರಣಪ್ಪ ಗೊಂಡಬಾಳ, ವಿರೇಶ ಕುಂಬಾರ, ದೀಪಾ ಬಾರಕೇರ, ಗಾಯತ್ರಿ ತೊಂಡಿಹಾಳ, ನಾಗರತ್ನ, ಶಾರದಾ ಕೆಂಚನಗೌಡ್ರ, ಸೋಪಿಯಾ, ಫರ್ವಿನ್, ಆಯಾ ಮುದಕಮ್ಮ ಹಡಪದ, ಪಾಲಕರ ಪ್ರತಿನಿಧಿ ನಾಗನಗೌಡ್ರ ಪೋಲೀಸಪಾಟೀಲ, ಮುದ್ದು ಮಕ್ಕಳು ಹಾಜರಿದ್ದರು.

# ಬಳ್ಳಾರಿ ಹಾಲು ಒಕ್ಕೂಟದ ಎಂಡಿ ಬದಲಾವಣೆ

ಮಲ್ಲಮ್ಮ ನುಡಿ

ಬಳ್ಳಾರಿ, ಜ.01: ಇಲ್ಲಿನ ರಾಯಚೂರು, ಬಳ್ಳಾರಿ, ಕೊಪ್ಪಳ ಮತ್ತು ವಿಜಯನಗರ ಜಿಲ್ಲೆಗಳ ಹಾಲು ಒಕ್ಕೂಟದ ವ್ಯವಸ್ಥಾಪಕ ನಿರ್ದೇಶಕರನ್ನು ಬದಲಾವಣೆ ಮಾಡಲಾಗಿದೆ.

ಈ ಮೊದಲು ಪೀರಂತ್‌ನಾಯ್ಕ ಅವರು ಕಾರ್ಯನಿರ್ವಹಿಸುತ್ತಿದ್ದರು. ಇಲ್ಲಿ ಚುನಾಯಿತ ಆಡಳಿತ ಮಂಡಳಿ ಅಸ್ತಿತ್ವದಲ್ಲಿ ಇಲ್ಲದ ಕಾರಣ ಯಾವುದೇ ಮಹತ್ವದ ನಿರ್ಣಯಗಳನ್ನು ತೆಗೆದುಕೊಳ್ಳಲು ಆಗುತ್ತಿಲ್ಲ. ಆದರೂ ಕೆಲ ವಿಚಯಗಳಿಗೆ ಟೆಂಡರ್ ಕರೆಯಬೇಕೆಂಬ ಒತ್ತಡಕ್ಕೆ ಮಣಿಯದ ಕಾರಣ ವರ್ಗಾವಣೆ ಮಾಡಿಸಿದ್ದಾರೆ ಎಂದು ಹೇಳಲಾಗುತ್ತಿದೆ.

# ಎಳ್ಳ ಅಮಾವಾಸ್ಯೆ : ಭೂತಾಯಿಗೆ

ಮಲ್ಲಮ್ಮ ನುಡಿ ವಾರ್ತೆ

ಔರಾದ್:ಡಿ.31:ತಾಲ್ಲೂಕಿನಾದ್ಯಂತ ಸೋಮವಾರ ರೈತರ ಸುಗ್ಗಿ ಹಬ್ಬ ಎಳ್ಳ ಅಮಾವಾಸ್ಯೆ ಸಡಗರ ಸಂಭ್ರಮದಿಂದ ಆಚರಿಸಲಾಯಿತು.

ರೈತರು ಬೆಳಿಗ್ಗೆ ತಲೆಯ ಮೇಲೆ ಬುಟ್ಟಿ ಅಂಬಲಿ ಕೊಡ ಎತ್ತಿಕೊಂಡು ಹೊಲಕ್ಕೆ ತೆರಳಿ ಗುಡಿಸಲಿಗೆ



ಪೂಜೆ ಸಲ್ಲಿಸಿ ಹಾಗೂ ಪಾಂಡವರಿಗೆ ಪೂಜೆ ಸಲ್ಲಿಸಿ ಭೂತಾಯಿಗೆ ನಮಿಸಿ ಎಳ್ಳ ಅಮಾವಾಸ್ಯೆ ಆಚರಿಸಿದರು.

ನಂತರ ಸಾಮೂಹಿಕವಾಗಿ ಕುಟುಂಬ ಸಂಬಂಧಿಗಳ ಜೊತೆ-ಗೆ ಎಳ್ಳ ಅಮಾವಾಸ್ಯೆ ನಿಮಿತ್ತ ಮಾಡಿದ ವಿಶೇಷ ಖಾದ್ಯಗಳಾದ ಭಜ್ಜಿ, ರೊಟ್ಟಿ, ಹೋಳಿಗೆ, ಕಡಬು, ಜೋಳದ ಅನ್ನ, ಹುಗ್ಗಿ, ಅಂಬಲಿ ಸವಿದು ಹಬ್ಬ ಆಚರಿಸಿದರು.

## ಸಾಹಿತ್ಯ ಸಮ್ಮೇಳನ ಯಶಸ್ಸಿಗೆ ಸಹಕಾರ: ತಹಸೀಲದಾರ ಅಣ್ಣಾರಾವ ಪಾಟೀಲ



ಮಲ್ಲಮ್ಮ ನುಡಿ ವಾರ್ತೆ

ಆಳಂದ:ಜ.1: ತಾಲೂಕಿನ ಗಡಿಗ್ರಾಮ ಹಿರೋಳಿಯಲ್ಲಿ ಹಮ್ಮಿಕೊಂಡಿರುವ ಆಳಂದ ತಾಲೂಕು 12ನೇ ಕನ್ನಡ ಸಾಹಿತ್ಯ ಸಮ್ಮೇಳನಕ್ಕೆ ತಾಲೂಕು ಆಡಳಿತದ ವತಿಯಿಂದ ಸಂಪೂರ್ಣ ಸಹಕಾರ ನೀಡಲಾಗುವುದು ಎಂದು ಆಳಂದ ತಹಸೀಲದಾರ ಅಣ್ಣಾರಾಯ ಪಾಟೀಲ ಹೇಳಿದರು.

ಮಂಗಳವಾರ ತಾಲೂಕು ದಂಡಾಧಿಕಾರಿಗಳ ಕಚೇರಿಯಲ್ಲಿ ಸಮ್ಮೇಳನದ ಆಹ್ವಾನ ಪತ್ರಿಕೆ ಬಿಡುಗಡೆಗೊಳಿಸಿ ಮಾತನಾಡಿದರು. ತಾಲೂಕಿನ ಸಾಹಿತ್ಯಿಕ ಸಮಸ್ಯೆಗಳನ್ನು ಸರ್ಕಾರದ ಗಮನ ಸೆಳೆಯುವ ಮೂಲಕ ಅಭಿವೃದ್ಧಿಗೆ ಪೂರಕವಾಗುವ ನಿಟ್ಟಿನಲ್ಲಿ ಯಶಸ್ವಿಗೊಳಿಸಲು ಉತ್ತಮ ವೇದಿಕೆ. ಸಮ್ಮೇಳನ ಯಶಸ್ವಿಯಾಗಿ ಆಚರಿಸಲು ಎಲ್ಲರ ಸಹಕಾರ ಅಗತ್ಯ ಎಂದು ತಿಳಿಸಿದರು.

ಸಮ್ಮೇಳನ ಬರಿ ಸಾಹಿತ್ಯದ ಜಾತ್ರೆಯಾಗದೆ ನಾಡಿನ ಕಲೆ, ಸಂಸ್ಕೃತಿ ಹಾಗೂ ತಾಲೂಕಿನ ಸಮಸ್ತ ವಿಚಾರಗಳನ್ನು ನಾಡಿಗೆ ತಿಳಿಸುವ ರೀತಿ ಸಮರ್ಥ ಹಾಗೂ ಅರ್ಥಪೂರ್ಣವಾಗಿ ಆಚರಿಸಲು ಎಲ್ಲರೂ ಪಕ್ಷಭೇದ ಮರೆತು ನಾಡು ನುಡಿಯ ತೇರನ್ನು ಎಳೆಯಲು ಕೈಜೋಡಿಸಬೇಕು ಎಂದರು.

ಕಸಾಪ ಅಧ್ಯಕ್ಷ ಹಣಮಂತ ಶೇರಿ ಮಾತನಾಡಿ, ಸಮ್ಮೇಳನವನ್ನು ಒಂದು ದಿನ ಅರ್ಥಪೂರ್ಣವಾಗಿ ಅದ್ದೂರಿಯಾಗಿ ಆಚರಿಸಲು ಈಗಾಗಲೇ ಕಾರ್ಯಕಾರಿ ಮಂಡಳಿ ನಿರ್ಧರಿಸಿದೆ. ಸಮ್ಮೇಳನ ಯಶಸ್ಸಿಗೆ ಎಲ್ಲರೂ ಕೈಜೋಡಿಸಿ ಕನ್ನಡ ತಾಯಿ ತೇರನ್ನು ಸಂಭ್ರಮ, ಸಡಗರದಿಂದ ಎಳೆಯೋಣ ಎಂದು ಸಮ್ಮೇಳನದ ರೂಪ ರೇಷೆಗಳನ್ನು ವಿವರಿಸಿದರು.

ಈ ಸಂದರ್ಭದಲ್ಲಿ ಕಸಾಪ ಸಂಘಟನಾ ಕಾರ್ಯದರ್ಶಿ ಸುಧಾಕರ ಖಾಂಡೇಕರ್, ರವಿ ಪಟ್ಟಣಶೆಟ್ಟಿ, ಆಕಾಶ ಅಂಕಲಗಿ ಸೇರಿದಂತೆ ಇತರರು ಇದ್ದರು.



ಬಸವಕಲ್ಯಾಣ :- ಇಲ್ಲಿನ ಬಂದವರ ಓಣಿಯ ಬಿ. ಕೆ. ಡಿ. ಬಿ. ಕಲ್ಯಾಣ ಮಂಟಪದಲ್ಲಿ ಬಟಗೇರಾದ ನಿವೃತ್ತ ಉಪನ್ಯಾಸಕಿ ಇಂದು ಮತಿ ಹಾಗೂ ಗುರುಲಿಂಗಪ್ಪ ಅಪಗುಂಡೆ ಯವರ ವಿವಾಹ ಸುವರ್ಣಾ ವಾರ್ಷಿಕ ಮಹೋತ್ಸವ ಸಮಾರಂಭದಲ್ಲಿ ಪತ್ರಕರ್ತರಾದ ನಾಗಪ್ಪಾ ನಿಣ್ಣೆ ಯವರಿಗೆ ಗುರುಮಠಕಲ್ ಶಾಖಾ ಮಠದ ಪೂಜ್ಯ ಶ್ರೀ ಶಾಂತವೀರ ಮುರಘಾ ರಾಜೇಂದ್ರ ಮಹಾಸ್ವಾಮಿಗಳು ಸನ್ಮಾನಿಸಿದರು. ಚಿತ್ರದಲ್ಲಿ ವಿದ್ಯಾಸಾಗರ ಅಪಗುಂಡೆ. ನ್ಯಾಯವಾದಿ ಮನೋಜ ಮುಡಬಿಕರ್. ಲಕ್ಷ್ಮೀಕಾಂತ ಚೆಂಚುರೆ ಖಜುರಿ ಸೇರಿದಂತೆ ಇನ್ನಿತರರು ಕಾಣಬಹುದು. (ಮಲ್ಲಮ್ಮ ನುಡಿ ಚಿತ್ರ)

## ಮಕ್ಕಳಿಗೆ ಪ್ರತಿಭಾ ಪುರಸ್ಕಾರಗಳು ಯಶಸ್ಸಿನ ದಾರಿದೀಪ : ಶರಬಯ್ಯ ಶಿರೂರಮಠ



ಮಲ್ಲಮ್ಮ ನುಡಿ ವಾರ್ತೆ

ಕೊಪ್ಪಳ: ಕುಕನೂರ ತಾಲೂಕಿನ ದ್ಯಾಂಪುರ ಸರ್ಕಾರಿ ಹಿರಿಯ ಪ್ರಾಥಮಿಕ ಶಾಲೆಯಲ್ಲಿ ಪ್ರತಿವರ್ಷ ಎಂಟನೇ ತರಗತಿಯಲ್ಲಿ ಅತಿ ಹೆಚ್ಚು ಅಂಕಗಳನ್ನು ಪಡೆಯುವ ವಿದ್ಯಾರ್ಥಿಗಳಿಗೆ ಪ್ರೋತ್ಸಾಹ ಧನವನ್ನು ಸಮರ್ಪಿಸುವ ಕಾರ್ಯಕ್ರಮವನ್ನು ಉದ್ದೇಶಿಸಿ ಶಾಲಾ ಸುಧಾರಣಾ ಸಮಿತಿ ಅಧ್ಯಕ್ಷ ಶರಭಯ್ಯ ಶಿರೂರುಮಠ ಮಾತನಾಡುತ್ತಾ ಮಕ್ಕಳಿಗೆ ಪ್ರತಿಭಾ ಪುರಸ್ಕಾರಗಳು ಹಾಗೂ ಸಾಧಕರಿಗೆ ಇಂತಹ ಯಶಸ್ಸಿನ ದಾರಿದೀಪಗಳಾಗಿದ್ದು ಇದನ್ನು ನೋಡಿದ ಕಿರಿಯ ವಿದ್ಯಾರ್ಥಿಗಳು ಸಹ ಪೈಪೋಟಿಯ ಮೇಲೆ ಉತ್ತಮ ಸಾಧನೆಗೈಯಲು ಮುಂದಾಗುತ್ತಾರೆ ಎಂದು ತಿಳಿಸಿದರು.

ಶಾಲೆಯ ಶಿಕ್ಷಣ ಪ್ರೇಮಿಯಾದ ಶಿವಯ್ಯ ಶಶೀಮಠ ಮಾತನಾಡುತ್ತಾ ಇದೇ ಶಾಲೆಯಲ್ಲಿ ಶಿಕ್ಷಣವನ್ನು ಮುಗಿಸಿ ಸದ್ಯ ರಾಯಚೂರು ಜಿಲ್ಲಾ ಅಪರ ಜಿಲ್ಲಾಧಿಕಾರಿಯಾಗಿ ಕಾರ್ಯನಿರ್ವಹಿಸುತ್ತಿರುವ ದುರುಗೇಶ್ ರುದ್ರಾಕ್ಷಿ ಅವರು ತಾವು ಕಲಿತ ಶಾಲೆಯ ಮಕ್ಕಳು ಆಸಕ್ತಿಯಿಂದ ಶೈಕ್ಷಣಿಕ ಸಾಧನೆ ಎಂಬ ಉದ್ದೇಶದಿಂದ ಪ್ರತಿವರ್ಷ ಹೆಚ್ಚು ಅಂಕ ಪಡೆಯುವ ಬಾಲಕ ಬಾಲಕಿಯರಿಗೆ ಪ್ರೋತ್ಸಾಹ ಧನ ನೀಡುತ್ತಾ ಬಂದಿದ್ದು ಅವರು ನೀಡಿದ ಪ್ರೋತ್ಸಾಹ ಧನವನ್ನು ಇಂದು ವಿದ್ಯಾರ್ಥಿಗಳಿಗೆ ವಿತರಿಸಲಾಗುತ್ತಿದೆ ಎಂದು ತಿಳಿಸಿದರು.

ಈ ವೇಳೆಯಲ್ಲಿ ಜಂಬಣ್ಣ ರುದ್ರಕ್ಷ ಮಾತನಾಡುತ್ತಾ ಮಕ್ಕಳು ತಮ್ಮ ಮನಸ್ಸನ್ನು ಚಂಚಲ ಗೊಳಿಸದೆ ತಮ್ಮನ್ನು ವಿದ್ಯಾಭ್ಯಾಸದಲ್ಲಿ ತೆ-ೂಡಗಿಸಿ ಕೊಂಡಾಗ ಯಶಸ್ಸು ಸಾಧ್ಯ. ಆದಷ್ಟು ಪಾಲಕರು ಮಕ್ಕಳಿಂದ ಮೊಬೈಲ್ ಫೋನನ್ನು ದೂರವಿರಿಸುವುದು ಅತ್ಯಂತ ಶ್ರೇಷ್ಠದಾಯಕ ವಿಚಾರವಾಗಿದ್ದು ಮೊಬೈಲ್ ಬಳಕೆಯ ಮಾಡುವ ವಿದ್ಯಾರ್ಥಿಗಳು ಯಶಸ್ಸು ಸಾಧಿಸಲು ಕಷ್ಟ ಸಾಧ್ಯವಾದ ಪರಿಸ್ಥಿತಿ ಎದುರಿಸಬೇಕಾಗುತ್ತದೆ ಎಂದು ಕಿವಿಮಾತು ಹೇಳಿದರು.

ಈ ವೇಳೆಯಲ್ಲಿ ಕೃಷ್ಣಯ್ಯ ರುದ್ರಾಕ್ಷಿ, ಸಣ್ಣ ಜಂಬಣ್ಣ ರುದ್ರಾಕ್ಷಿ, ಸುರೇಶ್ ಸದರಿ, ಹೊನ್ನಪ್ಪ ಮರಡಿ, ದೇವಪ್ಪ ಮರಡಿ, ಭೀಮರೆಡ್ಡಿ ಬಿಡ್ನಾಳ್, ನಾಗರಾಜ್ ಮಂಡಲಗೇರಿ, ಅಬ್ದುಲ್ ಕದಿರಿ, ತ್ರಿವಿಕ್ರಮಾನಂದ ವಾಲಿ, ಶಿಕ್ಷಕಿಂ-ಯರಾದ ಕವಿತಾ, ಗೀತಾ , ರೇಣುಕಾ, ಪುಷ್ಪಲತಾ, ಹಾಗೂ ವಿದ್ಯಾರ್ಥಿಗಳು ಪಾಲ್ಗೊಂಡಿದ್ದರು.

## ಸಹಕಾರಿ ಸಂಘದ ನೂತನ ಅಧ್ಯಕ್ಷರಾಗಿ ಕೆ.ಚಂದ್ರಶೇಖರ ಅವಿರೋಧ ಆಯ್ಕೆ.



ಮಲ್ಲಮ್ಮ ನುಡಿ ವಾರ್ತೆ

ಕೊಪ್ಪಳ : ತಾಲೂಕಿನ ಬಂಡಿಹರ್ಲಾಪುರ ಕೃಷಿ ಪತ್ತಿನ ಸಹಕಾರಿ ಸಂಘದ ನೂತನ ಅಧ್ಯಕ್ಷರಾಗಿ ವಾಣಿಜ್ಯೋದ್ಯಮಿ ಕೆ ಚಂದ್ರಶೇಖರ್ ಅವಿರೋಧವಾಗಿ ಆಯ್ಕೆಯಾದರು .

ಅಧ್ಯಕ್ಷಗಿರಿ ಎಂಬುದು ಕೇವಲ ಪದವಿಯಲ್ಲ ಅದು ಜವಾಬ್ದಾರಿ ಅದಕ್ಕೆ ತಕ್ಕಂತೆ ನಾವು ಸಂಘವನ್ನು ಅಭಿವೃದ್ಧಿ ಮಾಡಬೇಕು ಎಂದು ಸಂಘದ ಅಧ್ಯಕ್ಷ ಕೆ ಚಂದ್ರಶೇಖರ್ ಅಭಿಪ್ರಾಯಪಟ್ಟರು.

ಕೇವಲ ನಾವೊಬ್ಬರಿಂದ ಅಭಿವೃದ್ಧಿ ಅಗಲ್ಲ ನಿರ್ದೇಶಕರು ತಮ್ಮ ತಮ್ಮ ಜವಾಬ್ದಾರಿಯನ್ನು ಸರಿಯಾಗಿ ನಿಭಾಯಿಸಬೇಕು, ಸಾಲವನ್ನು ಸರಿಯಾಗಿ ಪಾವತಿ ಮಾಡುವವರಿಗೆ ಸಾಲ ಕೊಡಬೇಕು, ಅದನ್ನು ಸರಿಯಾದ ಸಮಯದಲ್ಲಿ ಮರುಪಾವತಿ ಮಾಡಿಸಬೇಕು, ಆಡಳಿತ ದೃಷ್ಟಿಯಿಂದ ಯಾವುದು ಕೆಟ್ಟದು ಯಾವುದು ಒಳ್ಳೆಯದು ಎನ್ನುವುದನ್ನು ಸಭೆಯಲ್ಲಿ ತಿರ್ಮಾನಿಸಿ ಮುಂದುವರೆಯಬೇಕು ಸಂಘದ ಅಭಿವೃದ್ಧಿಗೆ ಸದಾ ಬೆನ್ನೆಲುಬಾಗಿ ಕಾರ್ಯನಿರ್ವಹಿಸುವುದಾಗಿ ತಿಳಿಸಿದರು.

ನೂತನ ನಿರ್ದೇಶಕರಾಗಿ ಎಂ ಮೋಹನ್, ಶಂಕರ್ ಶಾಸಲ್ , ರಾಮಮೂರ್ತಿ ಗೊಲ್ಲರ, ಯಂಕಪ್ಪ ಗುಡ್ಲಾನೂರ, ಅಬ್ಬುಲಿಗೆಪ್ಪ, ಕನಕಪ್ಪ ಮುಂಡರಗಿ, ಮೀರ್ ಅಮ್ಮದ್ ಖಾನ್, ಸಣ್ಣ ಚನ್ನರೆಡ್ಡಿ, ಶ್ರೀಮತಿ ಪಿ.ಭಾಗ್ಯಲಕ್ಷ್ಮಿ, ಶ್ರೀ ಮತಿ ರೇಣುಕಾ, ಚಿನ್ನತಂಬಿ ಒಟ್ಟು 12 ಜನ ಅವಿರೋಧವಾಗಿ ಆಯ್ಕೆಯಾದರು.

ಚುನಾವಣೆ ಅಧಿಕಾರಿ ಶರಣಪ್ಪ ಸುಂಕದ, ಕಾರ್ಯದರ್ಶಿ ಬಸವನಗೌಡ, ಸಿಬ್ಬಂದಿ ರಾಘವೇಂದ್ರ ಇಲ್ಲೂರು ಉಪಸ್ಥಿತರಿದ್ದರು.

## ಬಾವಗಿ ಪಿಕೆಪಿಎಸ್ ಸದಸ್ಯರಿಗೆ ಸನ್ಮಾನ



(ಮಲ್ಲಮ್ಮ ನುಡಿ ವಾರ್ತೆ)

ಚಿಟಗುಪ್ಪ:-ಬೀದರ್ ತಾಲೂಕಿನ ಸಂಗೋಳಗಿ ಗ್ರಾಮದಲ್ಲಿ ಇತ್ತೀಚೆಗೆ ನಡೆದ ಪ್ರಾಥಮಿಕ ಕೃಷಿ ಪತ್ತಿನ ಸಹಕಾರ ಸಂಘದ ಚುನಾವಣೆಯಲ್ಲಿ ಬಾವಗಿ ಗ್ರಾಮದ ರಾಜಕುಮಾರ್ ಪೊಲೀಸ್ ಪಾಟೀಲ್ ಹಾಗೂ ಬಸವರಾಜ್ ಖಾವದಿ ರವರು ಜಯಳಿಸಿರುವ ಹಿನ್ನೆಲೆಯಲ್ಲಿ ಇಂದು ಬಾವಗಿ ಗ್ರಾಮದ ಗುರುಸ್ಥಳ ಮಠದಲ್ಲಿ ಶ್ರೀ ಗುಂಡಯ್ಯ ಸ್ವಾಮಿ ರವರ ನೇತೃತ್ವದಲ್ಲಿ ಸನ್ಮಾನಿಸಿ ಗೌರವಿಸಿ ಅಭಿನಂದಿಸಲಾಯಿತು. ರೈತರ ಸಮಸ್ಯೆಗಳಿಗೆ ಪಕ್ಷ ಪಾತ ಎನ್ನದೆ ಪ್ರಾಮಾಣಿಕವಾಗಿ ಸ್ಪಂದಿಸಿ

ಸಿಕ್ಕ ಅವಕಾಶವನ್ನು ಸದುಪಯೋಗ ಪಡಿಸಿಕೊಂಡು ಉತ್ತಮ ರೀತಿಯಲ್ಲಿ ನಡೆಸಿಕೊಂಡು ಹೋಗಬೇಕೆಂದು ಲೋಕೇಶ್ ಕನಶೆಟ್ಟಿ ತಿಳಿಸಿದರು. ಈ ಸಂದರ್ಭದಲ್ಲಿ ಮುಖಂಡರಾದ ಚನ್ನಮಲ್ಲಪ್ಪಾ ಹಜ್ಜರಗಿ, ಜಗನ್ನಾಥ ಚಿದ್ರಿ, ವಿಶ್ವನಾಥ ಪಾಟೀಲ, ವೀರೇಶ ಬಮಣಿ, ಭಿಮಣ್ಣಾ ಪೊಶಟ್ಟಿ ಸೇರಿ ಅನೇಕರು ಉಪಸ್ಥಿತರಿದ್ದರು.

## ಹದಗೆಟ್ಟ ಮುಖ್ಯ ರಸ್ತೆ ರಿಪೇರಿ ಯಾವಾಗ?



(ವರದಿ.ಡಿ.ಕೆ. ಪ್ರಹ್ಲಾದ.)

ಮಲ್ಲಮ್ಮ ನುಡಿ ವಾರ್ತೆ

ಬಸವಕಲ್ಯಾಣ :- ಇಲ್ಲಿನ ಗುರುಭವನದ ಎದುರುಗಡೆ ಇರುವ ಮುಖ್ಯ ರಸ್ತೆಯಲ್ಲಿ ಬಹಳಷ್ಟು ತಗು ಗುಂಡಿಗಳು ಬಿದ್ದಿರುವುದರಿಂದ ರಸ್ತೆಯ ಮೇಲೆ ಓಡಾಡುವ ಬೈಕ್ ಸವಾರರು ಬಿದ್ದು ಸಣ್ಣಪುಟ್ಟ ಗಾಯಗಳಾಗಿವೆ ಎಂದು ಬಹುಜನ ಸಮಾಜ ಪಕ್ಷದ ತಾಲ್ಲೂಕು ಅಧ್ಯಕ್ಷರಾದ ಶಂಕರ್ ಫುಲೆ ಒತ್ತಾಯಿಸಿದ್ದಾರೆ.

ಕೋಟೆಯಿಂದ ತಿಪುರಾಂತಿನವರೆ ಹೋಗುವ ಮುಖ್ಯ ರಸ್ತೆಯಲ್ಲಿ ಅಲ್ಲ ಅಲ್ಲಿ ಹದಗೆಟ್ಟು ಹೋಗಿದೆ ಇವುಗಳ ರಿಪೇರಿ ಮಾಡುವುದು ಬಹಳ ಅವಶ್ಯಕತೆ ಇದೆ. ಈ ಬಗ್ಗೆ ಸಂಬಂಧಿಸಿದ ಅಧಿಕಾರಿಗಳು ಹಾಗೂ ಜನಪ್ರತಿನಿಧಿಗಳು ಇತ ಕಡೆ ಗಮನ ಹರಿಸುತ್ತಿಲ್ಲ ಎಂದು ದೂರಿದ್ದಾರೆ. ನಗರದಲ್ಲಿ ಬಹಳಷ್ಟು ವಾಹನ ಸಂಚರಿಸುತ್ತವೆ ದ್ವಿಚಕ್ರವಾಹನ ಅಟು ಬಸು. ಲಾರಿ ಸೇರಿದಂತೆ ಅನೇಕ ವಾಹನಗಳು ಇಲ್ಲಿಂದಲೆ ಗ್ರಾಮಗಳಿಗೆ ಸಂಚರಿಸುತ್ತವೆ ಎಂದರು. ಈ ಭಾಗದ ಜನರು ರಸ್ತೆಯ ಮೇಲೆ ಓಡಾಡುವ ಬೈಕ್ ಸವಾರರು ಬಿದ್ದು ಸಣ್ಣಪುಟ್ಟ ಗಾಯಗಳಾಗಿವೆ ಎಂದು ತಿಳಿಸಿದರು. ಇನ್ನುಮುಂದೆ ಯಾದರು ಸಂಬಂಧಿಸಿದ ಅಧಿಕಾರಿಗಳು ಹಾಗೂ ಜನಪ್ರತಿನಿಧಿಗಳು ಇತ ಕಡೆ ಗಮನ ಹರಿಸಿ ಆದಷ್ಟು ಬೇಗ ಸುಗಮ ಸಂಚಾರಕ್ಕೆ ಅನುಕೂಲ ಮಾಡಿಕೊಡಬೇಕು ಎಂದು ಒತ್ತಾಯಿಸಿದ್ದಾರೆ.

## ವಿಶ್ವಕರ್ಮ ಅಮರ ಶಿಲ್ಪಿ ಜಕಣಾಚಾರಿ ಸಂಸ್ಕಾರಣಾ ದಿನಾಚರಣೆ: ಜಿಲ್ಲಾಡಳಿತದಿಂದ ಪುಷ್ಪ ನಮನ ಸಲ್ಲಿಕೆ




ಮಲ್ಲಮ್ಮ ನುಡಿ ವಾರ್ತೆ

ಕೊಪ್ಪಳ : ವಿಶ್ವಕರ್ಮ ಅಮರ ಶಿಲ್ಪಿ ಜಕಣಾಚಾರಿ ಸಂಸ್ಕಾರಣಾ ದಿನಾಚರಣೆ ಅಂಗವಾಗಿ ಕೊಪ್ಪಳ ಜಿಲ್ಲಾಡಳಿತದ ವತಿಯಿಂದ ವಿಶ್ವ ವಿಖ್ಯಾತ ಅಮರ ಶಿಲ್ಪಿ ಜಕಣಾಚಾರಿ ಅವರ ಭಾವಚಿತ್ರಕ್ಕೆ ಜನವರಿ 1 ರಂದು ಪುಷ್ಪ ನಮನ ಸಲ್ಲಿಸಲಾಯಿತು.

ಜಿಲ್ಲಾಡಳಿತ ಹಾಗೂ ಕನ್ನಡ ಮತ್ತು ಸಂಸ್ಕೃತಿ ಇಲಾಖೆ ಸಹಯೋಗದಲ್ಲಿ ಬುಧವಾರ ವಿಶ್ವಕರ್ಮ ಅಮರ ಶಿಲ್ಪಿ ಜಕಣಾಚಾರಿ ಸಂಸ್ಕಾರಣಾ ದಿನಾಚರಣೆಯನ್ನು ಜಿಲ್ಲಾಡಳಿತ ಕಛೇರಿ ಸಭಾಂಗಣದಲ್ಲಿ ಸರಳವಾಗಿ ಆಚರಿಸಲಾಯಿತು. ಅಪರ ಜಿಲ್ಲಾಧಿಕಾರಿ ಸಿದ್ರಾಮೇಶ್ವರ ಅವರು ವಿಶ್ವವಿಖ್ಯಾತ ಅಮರ ಶಿಲ್ಪಿ ಜಕಣಾಚಾರಿಯವರ ಭಾವಚಿತ್ರಕ್ಕೆ ಪುಷ್ಪಾರ್ಪಣೆ ಮಾಡಿ ಗೌರವ ನಮನ ಸಲ್ಲಿಸಿದರು.

ಈ ಸಂದರ್ಭದಲ್ಲಿ ಕನ್ನಡ ಮತ್ತು ಸಂಸ್ಕೃತಿ ಇಲಾಖೆ ಸಹಾಯಕ ನಿರ್ದೇಶಕ ಕೊಟ್ರೇಶ್ ಮರಬನಳ್ಳಿ, ಚುನಾವಣಾ ಶಾಖೆಯ ತಹಶೀಲ್ದಾರ ರವಿ ವಸ್ತ್ರದ್, ವಿಶ್ವಕರ್ಮ ಸಮಾಜದ ಮುಖಂಡರಾದ ದೇವೆಂದ್ರಪ್ಪ ಬಡಿಗೇರ, ಈಶಪ್ಪ ಬಡಿಗೇರ, ರುದ್ರಪ್ಪ ಬಡಿಗೇರ, ದೇವಪ್ಪ ಬಡಿಗೇರ, ಕಲ್ಲಪ್ಪ ಬಡಿಗೇರ, ನಿಂಗಪ್ಪ ಬಡಿಗೇರ, ನಿಂಗಪ್ಪ ಬಡಿಗೇರ ಹಾಗೂ ಮತ್ತಿತರರು ಸೇರಿದಂತೆ ವಿವಿಧ ಇಲಾಖೆಗಳ ಅಧಿಕಾರಿಗಳು ಮತ್ತು ಸಿಬ್ಬಂದಿ ಉಪಸ್ಥಿತರಿದ್ದರು.

## ಅಶೋಕ ಸ್ವಾಮಿ ನೇತೃತ್ವದ ಪೆನಲ್ ಅಭ್ಯರ್ಥಿಗಳ ಭರ್ಜರಿ ಪ್ರಚಾರ




ಮಲ್ಲಮ್ಮ ನುಡಿ ವಾರ್ತೆ

ಚಿಟಗುಪ್ಪ:-ಇಲ್ಲಿಯ ಪ್ರಾಥಮಿಕ ಕೃಷಿ ಪತ್ತಿನ ಸಹಕಾರ ಸಂಘದ ನಿರ್ದೇಶಕರ ಚುನಾವಣೆ ಜನವರಿ 5ಕ್ಕೆ ಮತದಾನ ನಡೆಯಲ್ಲಿದ್ದು. ಅದರ ಅಂಗವಾಗಿ ಅಶೋಕ ಸ್ವಾಮಿ ನೇತೃತ್ವದ ಪೆನಲ್ ಅಭ್ಯರ್ಥಿಗಳು ಭರ್ಜರಿ ಪ್ರಚಾರ ಕೈಗೊಂಡಿದ್ದಾರೆ. ಮಂಗಳವಾರ ಫಾತ್ಮಪುರನಲ್ಲಿ ಮತದಾರರಿಗೆ ಭೇಟಿ ನೀಡಿ ನಮ್ಮ ಪೆನಲ್ ಅಭ್ಯರ್ಥಿಗಳಿಗೆ ಮತ ನೀಡಿ ಪ್ರಚಂಡ ಬಹುಮತದಿಂದ ಗೆಲ್ಲಿಸಿ ಎಂದು ಮನವಿ ಮಾಡಿದರು.

ಈ ಸಂದರ್ಭದಲ್ಲಿ ಪಿಕೆಪಿಎಸ್ ನಿಕಟಪೂರ್ವ ಅಧ್ಯಕ್ಷ ವಿಜಯಕುಮಾರ್ ಆರ್. ಮಂಕಲ್, ಮಹಾರುದ್ರಯ್ಯ ಸ್ವಾಮಿ, ಕರೀಂಸಾಬ್ ಅಲ್ಲೂರ್, ಸಂಜುರೆಡ್ಡಿ ಮೂಡಬಿ, ವೆಂಕಟ ಪೂಜಾರಿ, ಶಿವಾರೆಡ್ಡಿ ಉಸ್ತಾಲಿ, ನರೇಂದ್ರರೆಡ್ಡಿ ರಾಂಪುರ, ರವಿ ರಾಂಪುರ, ಮಂಜುನಾಥ ಬಿರಾದಾರ್, ಮಾಣಿಕ ರಾಂಪುರ, ಗುಲಾಂ ಮಚ್ಕುರಿ, ಆಕಾಶ ಬಿರಾದಾರ್, ಸತೀಶ ಸ್ವಾಮಿ, ಅನೀಲ ರಾಂಪುರ ಸೇರಿದಂತೆ ಇತರರಿದ್ದರು.

## ರಘೋಜಿ ತೋಟದಲ್ಲಿ ಎಳ್ಳ ಅಮಾವಾಸ್ಯೆ ಸಂಭ್ರಮ



ಮಲ್ಲಮ್ಮ ನುಡಿ ವಾರ್ತೆ

ಹುಮನಾಬಾದ್ : ಪಟ್ಟಣದ ಉದ್ಯಮಿ ನಾಗರಾಜ ರಘೋಜಿ ಅವರ ತೋಟದಲ್ಲಿ ರೈತರ ಹಬ್ಬವಾದ ಎಳ್ಳ ಅಮಾವಾಸ್ಯೆ ಸಡಗರ ಮತ್ತು ಸಂಭ್ರಮದಿಂದ ಆಚರಿಸಲಾಯಿತು.

ರೈತರು ಸಡಗರ ಸಂಭ್ರಮದಿಂದ ಆಚರಿಸುವ ಈ ಹಬ್ಬಕ್ಕೆ ತಾಲೂಕಿನಾದ್ಯಂತ ರೈತರು ತಮ್ಮ ಸ್ನೇಹ ಸಂಬಂಧಿ ಹಾಗೂ ನೆಂರಿಷ್ಟರನ್ನು ಆಹ್ವಾನ ನೀಡಿ ತಮ್ಮ ಹೊಲಕ್ಕೆ ತೆರಳಿ ರೈತರು ಬೆಳೆದ ಬೆಳೆಯ ನಡುವೆ ಸಾಮೂಹಿಕವಾಗಿ ಕುಳಿತು ಭೋಜನ ಸವಿದು ಎಳ್ಳ ಅಮಾವಾಸ್ಯೆ ಹಬ್ಬ ಸಂಭ್ರಮದಿಂದ ಆಚರಿಸಿದರು.

ಪೂರ್ವ ತಯಾರಿಯಲ್ಲಿ ತೊಡಗಿದ್ದ ರೈತರು ಹಬ್ಬಕ್ಕಾಗಿ ತಯಾರಿಸಿದ ವಿವಿಧ ಖಾದ್ಯಗಳನ್ನು ತಲೆ ಮೇಲೆ ಹೊತ್ತು ತಮ್ಮ ಹೊಲಗಳಿಗೆ ತೆರಳಿ ಪಾಂಡವರಿಗೆ ಹಾಗೂ ಭೂ ತಾಯಿಗೆ ಪೂಜಿಸಿ, ಚೆರಗ ಚೆಲ್ಲುವ ಮೂಲಕ ಓಲ್ಗೆಓಲ್ಗೆ ಚಲ್ಲಂಪೋಲ್ಗೆ ಎಂದು ಜೈಘೋಷ ಕೂಗಿ ಸಂಭ್ರಮಸಿದರು.

ಈ ಸಂದರ್ಭದಲ್ಲಿ ನಾಗರಾಜ ರಘೋಜಿ, ಸಂಧ್ಯಾರಾಣಿ ರಘೋಜಿ, ಡಾ. ರೋಹಿತ ರಘೋಜಿ, ಡಾ. ಶೈಲಜಾ ರಘೋಜಿ, ಪ್ರಶಾಂತ ಕುಷ್ಟಗಿ, ಸೋನಿಕಾ ಕುಷ್ಟಗಿ ಸೇರಿ ಅನೇಕರು ಉಪಸ್ಥಿತರಿದ್ದರು.

## ಗುಜರಾತ್‌ನಲ್ಲಿ ಲಘು ಭೂಕಂಪ



ಮಲ್ಲಮ್ಮ ನುಡಿ ವಾರ್ತೆ


ಅಹಮದಾಬಾದ್,ಜ.1-ಇಂದು ಬೆಳಿಗ್ಗೆ ಗುಜರಾತ್‌ನ ಕಚ್ ಜಿಲ್ಲೆಯಲ್ಲಿ 3.2 ತೀವ್ರತೆಯ ಭೂಕಂಪ ಸಂಭವಿಸಿದೆ ಎಂದು ಭೂಕಂಪನ ಸಂಶೋಧನಾ ಸಂಸ್ಥೆ ತಿಳಿಸಿದೆ.

ಯಾವುದೇ ಪ್ರಾಣಹಾನಿ ಅಥವಾ ಆಸ್ತಿಪಾಸ್ತಿಗೆ ಹಾನಿಯಾದ ಬಗ್ಗೆ ವರದಿಯಾಗಿಲ್ಲ ಎಂದು ಜಿಲ್ಲಾಡಳಿತ ತಿಳಿಸಿದೆ.

## ಭೀಮಾನದಿಗೆ ಬಿದ್ದ ಕಬ್ಬಿನ ಲಾರಿ: ಚಾಲಕ ನಾಪತ್ತೆ

ಮಲ್ಲಮ್ಮ ನುಡಿ ವಾರ್ತೆ

ಕಲಬುರಗಿ,ಜ.1: ಚಾಲಕನ ನಿಯಂತ್ರಣ ತಪ್ಪಿ ಕಬ್ಬು ತುಂಬಿಕೊಂಡು ಹೊರಟಿದ್ದ ಲಾರಿ ಭೀಮಾ ನದಿಗೆ ಉರುಳಿ ಬಿದ್ದ ಪರಿಣಾಮ ಚಾಲಕ ನಾಪತ್ತೆಯಾದ ಘಟನೆ ದೇವಲಗಾಣಗಾಪುರ ಬಳಿ ಸಂಭವಿಸಿದೆ.



ಇಟಗಾ-ಗಾಣಗಾಪುರ ಗ್ರಾಮದ ಮಧ್ಯೆ ಇರುವ ಭೀಮಾ ನದಿ ಸೇತುವೆ ಮೇಲೆ ಲಾರಿ ಹೊರಟಿದ್ದಾಗ ಈ ದುರ್ಘಟನೆ ನಡೆದಿದೆ. ಅಗ್ನಿಶಾಮಕ ದಳ ಸಿಬ್ಬಂದಿ ಘಟನಾ ಸ್ಥಳಕ್ಕೆ ಧಾವಿಸಿದ್ದು ನಾಪತ್ತೆಯಾದ ಲಾರಿ ಚಾಲಕನಿಗಾಗಿ ಶೋಧ ಕಾರ್ಯ ಆರಂಭಿಸಿದ್ದಾರೆ.

ದೇವಲಗಾಣಗಾಪುರ ಪೊಲೀಸ್ ಠಾಣೆಯಲ್ಲಿ ಪ್ರಕರಣ ದಾಖಲಾಗಿದೆ.

## ಹೊಸದಾಗಿ ಮೀನು ಕೃಷಿ ಕೊಳ ನಿರ್ಮಾಣಕ್ಕೆ ಅರ್ಜಿ ಆಹ್ವಾನ

ಮಲ್ಲಮ್ಮ ನುಡಿ ವಾರ್ತೆ

ಯಾದಗಿರಿ : ಜನವರಿ 01, : ಮೀನುಗಾರಿಕೆ ಇಲಾಖೆದಿಂದ 2020-21,2021-22,2022-23 ಮತ್ತು 2023-24ನೇ ಸಾಲಿನಲ್ಲಿ "ಪ್ರಧಾನಮಂತ್ರಿ ಮತ್ಸ ಸಂಪದ ಯೋಜನೆ"ಯಡಿ ಈ ಹಿಂದೆ ನೀಡಿ ಸಾಧಿಸದೆ ಉಳಿದ ಗುರಿಗಳನ್ನು ಹಿಂಪಡೆದು 2024-25ನೇ ಸಾಲಿಗೆ ಯಾದಗಿರಿ ಜಿಲ್ಲೆಯಲ್ಲಿ ಕೇಂದ್ರ ಪುರಸ್ಕೃತ ಪ್ರಧಾನಮಂತ್ರಿ ಮತ್ಸ ಸಂಪದ ಯೋಜನೆಯನ್ನು ಅನುಷ್ಠಾನಗೊಳಿಸಲು ಗುರಿಗಳನ್ನು ಮರು ಹಂಚಿಕೆ ಮಾಡಿರುತ್ತಾರೆ. ಅದರಂತೆ ಹೊಸದಾಗಿ ಮೀನು ಕೃಷಿ ಕೊಳ ನಿರ್ಮಾಣಕ್ಕೆ ಅರ್ಜಿ ಆಹ್ವಾನಿಸಲಾಗಿದೆ ಎಂದು ಯಾದಗಿರಿ ಜಿಲ್ಲಾ ಪಂಚಾಯತ್ ಮೀನುಗಾರಿಕೆ ಉಪ ನಿರ್ದೇಶಕರು ಶರಣಬಸವ ಅವರು ತಿಳಿಸಿದ್ದಾರೆ.

## ಹಿಂಗಾರು ಬೆಳೆ ಸಮೀಕ್ಷೆ: ಮೊಬೈಲ್ ಆಪ್ ಮೂಲಕ ಬೆಳೆಯ ವಿವರ ದಾಖಲಿಸಲು ಅವಕಾಶ

**ಮಲ್ಲಮ್ಮ ನುಡಿ ವಾರ್ತೆ**

ಬಳ್ಳಾರಿ,ಜ.01: ಪ್ರಸಕ್ತಸಾಲಿನ ಹಿಂಗಾರು ಹಂಗಾಮಿನಲ್ಲಿ ರೈತರು ಬೆಳೆದ ಬೆಳೆಗಳ ಮಾಹಿತಿಯನ್ನು ಮೊಬೈಲ್ ಆಪ್ ಮೂಲಕ ಬೆಳೆ ಸಮೀಕ್ಷೆ ಮಾಹಿತಿ ನಮೂದಿಸಲು ಅವಕಾಶವಿದ್ದು, ರೈತರು ಮೊಬೈಲ್ ಆಪ್ ಮೂಲಕ ಬೆಳೆ ಸಮೀಕ್ಷೆಯಲ್ಲಿ ಬೆಳೆಯ ವಿವರ ದಾಖಲಿಸಿ, ಬೆಳೆಯ ನಿಖರ ಮಾಹಿತಿ ನಮೂದು ಮಾಡಬಹುದು ಎಂದು ಜಂಟಿ ಕೃಷಿ ನಿರ್ದೇಶಕ ಮಲ್ಲಿಕಾರ್ಜುನ ಅವರು ತಿಳಿಸಿದ್ದಾರೆ.ರೈತರು ಬೆಳೆದ ಬೆಳೆಗಳ ಬಗ್ಗೆ ನಿಖರವಾಗಿ ಮಾಹಿತಿ ಪಡೆದುಕೊಳ್ಳಲು ಇ-ಆಡಳಿತ ವತಿಯಿಂದ ಅಭಿವೃದ್ಧಿಪಡಿಸಿರುವ ಮೊಬೈಲ್ ಆಪ್ ಮೂಲಕ ಬೆಳೆ ಸಮೀಕ್ಷೆನಡೆಸಲಾಗುತ್ತಿದೆ. ಮೊಬೈಲ್ ಅಪ್ಲಿಕೇಷನ್ ಪಡೆಯಲು ಅನುಸರಿಸಬೇಕಾದ ಅಂಶಗಳು:ರೈತರು ತಮ್ಮ ಮೊಬೈಲ್‌ನಲ್ಲಿ ಗೂಗಲ್ ಪ್ಲೇ-ಸ್ಟೋರ್‌ನಿಂದ ಬೆಳೆ ಸಮೀಕ್ಷೆ ಹಿಂಗಾರು ಹಂಗಾಮಿನ "ಫಾರ್ಮರ್ ಆಪ್ ಕ್ರಾಪ್ ಸರ್ವೇ ರಬಿ 2024" (Farmer App Crop Survey Rabi 2024) ಆಪ್‌ನ್ನು ಡೌನ್‌ಲೋಡ್ ಮಾಡಿಕೊಳ್ಳಬೇಕು.ಜಿಲ್ಲೆಯಲ್ಲಿ 242520 ಬೆಳೆ ತಾಕುಗಳಿದ್ದು, ಆ ತಾಕುಗಳಿಗೆ ರೈತರು ತಮ್ಮ ಬೆಳೆಗಳ ಮಾಹಿತಿಯನ್ನು ಸ್ವಯಂ ದಾಖಲಿಸಬೇಕು. ಮೊಬೈಲ್ ಆಪ್‌ನಲ್ಲಿ ಜಿಯೋ ರೆಫೆರೆನ್ಸ್‌ಡ್ ಅಂಡ್ ಡಿಜಿಟೈಜ್‌ಡ್ (Geo Referenced and Digitized) ಬೆಳೆ ಗ್ರಾಮ ನಕಾಶೆ ಅಳವಡಿಸಲಾಗಿರುವುದರಿಂದ ಆಯಾ ತಾಕಿನ ಗಡಿರೇಖೆಯೊಳಗೆ ಹೋಗಿ ಜಿಪಿಎಸ್ ನಿಖರತೆ ಪಡೆದು ಛಾಯಾಚಿತ್ರದೊಂದಿಗೆ ರೈತರು ಬೆಳೆಯ ವಿವರಗಳನ್ನು ಕಡ್ಡಾಯವಾಗಿ ದಾಖಲಿಸಬೇಕು.ಬೆಳೆ ಸಮೀಕ್ಷೆ ದತ್ತಾಂಶ ಮಾಹಿತಿಯನ್ನು ಬೆಳೆ ವಿಸ್ತರಣೆ ಎಣಿಕೆ ಕಾರ್ಯದಲ್ಲಿ, ಬೆಳೆ ಕಟಾವು ಪ್ರಯೋಗದಲ್ಲಿ,ಪ್ರಕೃತಿ ವಿಕೋಪ ಸಂದರ್ಭದಲ್ಲಿ,ಬೆಳೆಹಾನಿ ವರದಿ ಸಿದ್ಧಪಡಿಸಲು, ಬೆಳೆ ವಿಮಾ ಯೋಜನೆ, ಬೆಂಬಲ ಬೆಲೆ ಯೋಜನೆ, ಆರ್.ಟಿ.ಸಿ.ಯಲ್ಲಿ ಬೆಳೆ ವಿವರ ದಾಖಲಿಸಲು, ರಾಷ್ಟ್ರೀಯ ಹಾಗೂ ಗ್ರಾಮೀಣ ಬ್ಯಾಂಕ್‌ಗಳಲ್ಲಿ ಬೆಳೆ ಸಾಲ ಮಂಜೂರು ಮಾಡಲು ಬೆಳೆ ಸಮೀಕ್ಷೆ ಮಾಹಿತಿಯನ್ನು ಉಪಯೋಗಿಸಲಾಗುತ್ತದೆ.ಹೆಚ್ಚಿನ ಮಾಹಿತಿಗಾಗಿ ಕೃಷಿ,ತೋಟಗಾರಿಕೆ, ಪಿ.ಆರ್ ಅಥವಾ ಕಂದಾಯ ಇಲಾಖೆಯ ಸಿಬ್ಬಂದಿಗಳನ್ನು ಸಂಪರ್ಕಿಸಬಹುದು ಎಂದು ಅವರು ಪ್ರಕಟಣೆಯಲ್ಲಿ ತಿಳಿಸಿದ್ದಾರೆ.

## ಜ.02 ರಂದು 'ಮಕ್ಕಳೊಂದಿಗೆ ಮುಕ್ತ ಸಂವಾದ ಮತ್ತು ಆಹವಾಲು ಸ್ವೀಕಾರ ಕಾರ್ಯಕ್ರಮ'




**ಮಲ್ಲಮ್ಮ ನುಡಿ ವಾರ್ತೆ**

ಬಳ್ಳಾರಿ,ಜ.01:ರಾಜ್ಯ ಮಕ್ಕಳ ಹಕ್ಕುಗಳ ರಕ್ಷಣಾ ಆಯೋಗ ಬೆಂಗಳೂರು, ಜಿಲ್ಲಾ ಕಾನೂನು ಸೇವೆಗಳ ಪ್ರಾಧಿಕಾರ, ಜಿಲ್ಲಾಡಳಿತ, ಜಿಲ್ಲಾ ಪಂಚಾಯತ್, ಮಹಿಳಾ ಮತ್ತು ಮಕ್ಕಳ ಅಭಿವೃದ್ಧಿ ಇಲಾಖೆ, ಮಕ್ಕಳ ವಿಶೇಷ ಪೊಲೀಸ್ ಘಟಕ, ಕಾರ್ಮಿಕ ಇಲಾಖೆ, ಶಾಲಾ ಶಿಕ್ಷಣಾ ಮತ್ತು ಸಾಕ್ಷಾರತಾ ಇಲಾಖೆ ಹಾಗೂ ಜಿಲ್ಲಾ ಮಕ್ಕಳ ರಕ್ಷಣಾ ಘಟಕ ಇವರ ಸಂಯುಕ್ತಾಶ್ರಯದಲ್ಲಿ ಜ.02 ರಂದು ಬೆಳಿಗ್ಗೆ 10.30 ಗಂಟೆಗೆ ಜಿಲ್ಲಾ ಪಂಚಾಯತ್‌ನ ನಜೀರ್ ಸಭಾಂಗಣದಲ್ಲಿ 'ಮಕ್ಕಳೊಂದಿಗೆ ಮುಕ್ತ ಸಂವಾದ ಮತ್ತು ಆಹವಾಲು ಸ್ವೀಕಾರ ಕಾರ್ಯಕ್ರಮ' ಏರ್ಪಡಿಸಲಾಗಿದೆ. ರಾಜ್ಯ ಮಕ್ಕಳ ಹಕ್ಕುಗಳ ರಕ್ಷಣಾ ಆಯೋಗದ ಸದಸ್ಯರಾದ ಶಶಿಧರ ಕೋಸಂಬೆ ಅವರು ಕಾರ್ಯಕ್ರಮ ಉದ್ಘಾಟಿಸುವರು.

ಜಿಲ್ಲಾಧಿಕಾರಿ ಪ್ರಶಾಂತ್ ಕುಮಾರ ಮಿಶ್ರಾ ಅವರು ಅಧ್ಯಕ್ಷತೆ ವಹಿಸುವರು.ಜಿಲ್ಲಾ ಕಾನೂನು ಸೇವೆಗಳ ಪ್ರಾಧಿಕಾರದ ಸದಸ್ಯ ಕಾರ್ಯದರ್ಶಿ ಹಾಗೂ ಹಿರಿಯ ಸಿವಿಲ್ ನ್ಯಾಯಾಧೀಶರಾದ ರಾಜೇಶ್ ಎನ್.ಹೊಸಮನೆ, ಜಿಲ್ಲಾ ಪಂಚಾಯತ್‌ನ ಮುಖ್ಯ ಕಾರ್ಯನಿರ್ವಾಹಕ ಅಧಿಕಾರಿ ರಾಹುಲ್ ಶರಣಪ್ಪ ಸಂಕನೂರ, ಜಿಲ್ಲಾ ಪೊಲೀಸ್ ವರಿಷ್ಠಾಧಿಕಾರಿ ಡಾ.ಶೋಭಾರಾಣಿ.ವಿ.ಜೆ., ಎಸ್‌ಜೆಪಿಯು ಘಟಕದ ನೋಡೆಲ್ ಅಧಿಕಾರಿಯೂ ಆದ ಎಎಸ್ಪಿ ರವಿಕುಮಾರ್.ಕೆ.ಪಿ., ಮಹಿಳಾ ಮತ್ತು ಮಕ್ಕಳ ಅಭಿವೃದ್ಧಿ ಇಲಾಖೆಯ ಉಪನಿರ್ದೇಶಕ ವಿಜಯ್ ಕುಮಾರ್.ಕೆ.ಹೆಚ್., ಶಾಲಾ ಶಿಕ್ಷಣಾ ಮತ್ತು ಸಾಕ್ಷರತಾ ಇಲಾಖೆಯ ಉಪನಿರ್ದೇಶಕರಾದ ಬಿ.ಉಮಾದೇವಿ, ಜಿಲ್ಲಾ ಕಾರ್ಮಿಕಾಧಿಕಾರಿ ಸಿದ್ದಪ್ಪ ಖೈನೂರು, ಮಹಿಳಾ ಮತ್ತು ಮಕ್ಕಳ ಅಭಿವೃದ್ಧಿ ಅಧಿಕಾರಿ ಜಲಾಲಪ್ಪ.ಎ.ಕೆ., ಮಹಿಳಾ ಮಕ್ಕಳ ಅಭಿವೃದ್ಧಿ ಇಲಾಖೆಯ ಜಿಲ್ಲಾ ನಿರೂಪಣಾಧಿಕಾರಿ ರಾಮಕೃಷ್ಣ ನಾಯಕ, ಮಕ್ಕಳ ಕಲ್ಯಾಣ ಸಮಿತಿಯ ಅಧ್ಯಕ್ಷರಾದ ವಿಜಯಲಕ್ಷ್ಮೀ ಮೈದೂರು ಸೇರಿದಂತೆ ಇತರರು ಮುಖ್ಯ ಅತಿಥಿಗಳಾಗಿ ಭಾಗವಹಿಸುವರು. ಜಿಲ್ಲಾ ಮಕ್ಕಳ ರಕ್ಷಣಾಧಿಕಾರಿ ಎಳೆನಾಗಪ್ಪ ಅವರು ಪ್ರಾಸ್ತಾವಿಕವಾಗಿ ಮಾತನಾಡುವರು. ಸಂಪನ್ಮೂಲ ವ್ಯಕ್ತಿಗಳಾಗಿ ರಾಜ್ಯ ಮಕ್ಕಳ ಹಕ್ಕುಗಳ ರಕ್ಷಣಾ ಆಯೋಗದ ಮಾಜಿ ಸದಸ್ಯರಾದ ಹೆಚ್.ಸಿ.ರಾಘವೇಂದ್ರ ಭಟ್ ಸೇರಿದಂತೆ ಜಿಲ್ಲಾ ಮಕ್ಕಳ ರಕ್ಷಣಾ ಘಟಕದ ಸಿಬ್ಬಂದಿಗಳು ಮತ್ತು ಸರ್ಕಾರಿ ಮಕ್ಕಳ ಪಾಲನಾ ಸಂಸ್ಥೆಯ ಅಧೀಕ್ಷಕರುಗಳು ಹಾಗೂ ಇತರರು ಉಪಸ್ಥಿತರಿರುವರು ಎಂದು ಪ್ರಕಟಣೆ ತಿಳಿಸಿದೆ.

## ಜ.02 ಮತ್ತು 03 ರಂದು ಆಧುನಿಕ ಜೇನು ಸಾಕಾಣಿಕೆ ತರಬೇತಿ ಕಾರ್ಯಕ್ರಮ

**ಮಲ್ಲಮ್ಮ ನುಡಿ ವಾರ್ತೆ**

ಬಳ್ಳಾರಿ,ಜ.01:ಬೆಂಗಳೂರು ಕೃಷಿ ವಿದ್ಯಾಲಯ, ಜಿಕೆವಿಕೆ, ಜೇನುಕೃಷಿ ವಿಭಾಗ ಹಾಗೂ ಕರ್ನಾಟಕ ಸ್ಟೇಟ್ ಮಿನರಲ್ಸ್ ಕಾರ್ಪೋರೇಷನ್ ಲಿಮಿಟೆಡ್, ಬೆಂಗಳೂರು ಇವರ ಸಹಭಾಗಿತ್ವದಲ್ಲಿ ಜ.02 ಮತ್ತು 03 ರಂದು ಬೆಳಿಗ್ಗೆ 10 ಗಂಟೆಗೆ ಸಂಡೂರು ತಾಲ್ಲೂಕಿನ ಕರ್ನಾಟಕ ಸ್ಟೇಟ್ ಮಿನರಲ್ಸ್ ಕಾರ್ಪೋರೇಷನ್ ಲಿಮಿಟೆಡ್‌ನ ವಿಭಾಗೀಯ ಕಚೇರಿ ಸಭಾಂಗಣದಲ್ಲಿ 'ಆಧುನಿಕ ಜೇನು ಸಾಕಾಣಿಕೆ' ಕುರಿತು ಎರಡು ದಿನಗಳ ತರಬೇತಿ ಕಾರ್ಯಕ್ರಮ ಹಮ್ಮಿಕೊಳ್ಳಲಾಗಿದೆ ಎಂದು ಸಂಡೂರು ಕಬ್ಬಿಣ ಅದಿರು ಗಣಿ ವಿಭಾಗದ ಉಪ ಪ್ರಧಾನ ವ್ಯವಸ್ಥಾಪಕರು ಪ್ರಕಟಣೆಯಲ್ಲಿ ತಿಳಿಸಿದ್ದಾರೆ.

## 2024 ರ ಲೋಕಸಭಾ ಚುನಾವಣೆಯ ಕುರಿತು ವಿಶ್ವದ ಅತಿದೊಡ್ಡ ಚುನಾವಣೆಯ ಕುರಿತು ಭಾರತ ಚುನಾವಣಾ ಆಯೋಗದಿಂದ ದತ್ತಾಂಶ ಪ್ರಕಟಣೆ

**ಮಲ್ಲಮ್ಮ ನುಡಿ ವಾರ್ತೆ**

ಬಳ್ಳಾರಿ,:2024ರ ಲೋಕಸಭಾ ಚುನಾವಣೆ ಮತ್ತು ಜೊತೆಯಲ್ಲಿ ನಡೆದ 4 ರಾಜ್ಯಗಳ ವಿಧಾನಸಭಾ ಚುನಾವಣೆಗಳ ಸಂಕ್ಷಿಪ್ತ ಡೇಟಾವನ್ನು ಆಯೋಗ ಬಿಡುಗಡೆ ಮಾಡಿದೆ. ಜೊತೆಗೆ ವಿಶ್ವದಾದ್ಯಂತ ಶಿಕ್ಷಣ ತಜ್ಞರು, ಸಂಶೋಧಕರು, ಚುನಾವಣಾ ವೀಕ್ಷಕರು ಸೇರಿದಂತೆ ಮತದಾರರಿಗೆ ಇದು ಅನುಕೂಲವಾಗಬಲ್ಲದು ಎಂದು ಆಯೋಗ ತಿಳಿಸಿದೆ.ಭಾರತದ ಚುನಾವಣಾ ಆಯೋಗವು 2024 ರ ಲೋಕಸಭಾ ಚುನಾವಣೆಗೆ ಸಂಬಂಧಿಸಿದಂತೆ 42 ಅಂಕಿಅಂಶಗಳ ವರದಿಗಳು ಮತ್ತು ಆಂಧ್ರಪ್ರದೇಶ, ಅರುಣಾಚಲ ಪ್ರದೇಶ, ಒಡಿಶಾ ಮತ್ತು ಸಿಕ್ಕಿಂ ನಾಲ್ಕು ರಾಜ್ಯಗಳಲ್ಲಿ ಏಕಕಾಲದಲ್ಲಿ ನಡೆದ ವಿಧಾನಸಭಾ ಚುನಾವಣೆಗಳಿಗೆ 14 ಅಂಕಿಅಂಶಗಳ ವರದಿಗಳ ಸಮಗ್ರ ದತ್ತಾಂಶಗಳನ್ನು ಬಿಡುಗಡೆ ಮಾಡಿದೆ.

ಆಯೋಗದ ಈ ಸ್ವಯಂಪ್ರೇರಿತ ಕಾರ್ಯವು ಭಾರತದ ಚುನಾವಣಾ ವ್ಯವಸ್ಥೆಯ ಆಧಾರವಾಗಿರುವ ಸಾರ್ವಜನಿಕ ನಂಬಿಕೆಯನ್ನು ಹೆಚ್ಚಿಸುವ ಉದ್ದೇಶವನ್ನು ಹೊಂದಿರುತ್ತದೆ. ವ್ಯಾಪಕವಾದ ಸವಿವರವಾದ ದತ್ತಾಂಶ ಬಿಡುಗಡೆಯು, ಶೈಕ್ಷಣಿಕ, ಸಂಶೋಧನೆ ಮತ್ತು ಸಾರ್ವಜನಿಕರು ಸೇರಿದಂತೆ ಎಲ್ಲಾ ಪಾಲುದಾರರಿಗೆ ಚುನಾವಣೆಗೆ ಸಂಬಂಧಿಸಿದ ದತ್ತಾಂಶದ ಪ್ರತಿ ವಿವರಗಳನ್ನು ಬಹಿರಂಗಪಡಿಸುವಿಕೆಯ ಮೂಲಕ ಹೆಚ್ಚಿನ ಪಾರದರ್ಶಕತೆ ಕಾಪಾಡಿಕೊಳ್ಳುವುದು ಆಯೋಗದ ನೀತಿಯ ಮುಂದುವರಿಕೆಯಾಗಿದೆ.ಈ ದತ್ತಾಂಶ ವಿವರಗಳು ವಿವಿಧ ರೀತಿಯ ಮಾಹಿತಿಗಳನ್ನು ಒಳಗೊಂಡಿವೆ, ಉದಾಹರಣೆಗೆ ಲೋಕಸಭಾ ಕ್ಷೇತ್ರ/ವಿಧಾನಸಭಾ ಕ್ಷೇತ್ರ/ರಾಜ್ಯವಾರು ಮತದಾರರ ವಿವರಗಳು, ಮತದಾನ ಕೇಂದ್ರಗಳ ಸಂಖ್ಯೆ, ರಾಜ್ಯ/ಲೋಕಸಭಾ ಕ್ಷೇತ್ರವಾರು ಮತದಾರರ ಮತದಾನ, ಪಕ್ಷವಾರು ಮತ ಹಂಚಿಕೆ, ಲಿಂಗ ಆಧಾರಿತ ಮತದಾನದ ನಡವಳಿಕೆ, ರಾಜ್ಯವಾರು ಮಹಿಳಾ ಮತದಾರರ ಭಾಗವಹಿಸುವಿಕೆ, ಪ್ರಾದೇಶಿಕ ವ್ಯತ್ಯಾಸಗಳು, ಕ್ಷೇತ್ರವಾರು ದತ್ತಾಂಶ ಸಾರಾಂಶ ವರದಿ, ರಾಷ್ಟ್ರೀಯ/ರಾಜ್ಯ ಪಕ್ಷಗಳು/ಆರ್ಯುಪಿಪಿಗಳ ಕಾರ್ಯಕ್ಷಮತೆ, ವಿಜೇತ ಅಭ್ಯರ್ಥಿಗಳ ವಿಶ್ಲೇಷಣೆ, ಕ್ಷೇತ್ರವಾರು ಸೇರಿದಂತೆ ವಿವರವಾದ ಫಲಿತಾಂಶಗಳು ಮತ್ತು ಇನ್ನೂ ಅನೇಕ ಆಳವಾದ ಒಳನೋಟಗಳು ಮತ್ತು ವಿಶ್ಲೇಷಣೆಗಳನ್ನು ನಡೆಸಲು ಸಿದ್ಧಪಡಿಸಲಾದ ಈ ದತ್ತಾಂಶವನ್ನು ಸಂಶೋಧಕರು, ನೀತಿ ನಿರೂಪಕರು ಮತ್ತು ಪತ್ರಕರ್ತರು ಈಗ ಬಳಸಿಕೊಳ್ಳಬಹುದಾಗಿದೆ.2024 ರ ಸಾರ್ವತ್ರಿಕ ಲೋಕಸಭಾ ಚುನಾವಣೆ ದತ್ತಾಂಶಗಳ ಸವಿವರವಾದ ವರದಿ ಮತ್ತು ಅಂಕಿ-ಅಂಶಗಳನ್ನು ಭಾರತ ಚುನಾವಣಾ ಆಯೋಗದ https://www.eci.gov.in/statistical-reports ಲಿಂಕ್ ಮೂಲಕ ಪಡೆದುಕೊಳ್ಳಬಹುದಾಗಿದೆ.

ಹಿಂದಿನ ಚುನಾವಣೆಗಳಿಗೆ ಸಂಬಂಧಿಸಿದಂತೆ ಇದೇ ರೀತಿಯ ವಿವರವಾದ ದತ್ತಾಂಶಗಳು ಈಗಾಗಲೇ ಆಯೋಗದ ವೆಬ್‌ಸೈಟ್‌ನಲ್ಲಿ ಲಭ್ಯವಿರುವುದರಿಂದ, ಈ ವರದಿಗಳು ಚುನಾವಣಾ ಮತ್ತು ರಾಜಕೀಯ ಕುರಿತು ದೀರ್ಘಾವಧಿಯ ದೃಷ್ಟಿಕೋನ ಮತ್ತು ಬದಲಾವಣೆಗಳನ್ನು ಹಾಗೂ ವಿಶ್ಲೇಷಣೆಗೆ ಸಹಕಾರಿಯಾಗುತ್ತದೆ.ಲೋಕಸಭಾ ಸಾರ್ವತ್ರಿಕ ಚುನಾವಣೆ 2024 ಕ್ಕೆ ಸಂಬಂಧಿಸಿದ 42 ವರದಿಗಳ ಕೆಲವು ಮುಖ್ಯ ಅಂಶಗಳನ್ನು ವರದಿಯಲ್ಲಿ ಗಮನಿಸಬಹುದಾಗಿದೆ.

*ಮತದಾರರ ವಿವರ:*

ಲೋಕಸಭೆ ಚುನಾವಣೆ 2019 ರಲ್ಲಿ 91,19,50,734 ಕ್ಕೆ ಹೋಲಿಸಿದರೆ 2024 ರಲ್ಲಿ 97,97,51,847 ನೋಂದಾಯಿತ ಮತದಾರರಿದ್ದಾರೆ. 2019 ಕ್ಕಿಂತ 2024 ರಲ್ಲಿ ಒಟ್ಟು ಮತದಾರರಲ್ಲಿ ಶೇ.7.43 ಹೆಚ್ಚಳವಾಗಿದೆ. 2024 ರಲ್ಲಿ 64.64 ಕೋಟಿ ಮತಗಳು ಚಲಾವಣೆಯಾಗಿವೆ, 2019 ರಲ್ಲಿ 61.4 ಕೋಟಿ ಮತಗಳು ಚಲಾವಣೆಯಾಗಿದ್ದವು. ಇವಿಎಂ ಮತ್ತು ಅಂಚೆ ಮತಗಳು ಸೇರಿ 64,64,20,869 ಚಲಾವಣೆಯಾಗಿದ್ದವು. ಇದರಲ್ಲಿ 64,21,39,275 ಇವಿಎಂ ಮತಗಳು, 32,93,61,948 ಪುರುಷರು, 31,27,64,269 ಮಹಿಳೆಯರು, 13,058 ತೃತೀಯ ಲಿಂಗತ್ವ ಮತದಾರರ ಮತಗಳು ಚಲಾವಣೆಗೊಂಡಿದ್ದವು. ಹಾಗೂ 42,81,594 ಅಂಚೆ ಮತಪತ್ರಗಳು ಚಲಾವಣೆಯಾಗಿದ್ದವು.

ಅತಿಹೆಚ್ಚು ಮತದಾನ ಮಾಡಿರುವ ಲೋಕಸಭಾ ಕ್ಷೇತ್ರವು ಧುಬ್ರಿ (ಅಸ್ಸಾಂ) ಶೇ.92.3 ಮತ್ತು ಅತಿ ಕಡಿಮೆ ಮತದಾನ ಮಾಡಿರುವ ಲೋಕಸಭಾ ಕ್ಷೇತ್ರವು ಶ್ರೀನಗರ (ಜಮ್ಮು ಮತ್ತು ಕಾಶ್ಮೀರ) ಶೇ.38.7 ಆಗಿತ್ತು, 2019 ರಲ್ಲಿ ಕೇವಲ ಶೇ.14.4 ರಷ್ಟಾಗಿತ್ತು.

ದೇಶದಲ್ಲಿ ಶೇ.50 ಕ್ಕಿಂತ ಕಡಿಮೆ ಮತದಾನ ಮಾಡಿರುವ ಲೋಕಸಭಾ ಕ್ಷೇತ್ರ ಸಂಖ್ಯೆ 11. 2024 ರಲ್ಲಿ ನೋಟಾಗೆ 63,71,839 (ಶೇ.0.99) ಮತಗಳು ಬಿದ್ದಿದ್ದು, 2019 ರಲ್ಲಿ ಇದು ಶೇ.1.06 ರಷ್ಟಿತ್ತು. ಲಿಂಗಪರಿವರ್ತಿತ ಮತದಾರರು (ತೃತೀಯ ಲಿಂಗಿಗಳು) ಶೇ.27.09 ರಷ್ಟು ಮತದಾನ ಮಾಡಿದ್ದಾರೆ.

*ಮತದಾನ ಕೇಂದ್ರಗಳು:*

2019 ರಲ್ಲಿ 10,37,848 ಕ್ಕೆ ಹೋಲಿಸಿದರೆ 2024 ರಲ್ಲಿ 10,52,664 ಮತಗಟ್ಟೆಗಳು ಸ್ಥಾಪಿಸಲಾಗಿತ್ತು. 40 ಮತಗಟ್ಟೆಗಳಲ್ಲಿ ಮಾತ್ರ ಮರು ಮತದಾನ ಮಾಡಲಾಗಿದೆ. 2019 ರಲ್ಲಿ 540 ಕ್ಕೆ ಹೋಲಿಸಿದರೆ ಮರು ಮತದಾನವಾದ ಒಟ್ಟು ಮತಗಟ್ಟೆಗಳು ಕೇವಲ ಶೇ.0.0038. ಒಂದು ಮತಗಟ್ಟೆಗೆ ಮತದಾರರ ಸರಾಸರಿ ಸಂಖ್ಯೆ 931 ಇರುತ್ತದೆ.

ಅತಿ ಹೆಚ್ಚು ಮತಗಟ್ಟೆ ಹೊಂದಿರುವ ರಾಜ್ಯ ಉತ್ತರ ಪ್ರದೇಶ (1,62,069) ಆಗಿದೆ. ಕಡಿಮೆ ಸಂಖ್ಯೆಯ ಮತಗಟ್ಟೆ ಹೊಂದಿರುವ ರಾಜ್ಯ ಲಕ್ಷದ್ವೀಪ (55 ಮತಗಟ್ಟೆ) ಆಗಿದೆ. 1000 ಗಿಂತ ಕಡಿಮೆ ಮತಗಟ್ಟೆ ಇರುವ ಸಂಸದೀಯ ಕ್ಷೇತ್ರಗಳ ಸಂಖ್ಯೆ 11. 3000 ಗಿಂತ ಹೆಚ್ಚಿನ ಮತಗಟ್ಟೆ ಇರುವ ಸಂಸದೀಯ ಕ್ಷೇತ್ರಗಳ ಸಂಖ್ಯೆ 3. 2019 ಕ್ಕೆ ಹೋಲಿಸಿದರೆ 2024 ರಲ್ಲಿ ಅತಿ ಹೆಚ್ಚು ಹೊಸ ಮತದಾನ ಕೇಂದ್ರಗಳನ್ನು ಹೊಂದಿರುವ ರಾಜ್ಯ ಬಿಹಾರ (4739 ಮತಗಟ್ಟೆಗಳು) ಆಗಿದೆ, ನಂತರ ಪಶ್ಚಿಮ ಬಂಗಾಳ (1731 ಮತಗಟ್ಟೆಗಳು).

*ನಾಮನಿರ್ದೇಶನಗಳು:*

2019 ರಲ್ಲಿ ಸಲ್ಲಿಕೆಯಾಗಿದ್ದ 11,692 ನಾಮಪತ್ರಗಳಿಗೆ ಹೋಲಿಸಿದರೆ 2024 ರಲ್ಲಿ 12,459 ನಾಮಪತ್ರಗಳು ಸಲ್ಲಿಕೆಯಾಗಿವೆ. ದೇಶದಲ್ಲಿಯೇ ಅತಿ ಹೆಚ್ಚು ನಾಮಪತ್ರಗಳನ್ನು ತೆಲಂಗಾಣ ಜಿಲ್ಲೆಯ ಮಲ್ಕಾಜ್‌ಗಿರಿ ಲೋಕಸಭಾ ಮತಕ್ಷೇತ್ರದಲ್ಲಿ 114 ನಾಮಪತ್ರಗಳು ಸ್ವೀಕೃತವಾಗಿದ್ದರೆ, ಆಸ್ಸಾಂ ರಾಜ್ಯದ ದಿಬ್ರುಗಢ್ ಲೋಕಸಭಾ ಕ್ಷೇತ್ರದಲ್ಲಿ 3 ನಾಮಪತ್ರಗಳು ಸಲ್ಲಿಕೆಯಾಗಿವೆ.

2024 ರ ಚುನಾವಣೆಗಳಲ್ಲಿ 8,360 ನಾಮಪತ್ರಗಳನ್ನು ತಿರಸ್ಕರಿಸಿದ ನಂತರ ಮತ್ತು ದೇಶಾದ್ಯಂತ ಸಲ್ಲಿಸಿದ ಒಟ್ಟು 12,459 ನಾಮಪತ್ರಗಳಿಂದ ಹಿಂತೆಗೆದುಕೊಂಡ ನಂತರ ಸ್ಪರ್ಧಿಸುವ ಅಂತಿಮ ಅಭ್ಯರ್ಥಿಗಳಾಗಿ ಅರ್ಹತೆ ಪಡೆದರು. 2019ರ ಲೋಕಸಭೆ ಚುನಾವಣೆಯಲ್ಲಿ ಸ್ಪರ್ಧಿಸಿದ್ದ ಅಭ್ಯರ್ಥಿಗಳ ಸಂಖ್ಯೆ 8054.

*ಮಹಿಳಾ ಶಕ್ತಿ:*ನೋಂದಾಯಿತ ಮತದಾರರು: 2024 ರ ಒಟ್ಟು ಮತದಾರರು 97,97,51,847 ರಲ್ಲಿ 47,63,11,240 ಮಹಿಳಾ ಮತದಾರರಿದ್ದರು. 2019 ರಲ್ಲಿ ಶೇ.48.09 ಒಟ್ಟು ಮಹಿಳಾ ಮತದಾರರು 43,85,37,911 ಗೆ ಹೋಲಿಸಿದರೆ 2024 ರಲ್ಲಿ ಶೇ.48.62 ಮಹಿಳಾ ಮತದಾರರು ಇದ್ದಾರೆ. 2024 ರಲ್ಲಿ ಅತಿ ಹೆಚ್ಚು ಮಹಿಳಾ ಮತದಾರರ ಪಾಲನ್ನು ಹೊಂದಿರುವ ರಾಜ್ಯ ಪುದುಚೇರಿ (ಶೇ.53.03 ರಷ್ಟು), ನಂತರ ಕೇರಳ (ಶೇ.51.56).

2024 ರಲ್ಲಿ, ಪ್ರತಿ 1000 ಪುರುಷ ಮತದಾರರಿಗೆ ಮಹಿಳಾ ಮತದಾರರ ಸಂಖ್ಯೆ ಹೊಸ ಗರಿಷ್ಠ ಅಂದರೆ 946. 2019 ರಲ್ಲಿ ಪ್ರತಿ ಸಾವಿರ ಪುರುಷರಿಗೆ 926 ಮಹಿಳಾ ಮತದಾರರಿದ್ದರು.

*ಮತದಾನ:*ಶೇ.65.55 ಪುರುಷ ಮತದಾರರಿಗೆ ಹೋಲಿಸಿದರೆ ಶೇ.65.78 ಮಹಿಳಾ ಮತದಾರರು 2024 ರಲ್ಲಿ (ಸೂರತ್ ಹೊರತುಪಡಿಸಿ) ಮತ ಚಲಾಯಿಸಿದ್ದಾರೆ. 2019 ರಂತೆಯೇ 2024 ರಲ್ಲಿ ಮಹಿಳೆಯರ ಸಂಖ್ಯೆಯು ಪುರುಷರಿಗಿಂತ ಹೆಚ್ಚಾಗಿದೆ; ಸಾರ್ವತ್ರಿಕ ಲೋಕಸಭಾ ಚುನಾವಣೆಯ ಇತಿಹಾಸದಲ್ಲಿ ಇದು ಎರಡನೇ ಬಾರಿ.ಮಹಿಳಾ ಮತದಾರರಲ್ಲಿ ಅತಿ ಹೆಚ್ಚು ವಿಟಿಆರ್ ಹೊಂದಿರುವ ಸಂಸದೀಯ ಕ್ಷೇತ್ರ ಶೇ.92.17, ಮಹಿಳಾ ಮತದಾನದೊಂದಿಗೆ ಧುಬ್ರಿ (ಅಸ್ಸಾಂ), ಶೇ.87.57 ರೊಂದಿಗೆ ತಮ್ಲುಕ್ (ಪಶ್ಚಿಮ ಬಂಗಾಳ) ನಂತರದ ಸ್ಥಾನದಲ್ಲಿದೆ.

*ಮಹಿಳಾ ಅಭ್ಯರ್ಥಿಗಳು:*

2019 ರಲ್ಲಿ 726 ಮಹಿಳಾ ಸ್ಪರ್ಧಿ ಅಭ್ಯರ್ಥಿಗಳಿಗೆ ಹೋಲಿಸಿದರೆ, 2024 ರಲ್ಲಿ ಮಹಿಳಾ ಸ್ಪರ್ಧಿ ಅಭ್ಯರ್ಥಿಗಳ ಸಂಖ್ಯೆ 800 ಆಗಿತ್ತು. ಅತಿ ಹೆಚ್ಚು ಮಹಿಳಾ ಅಭ್ಯರ್ಥಿಗಳನ್ನು ಹೊಂದಿರುವ ರಾಜ್ಯ: ಮಹಾರಾಷ್ಟ್ರ [111] ನಂತರ ಉತ್ತರ ಪ್ರದೇಶ [80] ಮತ್ತು ತಮಿಳುನಾಡು [77]. ಎಲ್ಲಾ ಒಟ್ಟು 543 ಲೋಕಸಭಾ ಕ್ಷೇತ್ರಗಳಿಗೆ ಹೋಲಿಸಿದಲ್ಲಿ 152 ಲೋಕಸಭಾ ಕ್ಷೇತ್ರಗಳಲ್ಲಿ ಯಾವುದೇ ಮಹಿಳಾ ಅಭ್ಯರ್ಥಿಗಳು ಸ್ಪರ್ಧಿಸಿರುವುದಿಲ್ಲ.

*ಎಲ್ಲರನ್ನೂ ಒಳಗೊಳ್ಳುವ ಚುನಾವಣೆಗಳು:*

2019 ರಲ್ಲಿ 39,075 ಕ್ಕೆ ಹೋಲಿಸಿದರೆ 2024 ರಲ್ಲಿ 48,272 ತೃತೀಯ ಲಿಂಗ ಮತದಾರರನ್ನು ನೋಂದಾಯಿಸಲಾಗಿದೆ. ಐದು ವರ್ಷಗಳ ಅವಧಿಯಲ್ಲಿ ಶೇ.23.5 ರಷ್ಟು ಹೆಚ್ಚಳವಾಗಿದೆ. ಅತಿ ಹೆಚ್ಚು ನೋಂದಾಯಿತ ತೃತೀಯ ಲಿಂಗ ಮತದಾರರನ್ನು ಹೊಂದಿರುವ ರಾಜ್ಯ ತಮಿಳುನಾಡು (8,467). 2019 ರಲ್ಲಿ 61,67,482 ಗೆ ಹೋಲಿಸಿದರೆ 2024 ರಲ್ಲಿ 90,28,696 ನೋಂದಾಯಿತ ದಿವ್ಯಾಂಗ ಮತದಾರರಿದ್ದಾರೆ.

2019 ರಲ್ಲಿ ಶೇ.14.64 ಕ್ಕೆ ಹೋಲಿಸಿದರೆ 2024 ರ ಲೋಕಸಭಾ ಚುನಾವಣೆಯಲ್ಲಿ ಶೇ.27.09 ತೃತೀಯ ಲಿಂಗ ಮತದಾರರು ಮತ ಚಲಾಯಿಸಿದ್ದಾರೆ-ಬಹುತೇಕ ದ್ವಿಗುಣವಾಗಿದೆ.

2019 ರಲ್ಲಿ 99,844 ನೋಂದಾಯಿತ ಸಾಗರೋತ್ತರ ಮತದಾರರಿಗೆ ಹೋಲಿಸಿದರೆ 2024 ರಲ್ಲಿ 1,19,374 ನೋಂದಾಯಿತ ಸಾಗರೋತ್ತರ ಮತದಾರರು [ಪುರುಷ: 1,06,411; ಮಹಿಳೆ: 12,950; ಮೂರನೇ ಲಿಂಗ: 13].

*ಫಲಿತಾಂಶಗಳು:*

2024 ರ ಸಾರ್ವತ್ರಿಕ ಲೋಕಸಭಾ ಚುನಾವಣೆಯಲ್ಲಿ ದೇಶದಲ್ಲಿ ಒಟ್ಟು 6 ರಾಷ್ಟ್ರೀಯ ಪಕ್ಷಗಳು ಭಾಗವಹಿಸಿದ್ದವು. ಈ 6 ಪಕ್ಷಗಳ ಒಟ್ಟು ಮತ ಹಂಚಿಕೆಯು ಒಟ್ಟು ಮಾನ್ಯ ಮತಗಳ ಶೇ.63.35 ಆಗಿತ್ತು. 2019 ರಲ್ಲಿ 6923 ಅಭ್ಯರ್ಥಿಗಳಿಗೆ ಹೋಲಿಸಿದರೆ 2024 ರ ಚುನಾವಣೆಯಲ್ಲಿ 7190 ಅಭ್ಯರ್ಥಿಗಳು ಠೇವಣಿಗಳನ್ನು ಕಳೆದುಕೊಂಡಿದ್ದರು. ಒಂದು ಲೋಕಸಭಾ ಕ್ಷೇತ್ರ -ಸೂರತ್ (ಗುಜರಾತ್) ಅವಿರೋಧವಾಗಿತ್ತು.

ಒಟ್ಟು 3921 ಸ್ವತಂತ್ರ ಅಭ್ಯರ್ಥಿಗಳು ಸ್ಪರ್ಧಿಸಿದ್ದು, 7 ಮಂದಿ ಮಾತ್ರ ಆಯ್ಕೆಯಾಗಿದ್ದಾರೆ. ಅದರಲ್ಲಿ 3905 ಸ್ವತಂತ್ರ ಅಭ್ಯರ್ಥಿಗಳು ಠೇವಣಿ ಕಳೆದುಕೊಂಡಿದ್ದಾರೆ. ಸ್ವತಂತ್ರ ಅಭ್ಯರ್ಥಿಗಳು ಪಡೆದ ಮತ ಹಂಚಿಕೆ ಒಟ್ಟು ಮಾನ್ಯ ಮತಗಳಲ್ಲಿ ಶೇ.2.79 ಆಗಿ-ತ್ತು. 279 ಸ್ವತಂತ್ರ ಮಹಿಳಾ ಅಭ್ಯರ್ಥಿಗಳಿದ್ದರು.

ಪ್ರತಿ ದತ್ತಾಂಶಗಳ ಸವಿವರವಾದ ವರದಿ ಮತ್ತು ಅಂಕಿ-ಅಂಶಗಳನ್ನು ಭಾರತ ಚುನಾವಣಾ ಆಯೋಗದ °APïhttps://www.eci.gov.in/statistical-reports ನಲ್ಲಿ ಪಡೆದುಕೊಳ್ಳಬಹುದು ಎಂದು ಭಾರತ ಚುನಾವಣಾ ಆಯೋಗ ಪ್ರಕಟಣೆಯಲ್ಲಿ ತಿಳಿಸಿದೆ.

## ಜ.02 ರಂದು ಜಿಲ್ಲಾ ಮತ್ತು ತಾಲ್ಲೂಕು ಮಟ್ಟದ ಅಧಿಕಾರಿಗಳಿಗೆ

**ಮಲ್ಲಮ್ಮ ನುಡಿ ವಾರ್ತೆ**

ಬಳ್ಳಾರಿ,ಜ.01:ರಾಜ್ಯ ಮಕ್ಕಳ ಹಕ್ಕುಗಳ ರಕ್ಷಣಾ ಆಯೋಗ ಬೆಂಗಳೂರು, ಜಿಲ್ಲಾ ಕಾನೂನು ಸೇವೆಗಳ ಪ್ರಾಧಿಕಾರ, ಜಿಲ್ಲಾಡಳಿತ, ಜಿಲ್ಲಾ ಪಂಚಾಯತ್, ಮಹಿಳಾ ಮತ್ತು ಮಕ್ಕಳ ಅಭಿವೃದ್ಧಿ ಇಲಾಖೆ, ಮಕ್ಕಳ ವಿಶೇಷ ಪೊಲೀಸ್ ಘಟಕ, ಕಾರ್ಮಿಕ ಇಲಾಖೆ, ಶಾಲಾ ಶಿಕ್ಷಣಾ ಮತ್ತು ಸಾಕ್ಷಾರತಾ ಇಲಾಖೆ ಹಾಗೂ ಜಿಲ್ಲಾ ಮಕ್ಕಳ ರಕ್ಷಣಾ ಘಟಕ ಇವರ ಸಂಯುಕ್ತಾಶ್ರಯದಲ್ಲಿ ಜ.02 ರಂದು ಮಧ್ಯಾಹ್ನ 02 ಗಂಟೆಗೆ ಜಿಲ್ಲಾ ಪಂಚಾಯತ್‌ನ ನಜೀರ್ ಸಭಾಂಗಣದಲ್ಲಿ 'ಉಚಿತ ಮತ್ತು ಕಡ್ಡಾಯ ಶಿಕ್ಷಣ ಹಕ್ಕು ಕಾಯ್ದೆ-2009' ರ ಕುರಿತು ಜಿಲ್ಲಾ ಮತ್ತು ತಾಲ್ಲೂಕು ಮಟ್ಟದ ಅಧಿಕಾರಿಗಳಿಗೆ ಕಾರ್ಯಾಗಾರ ಏರ್ಪಡಿಸಲಾಗಿದೆ.ರಾಜ್ಯ ಮಕ್ಕಳ ಹಕ್ಕುಗಳ ರಕ್ಷಣಾ ಆಯೋಗದ ಸದಸ್ಯರಾದ ಶಶಿಧರ ಕೋಸಂಬೆ ಅವರು ಕಾರ್ಯಕ್ರಮ ಉದ್ಘಾಟಿಸುವರು.ಜಿಲ್ಲಾಧಿಕಾರಿ ಪ್ರಶಾಂತ್ ಕುಮಾರ ಮಿಶ್ರಾ ಅವರು ಅಧ್ಯಕ್ಷತೆ ವಹಿಸುವರು.ಜಿಲ್ಲಾ ಕಾನೂನು ಸೇವೆಗಳ ಪ್ರಾಧಿಕಾರದ ಸದಸ್ಯ ಕಾರ್ಯದರ್ಶಿ ಹಾಗೂ ಹಿರಿಯ ಸಿವಿಲ್ ನ್ಯಾಯಾಧೀಶರಾದ ರಾಜೇಶ್ ಎನ್.ಹೊಸಮನೆ, ಜಿಲ್ಲಾ ಪಂಚಾಯತ್‌ನ ಮುಖ್ಯ ಕಾರ್ಯನಿರ್ವಾಹಕ ಅಧಿಕಾರಿ ರಾಹುಲ್ ಶರಣಪ್ಪ ಸಂಕನೂರ, ಎಸ್‌ಜೆಪಿಯು ಘಟಕದ ನೋಡೆಲ್ ಅಧಿಕಾರಿಯೂ ಆದ ಎಎಸ್ಪಿ ರವಿಕುಮಾರ್.ಕೆ.ಪಿ., ಮಹಿಳಾ ಮತ್ತು ಮಕ್ಕಳ ಅಭಿವೃದ್ಧಿ ಇಲಾಖೆಯ ಉಪನಿರ್ದೇಶಕ ವಿಜಯ್ ಕುಮಾರ್.ಕೆ.ಹೆಚ್., ಶಾಲಾ ಶಿಕ್ಷಣಾ ಮತ್ತು ಸಾಕ್ಷರತಾ ಇಲಾಖೆಯ ಉಪನಿರ್ದೇಶಕರಾದ ಬಿ.ಉಮಾದೇವಿ, ಮಕ್ಕಳ ಕಲ್ಯಾಣ ಸಮಿತಿಯ ಅಧ್ಯಕ್ಷರಾದ ವಿಜಯಲಕ್ಷ್ಮೀ ಮೈದೂರು, ಜಿಲ್ಲಾ ಮಕ್ಕಳ ರಕ್ಷಣಾಧಿಕಾರಿ ಎಳೆನಾಗಪ್ಪ, ಸಂಪನ್ಮೂಲ ವ್ಯಕ್ತಿಗಳಾಗಿ ರಾಜ್ಯ ಮಕ್ಕಳ ಹಕ್ಕುಗಳ ರಕ್ಷಣಾ ಆಯೋಗದ ಮಾಜಿ ಸದಸ್ಯರಾದ ಹೆಚ್.ಸಿ.ರಾಘವೇಂದ್ರ ಭಟ್ ಸೇರಿದಂತೆ ಜಿಲ್ಲಾ ಮಕ್ಕಳ ರಕ್ಷಣಾ ಘಟಕದ ಸಿಬ್ಬಂದಿಗಳು ಮತ್ತು ಸರ್ಕಾರಿ ಮಕ್ಕಳ ಪಾಲನಾ ಸಂಸ್ಥೆಯ ಅಧೀಕ್ಷಕರುಗಳು ಹಾಗೂ ಇತರರು ಉಪಸ್ಥಿತರಿರುವರು ಎಂದು ಪ್ರಕಟಣೆ ತಿಳಿಸಿದೆ.

## ಜ.03 ರಂದು ಬೃಹತ್ ಉದ್ಯೋಗ ಮೇಳ

**ಮಲ್ಲಮ್ಮ ನುಡಿ ವಾರ್ತೆ**

ಬಳ್ಳಾರಿ,ಜ.01:ಕೌಶಲ್ಯಾಭಿವೃದ್ಧಿ, ಉದ್ಯಮಶೀಲತೆ ಮತ್ತು ಜೀವನೋಪಾಯ ಇಲಾಖೆ, ಜಿಲ್ಲಾ ಕೌಶಲ್ಯಾಭಿವೃದ್ಧಿ ಕಚೇರಿ ಇವರ ಸಂಯುಕ್ತಾಶ್ರಯದಲ್ಲಿ ಕೌಶಲ್ಯ ಮತ್ತು ರೋಜ್‌ಗಾರ್ ಮೇಳ ಅಡಿ ಜ.03 ರಂದು ಬೆಳಿಗ್ಗೆ 10 ಗಂಟೆಗೆ ನಗರದ ಡಾ.ರಾಜ್‌ಕುಮಾರ್ ರಸ್ತೆಯ ಶ್ರೀಮತಿ ಸರಳಾದೇವಿ ಸತೀಶ್ಚಂದ್ರ ಅಗರ್ವಾಲ್ ಸರ್ಕಾರಿ ಪ್ರಥಮ ದರ್ಜೆ ಕಾಲೇಜು (ಸ್ವಾಯತ್ತ), ಇಲ್ಲಿ ಬೃಹತ್ ಉದ್ಯೋಗ ಮೇಳ ಆಯೋಜಿಸಲಾಗಿದೆ.ಉದ್ಯೋಗ ಮೇಳದಲ್ಲಿ ಸುಮಾರು 40 ರಿಂದ 50 ಕಂಪನಿಗಳು ಭಾಗವಹಿಸಲಿದ್ದು, ನಿರುದ್ಯೋಗ ಯುವಕ, ಯುವತಿಯರಿಗೆ ಉದ್ಯೋಗ ಕಲ್ಪಿಸಲು ಉದ್ದೇಶಿಸಲಾಗಿದೆ. ಎಸ್.ಎಸ್.ಎಲ್.ಸಿ, ಪಿ.ಯು.ಸಿ, ಐ.ಟಿ.ಐ, ಡಿಪ್ಲೋಮಾ, ಪದವಿ ಮತ್ತು ಸ್ನಾತಕೋತ್ತರ ಪದವಿ ವಿದ್ಯಾರ್ಹತೆವುಳ್ಳ ಉದ್ಯೋಕಾಂಕ್ಷಿಗಳು ಪೂರಕ ದಾಖಲಾತಿಗಳೊಂದಿಗೆ ಮೇಳದಲ್ಲಿ ಭಾಗವಹಿಸಬಹುದಾಗಿದೆ. ಉದ್ಯೋಗಾಕಾಂಕ್ಷಿಗಳು ನೋಂದಣಿಗಾಗಿ ಇಲಾಖೆಯಿಂದ ಸೃಜಿಸಲಾಗಿರುವ ಗೂಗಲ್ ಫಾರ್ಮ್ ಲಿಂಕ್ https://forms.gle/YhbVhDQqMmHRF1uV7gÀ°è ನೋಂದಾಯಿಸಿಕೊಳ್ಳಬಹುದು. ಹೆಚ್ಚಿನ ಮಾಹಿತಿಗಾಗಿ ಜಿಲ್ಲಾ ಕೌಶಲ್ಯ ಮಿಷನ್ ಕಚೇರಿ ಅಥವಾ ದೂ.08392-294230 ಮತ್ತು ಮೊ.9844444958, 6361607038 ಗೆ ಸಂಪರ್ಕಿಸಬಹುದು ಎಂದು ಜಿಲ್ಲಾ ಕೌಶ್ಯಲಾಭಿವೃದ್ಧಿ ಅಧಿಕಾರಿ ಪ್ರಾಣೇಶ್ ಅವರು ಪ್ರಕಟಣೆಯಲ್ಲಿ ತಿಳಿಸಿದ್ದಾರೆ.

### ಕನ್ನಡ ಪುಸ್ತಕ ಪ್ರಾಧಿಕಾರದ ಪ್ರಕಟಣೆಗಳಿಗೆ
## ಶೇ.50ರಷ್ಟು ರಿಯಾಯಿತಿ

**ಮಲ್ಲಮ್ಮ ನುಡಿ ವಾರ್ತೆ**

ಬಳ್ಳಾರಿ,ಜ.01: ಗಣರಾಜ್ಯೋತ್ಸವದ ದಿನಾಚರಣೆಯ ಅಂಗವಾಗಿ 2025ರ ಜನವರಿ ತಿಂಗಳು ಪೂರ್ತಿ ಕನ್ನಡ ಪುಸ್ತಕ ಪ್ರಾಧಿಕಾರದ ಎಲ್ಲಾ ಪುಸ್ತಕಗಳನ್ನು ಶೇ.50 ರ ರಿಯಾಯಿತಿ ದರಗಳಲ್ಲಿ ಮಾರಾಟ ಮಾಡಲಾಗುತ್ತಿದ್ದು, ಪುಸ್ತಕ ಪ್ರಿಯರು ಈ ಅವಕಾಶ ಸದುಪಯೋಗಪಡಿಸಿಕೊಳ್ಳಬೇಕು ಎಂದು ಕನ್ನಡ ಪುಸ್ತಕ ಪ್ರಾಧಿಕಾರದ ಆಡಳಿತಾಧಿಕಾರಿ ಕೆ.ಬಿ.ಕಿರಣ್ ಸಿಂಗ್ ಅವರು ತಿಳಿಸಿದ್ದಾರೆ.ಬೆಂಗಳೂರಿನ ಕನ್ನಡ ಭವನದ ಸಿರಿಗನ್ನಡ ಪುಸ್ತಕ ಮಳಿಗೆಯಲ್ಲಿ (ಸಂಪರ್ಕ ಸಂಖ್ಯೆ:080-22107705) ಹಾಗೂ ಎಲ್ಲಾ ಜಿಲ್ಲೆಗಳ ಕನ್ನಡ ಮತ್ತು ಸಂಸ್ಕೃತಿ ಇಲಾಖೆಯ ಸಹಾಯಕ ನಿರ್ದೇಶಕರ ಕಚೇರಿಯಲ್ಲಿ ಹಾಗೂ ಕನ್ನಡ ಪುಸ್ತಕ ಪ್ರಾಧಿಕಾರದಿಂದ ತೆರೆಯಲಾದ ಎಲ್ಲಾ ಸಿರಿಗನ್ನಡ ಪುಸ್ತಕ ಮಾರಾಟ ಮಳಿಗೆಗಳಲ್ಲಿ ಈ ರಿಯಾಯಿತಿ ಸೌಲಭ್ಯ ದೊರೆಯಲಿದೆ.ಕನ್ನಡ ಪುಸ್ತಕ ಪ್ರಾಧಿಕಾರವು ಕನ್ನಡ ಸಾಹಿತ್ಯ ಕ್ಷೇತ್ರಕ್ಕೆ ಸಂಬಂಧಿಸಿದಂತೆ ಎಲ್ಲಾ ಪ್ರಕಾರದ ಸಾಹಿತ್ಯ ಕೃತಿಗಳನ್ನು ಈವರೆಗೆ ಪ್ರಕಟಿಸುತ್ತಾ ಬಂದಿದೆ. ಇವುಗಳಲ್ಲಿ ವ್ಯಕ್ತಿ ಚಿತ್ರಗಳು, ನಾಟಕಗಳು, ಅಲೆಮಾರಿ ಸಮುದಾಯ, ವೈದ್ಯಕೀಯ, ಪ್ರಾಚೀನ ಕನ್ನಡ ಸಾಹಿತ್ಯ, ಜಾನಪದ, ಪರಿಸರ, ಕೃಷಿ ಹೀಗೆ ಹಲವು ಹತ್ತು ಪ್ರಕಾರಗಳಲ್ಲಿ ಸಾಹಿತ್ಯ ಕೃತಿಗಳನ್ನು ಇದುವರೆಗೆ ಸುಮಾರು 704 ಶೀರ್ಷಿಕೆಗಳನ್ನು ಮುದ್ರಿಸಿ ಪ್ರಕಟಿಸಿದೆ. ಅತ್ಯಂತ ಮೌಲಿಕವಾದ, ಪ್ರಾಜ್ಞರಿಂದ ರಚಿತವಾದ ಈ ಕೃತಿಗಳನ್ನು ಜನಸಾಮಾನ್ಯರಿಗೆ ಸುಲಭಬೆಲೆಯಲ್ಲಿ ತಲುಪಿಸಬೇಕೆಂಬ ಉದ್ದೇಶ ಕನ್ನಡ ಪುಸ್ತಕ ಪ್ರಾಧಿಕಾರ ಹೊಂದಿದೆ. ಕನ್ನಡ ಪುಸ್ತಕ ಪ್ರಾಧಿಕಾರದ ಆನ್‌ಲೈನ್ https://kpp.karnataka.gov.in (ಆನ್‌ಲೈನ್ ಪುಸ್ತಕ ಖರೀದಿಗೆ ಇಲ್ಲಿ ವೀಕ್ಷಿಸಿ ವಿಭಾಗ) ನಲ್ಲಿ ಕೂಡ ಈ ಶೇ.50 ರಷ್ಟು ರಿಯಾಯಿತಿ ಲಭ್ಯವಿದೆ ಎಂದು ಅವರು ಪ್ರಕಟಣೆಯಲ್ಲಿ ತಿಳಿಸಿದ್ದಾರೆ.

ಬಳ್ಳಾರಿ,ಜ.01:ಗಣರಾಜ್ಯೋತ್ಸವದ ದಿನಾಚರಣೆಯ ಅಂಗವಾಗಿ 2025ರ ಜನವರಿ ತಿಂಗಳು ಪೂರ್ತಿ ಕನ್ನಡ ಪುಸ್ತಕ ಪ್ರಾಧಿಕಾರದ ಎಲ್ಲಾ ಪುಸ್ತಕಗಳನ್ನು ಶೇ.50 ರ ರಿಯಾಯಿತಿ ದರಗಳಲ್ಲಿ ಮಾರಾಟ ಮಾಡಲಾಗುತ್ತಿದ್ದು, ಪುಸ್ತಕ ಪ್ರಿಯರು ಈ ಅವಕಾಶ ಸದುಪಯೋಗಪಡಿಸಿಕೊಳ್ಳಬೇಕು ಎಂದು ಕನ್ನಡ ಪುಸ್ತಕ ಪ್ರಾಧಿಕಾರದ ಆಡಳಿತಾಧಿಕಾರಿ ಕೆ.ಬಿ.ಕಿರಣ್ ಸಿಂಗ್ ಅವರು ತಿಳಿಸಿದ್ದಾರೆ.ಬೆಂಗಳೂರಿನ ಕನ್ನಡ ಭವನದ ಸಿರಿಗನ್ನಡ ಪುಸ್ತಕ ಮಳಿಗೆಯಲ್ಲಿ (ಸಂಪರ್ಕ ಸಂಖ್ಯೆ:080-22107705) ಹಾಗೂ ಎಲ್ಲಾ ಜಿಲ್ಲೆಗಳ ಕನ್ನಡ ಮತ್ತು ಸಂಸ್ಕೃತಿ ಇಲಾಖೆಯ ಸಹಾಯಕ ನಿರ್ದೇಶಕರ ಕಚೇರಿಯಲ್ಲಿ ಹಾಗೂ ಕನ್ನಡ ಪುಸ್ತಕ ಪ್ರಾಧಿಕಾರದಿಂದ ತೆರೆಯಲಾದ ಎಲ್ಲಾ ಸಿರಿಗನ್ನಡ ಪುಸ್ತಕ ಮಾರಾಟ ಮಳಿಗೆಗಳಲ್ಲಿ ಈ ರಿಯಾಯಿತಿ ಸೌಲಭ್ಯ ದೊರೆಯಲಿದೆ.ಕನ್ನಡ ಪುಸ್ತಕ ಪ್ರಾಧಿಕಾರವು ಕನ್ನಡ ಸಾಹಿತ್ಯಕ್ಷೇತ್ರಕ್ಕೆ ಸಂಬಂಧಿಸಿದಂತೆ ಎಲ್ಲಾ ಪ್ರಕಾರದ ಸಾಹಿತ್ಯ ಕೃತಿಗಳನ್ನು ಈವರೆಗೆ ಪ್ರಕಟಿಸುತ್ತಾ ಬಂದಿದೆ. ಇವುಗಳಲ್ಲಿ ವ್ಯಕ್ತಿ ಚಿತ್ರಗಳು, ನಾಟಕಗಳು, ಅಲೆಮಾರಿ ಸಮುದಾಯ, ವೈದ್ಯಕೀಯ, ಪ್ರಾಚೀನ ಕನ್ನಡ ಸಾಹಿತ್ಯ, ಜಾನಪದ, ಪರಿಸರ, ಕೃಷಿ ಹೀಗೆ ಹಲವು ಹತ್ತು ಪ್ರಕಾರಗಳಲ್ಲಿ ಸಾಹಿತ್ಯ ಕೃತಿಗಳನ್ನು ಇದುವರೆಗೆ ಸುಮಾರು 704 ಶೀರ್ಷಿಕೆಗಳನ್ನು ಮುದ್ರಿಸಿ ಪ್ರಕಟಿಸಿದೆ. ಅತ್ಯಂತ ಮೌಲಿಕವಾದ, ಪ್ರಾಜ್ಞರಿಂದ ರಚಿತವಾದ ಈ ಕೃತಿಗಳನ್ನು ಜನಸಾಮಾನ್ಯರಿಗೆ ಸುಲಭ ಬೆಲೆಯಲ್ಲಿ ತಲುಪಿಸಬೇಕೆಂಬ ಉದ್ದೇಶ ಕನ್ನಡ ಪುಸ್ತಕ ಪ್ರಾಧಿಕಾರ ಹೊಂದಿದೆ. ಕನ್ನಡ ಪುಸ್ತಕ ಪ್ರಾಧಿಕಾರದ ಆನ್‌ಲೈನ್ https://kpp.karnataka.gov.in (ಆನ್‌ಲೈನ್ ಪುಸ್ತಕ ಖರೀದಿಗೆ ಇಲ್ಲಿ ವೀಕ್ಷಿಸಿ ವಿಭಾಗ) ನಲ್ಲಿ ಕೂಡ ಈ ಶೇ.50 ರಷ್ಟು ರಿಯಾಯಿತಿ ಲಭ್ಯವಿದೆ ಎಂದು ಅವರು ಪ್ರಕಟಣೆಯಲ್ಲಿ ತಿಳಿಸಿದ್ದಾರೆ.

ಬಳ್ಳಾರಿ,ಜ.01:ಗಣರಾಜ್ಯೋತ್ಸವದ ದಿನಾಚರಣೆಯ ಅಂಗವಾಗಿ 2025ರ ಜನವರಿ ತಿಂಗಳು ಪೂರ್ತಿ ಕನ್ನಡ ಪುಸ್ತಕ ಪ್ರಾಧಿಕಾರದ ಎಲ್ಲಾ ಪುಸ್ತಕಗಳನ್ನು ಶೇ.50 ರ ರಿಯಾಯಿತಿ ದರಗಳಲ್ಲಿ ಮಾರಾಟ ಮಾಡಲಾಗುತ್ತಿದ್ದು, ಪುಸ್ತಕ ಪ್ರಿಯರು ಈ ಅವಕಾಶ ಸದುಪಯೋಗಪಡಿಸಿಕೊಳ್ಳಬೇಕು ಎಂದು ಕನ್ನಡ ಪುಸ್ತಕ ಪ್ರಾಧಿಕಾರದ ಆಡಳಿತಾಧಿಕಾರಿ ಕೆ.ಬಿ.ಕಿರಣ್ ಸಿಂಗ್ ಅವರು ತಿಳಿಸಿದ್ದಾರೆ.ಬೆಂಗಳೂರಿನ ಕನ್ನಡ ಭವನದ ಸಿರಿಗನ್ನಡ ಪುಸ್ತಕ ಮಳಿಗೆಯಲ್ಲಿ (ಸಂಪರ್ಕ ಸಂ-ಖ್ಯೆ:080-22107705) ಹಾಗೂ ಎಲ್ಲಾ ಜಿಲ್ಲೆಗಳ ಕನ್ನಡ ಮತ್ತು ಸಂಸ್ಕೃತಿ ಇಲಾಖೆಯ ಸಹಾಯಕ ನಿರ್ದೇಶಕರ ಕಚೇರಿಯಲ್ಲಿ ಹಾಗೂ ಕನ್ನಡ ಪುಸ್ತಕ ಪ್ರಾಧಿಕಾರದಿಂದ ತೆರೆಯಲಾದ ಎಲ್ಲಾ ಸಿರಿಗನ್ನಡ ಪುಸ್ತಕ ಮಾರಾಟ ಮಳಿಗೆಗಳಲ್ಲಿ ಈ ರಿಯಾಯಿತಿ ಸೌಲಭ್ಯ ದೊರೆಯಲಿದೆ.ಕನ್ನಡ ಪುಸ್ತಕ ಪ್ರಾಧಿಕಾರವು ಕನ್ನಡ ಸಾಹಿತ್ಯಕ್ಷೇತ್ರಕೆ ಸಂಬಂಧಿಸಿದಂತೆ ಎಲ್ಲಾ ಪ್ರಕಾರದ

# ಜನವರಿ 6 ರೊಳಗಾಗಿ ಆಸ್ತಿಗೆ ಸಂಬಂಧಿಸಿದ ದಾಖಲೆ ಸಲ್ಲಿಕೆಗೆ ಸೂಚನೆ



ಮಲ್ಲಮ್ಮ ನುಡಿ ವಾರ್ತೆ

ಕಲಬುರಗಿ,ಜ.1–ಕಲಬುರಗಿ ನಗರದ ಕೋಟನೂರ(ಡಿ) ಗ್ರಾಮದ ಸಾಯಿ ಮಂದಿರ ಬಡಾವಣೆಯಿಂದಗಂಗಾವಿಹಾರ ಅಪಾರ್ಟ್‌ಮೆಂಟ್ ವರೆಗೆ ಬ್ರಹ್ಮಪೂರ ಸರ್ವೇ ನಂ 77, 77 ಪಾರ್ಟ್, 77/1, 78/2/ಎ/3 ಮತ್ತು 78/2/ಎ2/ಬಿ2 ಮತ್ತು ಕೋಟನೂರ(ಡಿ) ಸರ್ವೇ ನಂ. 15, 15 ಪಾರ್ಟ್, 15/3, 15/4, 5, 6, 7, 8 ಮತ್ತು 16/ಎ/1 ರಲ್ಲಿ ರಸ್ತೆ ನಿರ್ಮಾಣ ಕಾರ್ಯ ಕೈಗೊಳ್ಳಬೇಕಾಗಿರುವ ಹಿನ್ನೆಲೆಯಲ್ಲಿ ಪಾಲಿಕೆಯ ವತಿಯಿಂದ ಸಮೀಕ್ಷೆ ಕಾರ್ಯ ಕೈಗೊಳ್ಳಲಾಗುತ್ತಿದ್ದು, ಸದರಿ ಸರ್ವೆ ನಂಬರ್‌ನಲ್ಲಿ ವಾಸಿಸುವ ನಿವಾಸಿಗಳು ತಮ್ಮ ಆಸ್ತಿಗೆ ಸಂಬಂಧಿಸಿದ ದಾಖಲೆಗಳನ್ನು ಜನವರಿ 6ರೊಳಗೆ ಪಾಲಿಕೆಯ ವಲಯ ಕಚೇರಿಗೆ ಸಲ್ಲಿಸಬೇಕೆಂದು ವಲಯ–1ರ ಆಯುಕ್ತರು ತಿಳಿಸಿದ್ದಾರೆ.

ಮೇಲ್ಕಂಡ ಸದರಿ ಸರ್ವೇ ನಂಬರ್ ಬಡಾವಣೆಗಳ ನಿವಾಸಿಗಳಿಗೆ ವಲಯ ಆಯುಕ್ತರ ಕಚೇರಿಯಿಂದ ಈಗಾಗಲೆ ದಿನಾಂಕ 19–10–2024 ಮತ್ತು 13–12–2024 ರಂದು ನೋಟೀಸ್ ನೀಡಲಾಗಿದ್ದು, ಇದೂವರೆಗೆ ಸ್ಥಳೀಯ ಬಡಾವಣೆಗಳ ನಿವಾಸಿಗಳಿಂದ ಸೂಕ್ತ ಸ್ಪಂದನೆ ದೊರೆತ್ತಿರುವುದಿಲ್ಲ. ಒಂದು ವೇಳೆ ಜನವರಿ 6 ರೊಳಗಾಗಿ ಆಸ್ತಿ ದಾಖಲೆ ಹಾಜರಪಡಿಸದಿದ್ದಲ್ಲಿ ಮಹಾನಗರ ಪಾಲಿಕೆಯು ಏಕಪಕ್ಷೀಯವಾಗಿ ಮುಂದಿನ ನಿರ್ಧಾರ ಕೈಗೊಂಡು ಕಾನೂನು ಪ್ರಕಾರ ಕ್ರಮ ತೆಗೆದುಕೊಳ್ಳಲಿದೆ ಎಂದು ಅವರು ಪ್ರಕಟಣೆಯಲ್ಲಿ ತಿಳಿಸಿದ್ದಾರೆ.

# ಹೊಸ ವರ್ಷದಲ್ಲಿ ಸಂಪುಟ ಪುನಾರಚನೆ; ಪ್ರಿಯಾಂಕ್ ಖರ್ಗೆ ವಿರುದ್ಧ ಸಾಕ್ಷ್ಯ ಇಲ್ಲ: ಸಿಎಂ ಸಿದ್ದರಾಮಯ್ಯ



ಮಲ್ಲಮ್ಮ ನುಡಿ ವಾರ್ತೆ

ಬೆಂಗಳೂರು: ಸಿವಿಲ್ ಗುತ್ತಿಗೆದಾರ ಆತ್ಮಹತ್ಯೆ ಪ್ರಕರಣದಲ್ಲಿ ಸಚಿವ ಪ್ರಿಯಾಂಕ್ ಖರ್ಗೆ ವಿರುದ್ಧ ಯಾವುದೇ ಸಾಕ್ಷ್ಯಾಧಾರಗಳಿಲ್ಲ ಎಂದು ಮುಖ್ಯಮಂತ್ರಿ ಸಿದ್ದರಾಮಯ್ಯ ಅವರು ಬುಧವಾರ ಹೇಳಿದ್ದಾರೆ.

ಇಂದು ನಗರದಲ್ಲಿ ಸುದ್ದಿಗಾರರೊಂದಿಗೆ ಮಾತನಾಡಿದ ಸಿದ್ದರಾಮಯ್ಯ, ಆತ್ಮಹತ್ಯೆ ಪ್ರಕರಣದ ತನಿಖೆಯನ್ನು ಅಪರಾಧ ತನಿಖಾ ಇಲಾಖೆ(ಸಿಐಡಿ)ಗೆ ವಹಿಸಲಾಗಿದ್ದು, ಅದರ ವರದಿಗಾಗಿ ಕಾಯಲಾಗುತ್ತಿದೆ ಎಂದರು.

ಡೆತ್ ನೋಟ್ ನಲ್ಲಿ ಪ್ರಿಯಾಂಕ್ ಖರ್ಗೆ ಹೆಸರಿಲ್ಲ. ಅದರಲ್ಲಿ ಅವರ ಪಾತ್ರವಿಲ್ಲ. ಅವರ ವಿರುದ್ಧ ಯಾವುದೇ ಸಾಕ್ಷ್ಯಾಧಾರಗಳಿಲ್ಲ. ಆದರೂ ರಾಜೀನಾಮೆ ನೀಡುವಂತೆ ಪ್ರತಿಪಕ್ಷಗಳು ಕೇಳುತ್ತಿವೆ ಎಂದರು.

ಬೀದರ್ ಜಿಲ್ಲೆಯ ಸಿವಿಲ್ ಗುತ್ತಿಗೆದಾರ ಸಚಿನ್ ಪಾಂಚಾಲ್ ಆತ್ಮಹತ್ಯೆಗೆ ಸಂಬಂಧಿಸಿದಂತೆ ಕಾಂಗ್ರೆಸ್ ಸರ್ಕಾರದ ವಿರುದ್ಧ ವಾಗ್ದಾಳಿ ನಡೆಸುತ್ತಿರುವ ಬಿಜೆಪಿ, ಪ್ರಿಯಾಂಕ್ ಖರ್ಗೆ ರಾಜೀನಾಮೆ ನೀಡಬೇಕು ಎಂದು ಒತ್ತಾಯಿಸುತ್ತಿದೆ.

ರಾಜು ಕಪನೂರ್ ಅವರು ತನಗೆ ಒಂದು ಕೋಟಿ ರೂಪಾಯಿ ನೀಡುವಂತೆ ಪೀಡಿಸಿದ್ದಾರೆ ಎಂದು ಪಾಂಚಾಲ್ ಅವರು ತಮ್ಮ ಆತ್ಮಹತ್ಯೆ ಪತ್ರದಲ್ಲಿ ಆರೋಪಿಸಿದ್ದು, ಈ ಆರೋಪವನ್ನು ಅವರು ನಿರಾಕರಿಸಿದ್ದಾರೆ.

ಕಪನೂರ ಗ್ರಾಮೀಣಾಭಿವೃದ್ಧಿ ಮತ್ತು ಪಂಚಾಯತ್ ರಾಜ್ ಸಚಿವ ಖರ್ಗೆ ಅವರ ಆಪ್ತರು ಎಂದು ಬಿಜೆಪಿ ಆರೋಪಿಸಿದೆ.

40 ಪರ್ಸೆಂಟ್ ಕಮಿಷನ್ ಕೇಳುತ್ತಿದ್ದಾರೆ ಎಂದು ಗುತ್ತಿಗೆದಾರರೊಬ್ಬರು ಹೇಳಿದ್ದಕ್ಕೆ ಕೆಎಸ್ ಈಶ್ವರಪ್ಪ ಅವರು ಸಚಿವ ಸ್ಥಾನಕ್ಕೆ ರಾಜೀನಾಮೆ ನೀಡಿದ್ದರು. ಆದರೆ ಪ್ರಿಯಾಂಕ್ ಖರ್ಗೆ ಏಕೆ ರಾಜೀನಾಮೆ ನೀಡುತ್ತಿಲ್ಲ? ಎಂಬ ಬಿಜೆಪಿ ಪ್ರಶ್ನೆಗೆ ಪ್ರತಿಕ್ರಿಯಿಸಿದ ಸಿಎಂ, ಅವರೇಕೆ ರಾಜೀನಾಮೆ ನೀಡಬೇಕು?" ಸೂಸೈಡ್ ನೋಟ್‌ನಲ್ಲಿ ಈಶ್ವರಪ್ಪ ಅವರ ಹೆಸರಿತ್ತು. ಹೀಗಾಗಿ ರಾಜೀನಾಮೆ ನೀಡಿದ್ದರು ಎಂದು ತಿರುಗೇಟು ನೀಡಿದರು.

ಆತ್ಮಹತ್ಯೆ ಪತ್ರದಲ್ಲಿ ಪ್ರಿಯಾಂಕ್ ಖರ್ಗೆ ಹೆಸರಿದೆಯೇ? ಅವರ ಹೆಸರನ್ನು ಎಲ್ಲಿಯೂ ಉಲ್ಲೇಖಿಸಿಲ್ಲ. ಈ ಸಂಬಂಧ ಯಾವುದೇ ತನಿಖೆಗೂ ಸಿದ್ಧ ಎಂದು ಸಚಿವರು ಹೇಳಿದ್ದಾರೆ ಎಂದು ಮುಖ್ಯಮಂತ್ರಿ ಹೇಳಿದರು.


ದೂರಿನ ಆಧಾರದ ಮೇಲೆ ಪ್ರಕರಣವನ್ನು ಸಿಐಡಿಗೆ ಹಸ್ತಾಂತರಿಸಲಾಗಿದ್ದು, ವರದಿಗಾಗಿ ಕಾಯಲಾಗುತ್ತಿದೆ. ಒಮ್ಮೆ ವರದಿ ಸಲ್ಲಿಕೆಯಾದ ನಂತರ ಪ್ರಿಯಾಂಕ್ ಖರ್ಗೆ ಏನಾದರೂ ತಪ್ಪು ಮಾಡಿದ್ದಾರೆಯೇ ಎಂದು ನೋಡುತ್ತೇವೆ. ಸದ್ಯಕ್ಕೆ ಯಾವುದೇ ಸಾಕ್ಷ್ಯಾಧಾರಗಳಿಲ್ಲ, ದಾಖಲೆ ಇಲ್ಲ ಮತ್ತು ಅವರ ಹೆಸರನ್ನು ಎಲ್ಲಿಯೂ ಉಲ್ಲೇಖಿಸಿಲ್ಲ ಎಂದು ಸಿದ್ದರಾಮಯ್ಯ ಹೇಳಿದರು.

ಸಿಬಿಐ ತನಿಖೆಗೆ ಬಿಜೆಪಿ ಆಗ್ರಹದ ಬಗ್ಗೆ ಪ್ರತಿಕ್ರಿಯಿಸಿದ ಸಿಎಂ, ಕೇಸರಿ ಪಕ್ಷಕ್ಕೆ ರಾಜ್ಯ ಪೊಲೀಸರ ಮೇಲೆ ನಂಬಿಕೆ ಇಲ್ಲವೇ ಎಂದು ಪ್ರಶ್ನಿಸಿದರು.

ಬಿಜೆಪಿ ಅಧಿಕಾರದಲ್ಲಿದ್ದಾಗ ಒಂದೇ ಒಂದು ಪ್ರಕರಣವನ್ನು ಸಿಬಿಐಗೆ ವಹಿಸಿರಲಿಲ್ಲ. ಬಿಜೆಪಿಗೆ ಈಗ ಸಿಬಿಐ ಒಪ್ಪಿಸುವಂತೆ ಕೇಳಲು ಯಾವ ನೈತಿಕತೆ ಇದೆ? ಎಂದು ಪ್ರಶ್ನಿಸಿದರು.

ಇದೇ ವೇಳೆ ಹೊಸ ವರ್ಷದಲ್ಲಿ ಸಚಿವ ಸಂಪುಟ ಪುನಾರಚನೆ ಕುರಿತು ಪಕ್ಷದ ಹೈಕಮಾಂಡ್ ನಿರ್ಧರಿಸಲಿದೆ ಎಂದು ಸಿಎಂ ಸಿದ್ದರಾಮಯ್ಯ ಹೇಳಿದ್ದಾರೆ.

# ಡಾ.ಚನ್ನಬಸವ ಪಟ್ಟದ್ದೇವರ ಮೂರ್ತಿ ಅನಾವರಣ ಪ್ರಯುಕ್ತ ಪೂರ್ವಭಾವಿ ಸಭೆ



ಮಲ್ಲಮ್ಮ ನುಡಿ ವಾರ್ತೆ
(ಪರಮೇಶ ರಾಂಪುರೆ)

ಕಮಲನಗರ:ಭಾಲ್ಕಿ ಹಿರೇಮಠ ಸಂಸ್ಥಾನ ಆಶ್ರಯದಲ್ಲಿ ನಡೆಯುತ್ತಿರುವ ನೀಲಾಂಬಿಕಾ ಆಶ್ರಮ ತಾಲೂಕಿನ ಖೇಡ–ಸಂಗಮದಲ್ಲಿ ಪರಮಪೂಜ್ಯ ಶ್ರೀ ಮ.ಘ.ಚ.ಡಾ.ಚನ್ನಬಸವ ಪಟ್ಟದ್ದೇವರ ಮೂರ್ತಿ ಅನಾವರಣ ಹಾಗೂ ಮನೆಯಲ್ಲಿ ಮಹಾಮನೆಯ ಬೆಳ್ಳಿಹಬ್ಬ ಮತ್ತು ಪೂಜ್ಯ ಶ್ರೀ ಡಾ.ಮಹಾದೇವಮ್ಮ ತಾಯಿಯವರ ದಿವ್ಯಾಂಗ ದೀಪ್ತಿ ಅಭಿನಂದನಾ ಗ್ರಂಥ ಲೋಕಾರ್ಪಣೆ ಸಮಾರಂಭದ ಪೂರ್ವಭಾವಿ ಸಭೆ ನೀಲಾಂಬಿಕಾ ಆಶ್ರಮ ಖೇಡ–ಸಂಗಮದಲ್ಲಿ ನಡೆಯಲಿದೆ.

ಕಾರ್ಯಕ್ರಮದಲ್ಲಿ ಪೂಜ್ಯಶ್ರೀ ನಾಡೋಜ ಡಾ.ಬಸವಲಿಂಗ ಪಟ್ಟದ್ದೇವರು ಹಾಗೂ ಪೂಜ್ಯ ಶ್ರೀ ಗುರುಬಸವ ಪಟ್ಟದ್ದೇವರು ದಿವ್ಯಸಾನಿಧ್ಯದಲ್ಲಿ ಹಾಗೂ ಪೂಜ್ಯಶ್ರೀ ಡಾ.ಮಹಾದೇವಮ್ಮ ತಾಯಿಯವರ ದಿವ್ಯಸಮ್ಮುಖದಲ್ಲಿ ದಿನಾಂಕ: 04–01–2025 ರಂದು ಬೆಳಿಗ್ಗೆ 11–00 ಗಂಟೆಗೆ ಹಮ್ಮಿಕೊಳ್ಳಲಾಗಿದೆ.

ಸಕಲ ಬಸವಭಕ್ತರು ಹೆಚ್ಚಿನ ಸಂಖ್ಯೆಯಲ್ಲಿ ಈ ಸಭೆಯಲ್ಲಿ ಭಾಗವಹಿಸಿ, ತಮ್ಮ ಅಮೂಲ್ಯವಾದ ಸಲಹೆ ಸೂಚನೆಗಳನ್ನು ನೀಡಬೇಕಾಗಿ ಪ್ರಕಟಣೆಯಲ್ಲಿ ತಿಳಿಸಲಾಗಿದೆ.

# ಹೊಸ ವರ್ಷದ ಸಂಭ್ರಮ

ಮಲ್ಲಮ್ಮ ನುಡಿ ವಾರ್ತೆ

ಇಂಡಿ : 2024 ಕಳೆದ ವರ್ಷದ ಹಿನ್ನೆಲೆ 2025 ಹೊಸ ವರ್ಷಕ್ಕೆ ಅದ್ದೂರಿ ಸ್ವಾಗತದೊಂದಿಗೆ ಶಿರಗೂರು ಗ್ರಾಮಸ್ಥರು ಮಧ್ಯರಾತ್ರಿ 12ಕ್ಕೆ ಕೇಕ್ ಕತ್ತರಿಸಿ 2024ಕ್ಕೆ ಬಾಯ್ 2025ಕ್ಕೆ ಹಾಯ್ ಎಂದು ಸೆಲೆಬ್ರೇಷನ್ ಘೋಷಣೆ ಹಾಕುತ್ತಾ ಪ್ರತ್ಯಕ್ ಡ್ಯಾನ್ಸ್ ಮಾಡುವ ಮೂಲಕ ಕುಣಿದು ಕುಬ್ಬಳಿಸುತ್ತಾ ಹೊಸ ವರ್ಷಕ್ಕೆ ಬರಮಾಡಿಕೊಂಡಿದ್ದರು.

ಈ ಸಂದರ್ಭದಲ್ಲಿ ಶಿವಾನಂದ್ ಕೋಳಿ, ಹೀರೋಜ್ ಗೋಡ್ಕೆ, ಮಂಜುನಾಥ್ ಘಂಟೆ, ಆಕಾಶ್ ಹುಡೇದ, ಮಹೇಶ್ ಅಪ್ಪಾಗಿರಿ, ಶಿವಾನಂದ್ ಕೋಳಿ, ಮತ್ತಿತ್ತರು ಉಪಸ್ಥಿತರಿದ್ದರು.

# ಗುತ್ತಿಗೆದಾರ ಸಚಿನ ಆತ್ಮಹತ್ಯೆ ಪ್ರಕರಣ: ತನಿಖೆಗೆ ವಿಶ್ವಕರ್ಮ ಸಮಾಜದ ಆಗ್ರಹ

ಮಲ್ಲಮ್ಮ ನುಡಿ ವಾರ್ತೆ

ಬಾಗಲಕೋಟೆ,ಜ.1–ಬೀದರಜಿಲ್ಲೆ ಬಾಲ್ಕಿ ತಾಲೂಕಿನ ಗುತ್ತಿಗೆದಾರ ವಿಶ್ವಕರ್ಮ ಸಮಾಜದ ಸಚಿನ ಪಾಂಚಾಳ ಆತ್ಮಹತ್ಯೆ ಪ್ರಕರಣದಲ್ಲಿ ಭಾಗಿಯಾಗಿರುವವರನ್ನು ಕೂಡಲೇ ಬಂಧಿಸಿ ಸೂಕ್ತ ಕ್ರಮಕ್ಕೈಗೊಳ್ಳಬೇಕು ಎಂದು ವಿಶ್ವಕರ್ಮ ಸಮಾಜ ಆಗ್ರಹಿಸಿದೆ.

ಮುರನಾಳ ಶ್ರೀ ಮಳೆರಾಜೇಂದ್ರಸ್ವಾಮಿ ಮಠದ ಪೂಜ್ಯ ಮೌನೇಶ್ವರ ಮಹಾಸ್ವಾಮಿಗಳ ನೇತೃತ್ವದಲ್ಲಿ ವಿಶ್ವಕರ್ಮ ಸಮಾಜದವರು ಜಿಲ್ಲಾಧಿಕಾರಿಗಳ ಮುಖಾಂತರ ರಾಜ್ಯಪಾಲರಗೆ ಮನವಿ ಸಲ್ಲಿಸಿ ತನಿಖೆಗೆ ಒತ್ತಾಯಿಸಿದರು.

ಸಚಿನ ಪಂಚಾಳ ಬರೆದಿರುವ ಡೆತ್‌ನೋಟ ಪ್ರಕಾರ ತನಿಖೆಗೆ ಒಳಪಡಿಸಿ ನೊಂದ ಕುಟುಂಬಕ್ಕೆ ನ್ಯಾಯ ಒದಗಿಸಬೇಕು. ಮಾನವೀಯ ಮೌಲ್ಯಗಳ ಆಧಾರದ ಮೇಲೆ ಬದುಕುತ್ತಿರುವ ಸಮಾಜಕ್ಕೆ ಸಾಮಾಜಿಕ ನ್ಯಾಯ ಹಾಗೂ ಭದ್ರತೆ ಸಿಕ್ಕರೆ ನಾವು ಬದುಕಲು ಸಾಧ್ಯ ಹಾಗಾಗಿ ಸಚಿನ ಕುಟುಂಬಕ್ಕೆ ನ್ಯಾಯ ಸಿಗಬೇಕು. ಇಲ್ಲವಾದಲ್ಲಿ ರಾಜ್ಯದಲ್ಲಿ ವಿಶ್ವಕರ್ಮ ಸಮಾಜದ ರಾಜ್ಯದ ಎಲ್ಲ ಸಂಘಟನೆಗಳು ಬೆಂಗಳೂರಿನ ಪ್ರೀಡಂ ಪಾರ್ಕನಲ್ಲಿ ಸೇರಿ ಹೋರಾಟವನ್ನು ಕೈಗೊಳ್ಳಬೇಕಾಗುತ್ತದೆ ಎಂದು ಮಳೆರಾಜೇಂದ್ರಸ್ವಾಮಿ ಮಠ ಪೂಜ್ಯರಾದ ಮೌನೇಶ್ವರ ಮಹಾಸ್ವಾಮಿಗಳು ತಿಳಿಸಿದರು.

ಈ ಸಂದರ್ಭದಲ್ಲಿ ವಿಶ್ವಕರ್ಮ ಸಮಾಜದ ಗಂಗಾಧರ ಬಡಿಗೇರ, ಮುರನಾಳದ ವಿಶ್ವಕರ್ಮ ಸಮಾಜ ಕ್ಷೇಮಾಭಿವೃದ್ಧಿ ಸಂಘದ ಅಧ್ಯಕ್ಷ ಅಶೋಕ ಪತ್ತಾರ, ಉಪಾಧ್ಯಕ್ಷ ಚಂದ್ರಶೇಖರ ಪತ್ತಾರ ಶಿಲ್ಪಿ, ಯುವ ಮುಖಂಡ ಈರಣ್ಣ ಬಡಿಗೇರ ಸೇರಿದಂತೆ ಅನೇಕರು ಇದ್ದರು.

ಹೊಸ ವರ್ಷಾಚರಣೆ ಮುಕ್ತಾಯದ ಬೆನ್ನಲ್ಲೇ ದುರಂತ:

# ರಾಜ್ಯದಲ್ಲಿ ಪ್ರತ್ಯೇಕ ಅಪಘಾತಗಳಲ್ಲಿ ಐವರು ಸಾವು



ಬೆಂಗಳೂರು: ರಾಜ್ಯಜದಲ್ಲಿ ಹೊಸ ವರ್ಷಾಚರಣೆ ಬೆನ್ನಲ್ಲೇ ಚಾಮರಾಜನಗರ ಮತ್ತು ಮಾಗಡಿಯಲ್ಲಿ ಸಂಭವಿಸಿದ 2 ಪ್ರತ್ಯೇಕ ಅಪಘಾತಗಳಲ್ಲಿ ಐದು ಮಂದಿ ಸಾವನ್ನಪ್ಪಿದ್ದಾರೆ.

ಚಾಮರಾಜ ನಗರದಲ್ಲಿ ಹೊಸ ವರ್ಷಾಚರಣೆಯ ಸಂಭ್ರಮ ಮುಗಿಸಿ ಹಿಂತಿರುಗುವಾಗ ವಿದ್ಯುತ್ ಕಂಬಕ್ಕೆ ಕಾರು ಡಿಕ್ಕಿಯಾಗಿ ಸ್ಥಳದಲ್ಲೇ ಇಬ್ಬರು ಮೃತಪಟ್ಟಿದ್ದಾರೆ. ಗುಂಡ್ಲುಪೇಟೆ ತಾಲೂಕಿನ ಕೊಡಸೋಗೆ ಬಳಿ ಇಂದು ಮುಂಜಾನೆ ಈ ಘಟನೆ ನಡೆದಿದೆ.

ಬೊಮ್ಮಲಾಪುರ ಸೆಸ್ಕ್ ಕಚೇರಿಯಲ್ಲಿ ಅಸಿಸ್ಟೆಂಟ್ ಪವರ್ ಮ್ಯಾನ್ ಆಗಿದ್ದ ಪ್ರತಾಪ್(28) ಹಾಗೂ ಕೊಂಗಳ್ಳಯ್ಯ ಎಂಬುವವರು ಸ್ಥಳದಲ್ಲೇ ಮೃತಪಟ್ಟಿದ್ದು, ತೀವ್ರವಾಗಿ ಗಾಯಗೊಂಡಿರುವ ಮಂಡ್ಯ ಜಿಲ್ಲೆಯ ಅಭಿಯನ್ನು ಸಿಮ್ಸ್ ಆಸ್ಪತ್ರೆಗೆ ರವಾನೆ ಮಾಡಲಾಗಿದೆ.

ಕೊಡಸೋಗೆ ಸಮೀಪದ ರಸ್ತೆ ಬದಿಯಲ್ಲಿದ್ದ ಲೈಟ್ ಕಂಬಕ್ಕೆ ಕಾರು ಡಿಕ್ಕಿಯಾದ ರಭಸಕ್ಕೆ ವಿದ್ಯುತ್ ಕಂಬ ಕಾರಿನ ಮೇಲೆ ಮುರಿದು ಬಿದ್ದಿದ್ದು ಇಬ್ಬರು ಸ್ಥಳದಲ್ಲೇ ಮೃತಪಟ್ಟಿದ್ದಾರೆ. ತೆರಕಣಾಂಬಿ ಪೊಲೀಸರು ಸ್ಥಳಕ್ಕೆ ಭೇಟಿ ನೀಡಿ ಮೃತದೇಹಗಳನ್ನು ಮರಣೋತ್ತರ ಪರೀಕ್ಷೆಗಾಗಿ ರವಾನಿಸಿ ಪ್ರಕರಣ ದಾಖಲಿಸಿ ತನಿಖೆ ನಡೆಸಿದ್ದಾರೆ.

ಇತ್ತ ಮಾಗಡಿಯಲ್ಲೂ ಇಂತಹುದೇ ದುರಂತ ನಡೆದಿದ್ದು, ಸ್ನೇಹಿತರೆಲ್ಲಾ ಟೀ ಕುಡಿಯಲು ಹೊರಟಿದ್ದ ಯುವಕರ ಕಾರು ಪಲ್ಟಿಯಾಗಿ, ಇಬ್ಬರು ಸ್ಥಳದಲ್ಲೇ ಸಾವಿಗೀಡಾಗಿದ್ದಾರೆ. ಕಾರಿನಲ್ಲಿದ್ದ ಐವರಿಗೆ ಗಾಯವಾಗಿವೆ.

ಮಾಗಡಿ ತಾಲೂಕಿನ ಹೊಸಪಾಳ್ಯದ ಜನತಾ ಕಾಲೋನಿ ಬಳಿ ಬೆಳಗಿನ ಜಾವ 3 ಗಂಟೆಗೆ ಅಪಘಾತ ನಡೆದು ಮಾಗಡಿ ತಾಲೂಕಿನ ಚೋಳನಾಯಕನಹಳ್ಳಿಯ ಮಂಜು (31), ಕಿರಣ್ (30) ಎಂಬುವವರು ಮೃತಪಟ್ಟಿದ್ದಾರೆ. ಗಾಯಾಳುಗಳಿಗೆ ಮಾಗಡಿ ಸಾರ್ವಜನಿಕ ಆಸ್ಪತ್ರೆಯಲ್ಲಿ ಚಿಕಿತ್ಸೆ ನೀಡಲಾಗುತ್ತಿದೆ.

ಮತ್ತೊಂದು ಅಪಘಾತದಲ್ಲಿ ಪಾದಚಾರಿಗೆ ಬೈಕ್ ಡಿಕ್ಕಿಯಾಗಿ ಸ್ಥಳದಲ್ಲೆ ಮೃತಪಟ್ಟಿರುವ ಘಟನೆ ಮಾಗಡಿ ಹೊಸ ಪೇಟೆ ಸರ್ಕಲ್ ಬಳಿ ಘಟನೆ ನಡೆದಿದೆ. ಮಧ್ಯರಾತ್ರಿ 12.30ರ ಸಮಯದಲ್ಲಿ ಈ ಘಟನೆ ನಡೆದಿದ್ದು, 45 ವರ್ಷದ ಸಿದ್ದಪ್ಪ ಎಂಬ ವ್ಯಕ್ತಿ ಸಾವಿಗೀಡಾಗಿದ್ದಾರೆ.

ಅಂತೆಯೇ ದ್ವಿಚಕ್ರ ವಾಹನ ಸವಾರ ಮೋಹನ್ ಎಂಬಾತನಿಗೆ ಗಾಯಗಳಾಗಿದ್ದು, ಸರ್ಕಾರಿ ಆಸ್ಪತ್ರೆಯಲ್ಲಿ ಚಿಕಿತ್ಸೆಪಡೆಯುತ್ತಿದ್ದಾರೆ. ಮಾಗಡಿ ಪೊಲೀಸ್ ಠಾಣೆಯಲ್ಲಿ ಪ್ರಕರಣ ದಾಖಲಾಗಿದೆ.

# ಪ್ರಾಚಾರ್ಯ ಗಾಂವಕರಗೆ ಆತ್ಮೀಯ ಬೀಳ್ಕೊಡುಗೆ




ಮಲ್ಲಮ್ಮ ನುಡಿ ವಾರ್ತೆ

ಬಾಗಲಕೋಟೆ,ಜ.1–ನಗರದ ಬಸವೇಶ್ವರ ವೀರಶೈವ ವಿದ್ಯಾವರ್ಧಕ ಸಂಘದ ಬಸವೇಶ್ವರ ವಿಜ್ಞಾನ ಮಹಾವಿದ್ಯಾಲಯದ ಪ್ರಾಚಾರ್ಯ ಡಾ.ಎಸ್.ಎಂ.ಗಾಂವಕರ ಸೇವಾ ನಿವೃತ್ತಿ ಹೊಂದಿದ ಪ್ರಯುಕ್ತ ಅವರನ್ನು ಆತ್ಮೀಯವಾಗಿ ಬೀಳ್ಕೊಡಲಾಯಿತು.

ಗಾಂವಕರ ದಂಪತಿಗಳನ್ನು ಸನ್ಮಾನಿಸಿದ ಸಂಘದ ಕಾಲೇಜುಗಳ ಆಡಳಿತ ಮಂಡಳಿ ಕಾರ್ಯಾಧ್ಯಕ್ಷ ಗುರುಬಸವ ಸೂಳಿಭಾವಿ, ಉತ್ತಮ ಸೇವೆ ಸಲ್ಲಿಸಿದವರನ್ನು ಗೌರವಿಸಿ ಸನ್ಮಾನಿಸುವುದು ನಮ್ಮೆಲ್ಲರ ಕರ್ತವ್ಯವಾಗಿದೆ ಎಂದರು.

ಗಾಂವಕರ ಅವರು ಉತ್ತಮ ಸೇವೆ ಸಲ್ಲಿಸಿದ ಪರಿಣಾಮ ಇಂದು ವಿಜ್ಞಾನ ಮಹಾವಿದ್ಯಾಲಯಕ್ಕೆ ಒಳ್ಳೆಯ ಹೆಸರು ಮತ್ತು ಕೀರ್ತಿ ಬಂದಿದೆ. ಇಂತಹ ಪ್ರಾಮಾಣಿಕರ ಸೇವೆ ಸದಾಕಾಲ ಮಹಾವಿದ್ಯಾಲಯಕ್ಕೆ ಸಂಘಕ್ಕೆ ಸಿಗಲಿ ಎಂದು ಹೇಳಿದರು.

ಸನ್ಮಾನ ಸ್ವೀಕರಿಸಿ ಮಾತನಾಡಿದ ಡಾ.ಎಸ್.ಎಂ.ಗಾಂವಕರ, ಪ್ರತಿಷ್ಠಿತ ಬಸವೇಶ್ವರ ಸಂಸ್ಥೆಯಲ್ಲಿ ಸೇವೆ ಸಲ್ಲಿಸಲು ಅವಕಾಶ ಸಿಕ್ಕಿರುವುದು ನನ್ನ ಪುಣ್ಯ, ಸೇವೆಯ ಸಾರ್ಥಕತೆಯ ಆತ್ಮ ವಿಶ್ವಾಸ ನನ್ನಲ್ಲಿ ತುಂಬಿದೆ ಎಂದರು.

ಐಕ್ಯೂಎಸಿ ಸಂಯೋಜಕ ಡಾ.ಡಿ.ಎಸ್.ಲಮಾಣಿ, ಪಿಯು ವಿಭಾಗದ ಪ್ರಾಚಾರ್ಯ ಡಾ.ಎನ್.ಎಚ್.ಬೇವಿನಹಳ್ಳಿ, ವಿದ್ಯಾಗಿರಿಯ ಬಸವೇಶ್ವರ ಕಲಾ.ವಾಣಿಜ್ಯ ಹಾಗೂ ವಿಜ್ಞಾನ ಮಹಾವಿದ್ಯಾಲಯದ ಪ್ರಾಚಾರ್ಯ ಟಿ.ಬಿ.ಕೋರಿಶೆಟ್ಟಿ, ವಿ.ಎನ್.ವನಕುದರಿ ಸೇರಿದಂತೆ ಅನೇಕರು ವೇದಿಕೆಯ ಮೇಲೆ ಇದ್ದರು.

# ಹಣಕಾಸು ಸಂಸ್ಥೆಗಳ ಪರವಾನಿಗೆ ರದ್ಧತಿಗೆ ಕ್ರಮ

ಮಲ್ಲಮ್ಮ ನುಡಿ ವಾರ್ತೆ

ಬಾಗಲಕೋಟೆ,ಜ.1–ಜಮಖಂಡಿ ಉಪ ವಿಭಾಗದ ಸ್ಥಗಿತಗೊಂಡ ಲೇವಾದೇವಿ, ಗಿರವಿ ಹಾಗೂ ಹಣಕಾಸು ಸಂಸ್ಥೆಯ ಪರವಾನಿಗೆ ರದ್ದುಪಡಿಸಿ ಭದ್ರತಾ ಠೇವಣಿಯನ್ನು ಸರಕಾರಕ್ಕೆ ಮುಟ್ಟುಗೋಲು ಹಾಕಿಕೊಳ್ಳಲಾಗುವದೆಂದು ಜಮಖಂಡಿ ಉಪ ವಿಭಾಗದ ಸಹಾಯಕ ನಿಬಂಧಕರು ಮತ್ತು ಸಹಕಾರ ಸಂಘಗಳ ಸಹಾಯಕ ನಿಬಂಧಕರು ತಿಳಿಸಿದ್ದಾರೆ.


ವಿಜಯಲಕ್ಷ್ಮೀ ಪೈನಾನ್ಸ್ ಕಾರ್ಪೋರೇಶನ ಹುನ್ನೂರ, ಗಜಾನನ ಪೈನಾನ್ಸ್ ಮತ್ತು ಇನ್‌ವೆಸ್ಟಮೆಂಟ ಮಹಾಲಿಂಗಪೂರ ರೋಡ ರಬಕವಿ, ಸಂಗಮೇಶ್ವರ ಪೈನಾನ್ಸ ಕಾರ್ಪೋರೇಶನ ಕಲ್ಲಟ್ಟಿ ಗಲ್ಲಿ ತೇರದಾಳ, ಜೈ ಹನುಮಾನ ಫೈನಾನ್ಸ್ ಕಾರ್ಪೋರೇಶನ್ ಗೋಠೆ ತಾ. ಜಮಖಂಡಿ, ಸಿದ್ದೇಶ್ವರ ಹಣಕಾಸು ಫೈನಾನ್ಸ್ ಕಾರ್ಪೋರೇಶನ್ ಬನಹಟ್ಟಿ ತಾಲೂಕು ಜಮಖಂಡಿ. ನ್ಯೂ ಭಾರತ ಫೈನಾನ್ಸ್ ಕಾರ್ಪೋರೇಶನ್ ಕೋಷ್ಠಿ ಗಲ್ಲಿ ಜಮಖಂಡಿ.

ಪಾಂಡುರಂಗ ಫೈನಾನ್ಸ್ ಕಾರ್ಪೋರೇಶನ್ ಅಂಬೇಡಕರ್ ಸರ್ಕಲ್ ಹತ್ತಿರ ಜಮಖಂಡಿ, ಸಂಗೊಳ್ಳಿ ರಾಯಣ್ಣ ಫೈನಾನ್ಸ್ ಕಾರ್ಪೋರೇಶನ್ ರಬಕವಿ, ಗ್ರಾವಿಟಿ ಫೈನಾನ್ಸ್ ಕಾರ್ಪೋರೇಶನ್ ಹುನ್ನುರು, ಹೆಚ್‌ಕೆಎಚ್‌ಆರ್ ಪೈನಾನ್ಸ್ ಕಾರ್ಪೊರೇಶನ್ ಬನಹಟ್ಟಿ, ಶ್ರೀ ಗುರು ರಾಚೋಟೇಶ್ವರ ಫೈನಾನ್ಸ್ ಕಾರ್ಪೋರೇಶನ್ ಮಧುರಖಂಡಿ, ಲಕ್ಷ್ಮೀ ವೆಂಕಟೇಶ ಫೈನಾನ್ಸ್ ಕಾರ್ಪೋರೇಶನ್ ರಬಕವಿ, ವಿನಾಯಕ ಫೈನಾನ್ಸ್ ಕಾರ್ಪೋರೇಶನ್ ಬಜಾರ್ ರೋಡ್ ಮುಧೋಳ.

ಧನಲಕ್ಷ್ಮೀ ಪೈನಾನ್ನ ಕಾರ್ಪೋರೇಶನ ಲೋಕಾಪೂರ, ಸದಾಶಿವ ಫೈನಾನ್ಸ್ ಕಾರ್ಪೋರೇಶನ್ ಲೋಕಾಪೂರ, ಗಣೇಶ್ ಫೈನಾನ್ಸ್ ಕಾರ್ಪೋರೇಶನ್ ಮಹಾಲಿಂಗಪುರ, ಕರ್ಜಗಿ ಫೈನಾನ್ಸ್ ಕಾರ್ಪೋರೇಶನ್ ಬೀಳಗಿ, ಲಖಮಿಚಂದ ಹರಕಚಂದ ಓಸ್ವಾಲ ಸರಾಫ್ ಬಜಾರ ಜಮಖಂಡಿ, ಲೆಹರೀಲಾಲ್ ಗುಲಾಬಚಂದ ಜೈನ್ ಸರಾಫ್ ಬಜಾರ ಜಮಖಂಡಿ, ಆನಂದ ಕೇಶವಗುಂಡಾ ಲೇವಾದೇವಿದಾರರು ಮಹಾಲಿಂಗಪುರ. ಈ ಎಲ್ಲಾ ಹಣಕಾಸು ಸಂಸ್ಥೆಯವರ ನವೀಕರಣ ಅವಧಿ ಮುಕ್ತಾಯಗೊಂಡಿದೆ.

ಈ ಸಂಸ್ಥೆಗಳಿಗೆ ನೀಡಿದ ಪರವಾನಿಗೆ ಪ್ರಮಾಣ ಪತ್ರ ರದ್ದಾಗಿರುವುದರಿಂದ ಪಾವತಿಸಿದ ಭದ್ರತಾ ಠೇವಣಿ ಮೊತ್ತವನ್ನು ಕರ್ನಾಟಕ ಲೇವಾದೇವಿ ಕಾಯ್ದೆ 1961 ಕಲಂ 7 ಬಿ ರನ್ವಯ ಸರ್ಕಾರಕ್ಕೆ ಮುಟ್ಟುಗೋಲು ಹಾಕಿಕೊಂಡು ಸಂಸ್ಥೆಯ ನೋಂದಣಿಯನ್ನು ರದ್ದುಗೊಳಿಸಲು ನಿರ್ಧರಿಸಲಾಗಿರುತ್ತದೆ. ಕಾರಣ ಈ ಹಣಕಾಸು ಸಂಸ್ಥೆಯವರು ಈ ಪತ್ರಿಕಾ ಪ್ರಕಟಣೆ ನೀಡಿದ 07 ದಿನದೊಳಗೆ ತಮ್ಮ ಆಕ್ಷೇಪನೆಗಳೇನಾದರೂ ಇದ್ದರೆ, ಸಹಕಾರ ಸಂಘಗಳ ಸಹಾಯಕ ನಿಬಂಧಕರ ಕಚೇರಿ ಗಿರೀಶ ನಗರ, ಕೆಜಿಎನ್ ಕಾಂಪ್ಲೆಕ್ಸ ಜಮಖಂಡಿ ಇವರಲ್ಲಿ ಆಕ್ಷೇಪನೆಗಳನ್ನು ಸಲ್ಲಿಸಲು ತಿಳಿಸಿದ್ದು, ಆಕ್ಷೇಪನೆಗಳು ಬರದೇ ಇದ್ದ ಪಕ್ಷದಲ್ಲಿ ನಿಯಮಾನುಸಾರ ಮುಂದಿನ ಕ್ರಮಕೈಗೊಳ್ಳಲಾಗುವುದು.

# ಕೆಯುಡಬ್ಲ್ಯೂಜೆ ಕ್ಯಾಲೆಂಡರ್ ಬಿಡುಗಡೆ ಹೊಸ ವರ್ಷಕ್ಕೆ ಶುಭ ಕೋರಿದ ಸಿಎಂ



ಬೆಂಗಳೂರು:

ಹೊಸ ವರ್ಷದ ಸಂದರ್ಭದಲ್ಲಿ ಕರ್ನಾಟಕ ಕಾರ್ಯನಿರತ ಪತ್ರಕರ್ತರ ಸಂಘ (ಕೆಯುಡಬ್ಲ್ಯೂಜೆ) ಹೊರ ತಂದಿರುವ ಕ್ಯಾಲೆಂಡರ್‌ನ್ನು ವಿಧಾನಸೌಧದ ಸಮ್ಮೇಳನದ ಸಭಾಂಗಣದಲ್ಲಿ ಮುಖ್ಯಮಂತ್ರಿ ಸಿದ್ದರಾಮಯ್ಯ ಬಿಡುಗಡೆ ಮಾಡಿ, ಹೊಸ ವರ್ಷ ಪತ್ರಕರ್ತರಿಗೆ ಒಳ್ಳೆಯದು ಮಾಡಲಿ ಎಂದರು. ಇದೇ ಸಂದರ್ಭದಲ್ಲಿ ಸಂಘದ ರಾಜ್ಯಾಧ್ಯಕ್ಷ ಶಿವಾನಂದ ತಗಡೂರು ಅವರು ಮುಖ್ಯಮಂತ್ರಿಗಳಿಗೆ ಹೊಸ ವರ್ಷದ ಶುಭಾಶಯ ಕೋರಿದರು. ಪ್ರಧಾನ ಕಾರ್ಯದರ್ಶಿ ಜೆ.ಸಿ.ಲೋಕೇಶ್, ಖಜಾಂಚಿ ವಾಸುದೇವ ಹೊಳ್ಳ ಮತ್ತು ಪದಾಧಿಕಾರಿಗಳು ಹಾಜರಿದ್ದರು.

# ನೇರ ಸಂದರ್ಶನಕ್ಕೆ ಆಹ್ವಾನ

ಮಲ್ಲಮ್ಮ ನುಡಿ ವಾರ್ತೆ

ಯಾದಗಿರಿ : ಜನವರಿ 01, : ಯಾದಗಿರಿ ಜಿಲ್ಲಾ ಉದ್ಯೋಗ ವಿನಿಮಯ ಕಛೇರಿ ವತಿಯಿಂದ 2025ರ ಜನವರಿ 4 ರಂದು ಬೆಳಿಗ್ಗೆ 10.30 ರಿಂದ ಮಧ್ಯಾಹ್ನ 2 ಗಂಟೆಯ ವರೆಗೆ ನೇರ ಸಂದರ್ಶನವನ್ನು ಆಯೋಜಿಸಲಾಗಿದೆ ಎಂದು ಯಾದಗಿರಿ ಉದ್ಯೋಗಾಧಿಕಾರಿ ಪ್ರಭಾಕರ್ ಅವರು ತಿಳಿಸಿದ್ದಾರೆ. ಗ್ರೂಪ್ ಆಫ್ ಜನಶ್ರೀ ಎಂಟರ್‌ಪ್ರೈಸಸ್, ಸೇಲ್ಸ್ ಮ್ಯಾನ್ 80 ಹುದ್ದೆಗಳು ಖಾಲಿ ಇದ್ದು ಹುದ್ದೆಗೆ ಅರ್ಹತೆ 7ನೇ/10ನೇ/ಯಾವುದೇ ಪದವಿ ಯಾದಗಿರಿ ಶಹಾಪೂರು ಸುರುಪೂರ ದೇವದುರ್ಗ ಕಲಬುರಗಿ ಸೇಡಂ ಚಿತ್ತಾಪೂರು ಗುರುಮಠಕಲ್ ವಡಗೇರಾ ಹುಣಸಿಗಿ (ತಾವು ಇರುವ ಹತ್ತಿರ ಸ್ಥಳದಲ್ಲಿಯೇ ಕಾರ್ಯ ನಿರ್ವಹಿಸಲು ಅನುಕೂಲವಿದೆ) ಉದ್ಯೋಗ ಸ್ಥಳವಾಗಿದೆ. ವಯೋಮಿತಿ 18 ರಿಂದ 35 ವರ್ಷ ಒಳಗಿರಬೇಕು, ಪುರುಷ ಮತ್ತು ಮಹಿಳೆ ಭಾಗವಹಿಸಬಹುದಾಗಿದೆ.

02) ಅನ್ನಪೂರ್ಣ ಫೈನಾನ್ಸ್ ಪ್ರೈ.ಲಿ., (ಅ) ಫೀಲ್ಡ್ ಕ್ರೇಡಿಟ್ ಆಫೀಸರ್ 20 ಹುದ್ದೆಗಳು ಖಾಲಿ ಇದ್ದು, ಹುದ್ದೆಗೆ ಅರ್ಹತೆ 12ನೇ ಪಾಸ್. ಪುರುಷ ಅಭ್ಯರ್ಥಿಗಳು ಭಾಗವಹಿಸಬಹುದಾಗಿದೆ. ವಯೋಮಿತಿ 18 ರಿಂದ 30 ವರ್ಷ (ಆ) ಡೆವಲಪ್ಮೆಂಟ್ ಆಫೀಸರ್ 10 ಹುದ್ದೆಗಳು ಖಾಲಿ ಇದ್ದು ಹುದ್ದೆಗೆ ಅರ್ಹತೆ 12ನೇ ಪಾಸ್. ಪುರುಷ ಅಭ್ಯರ್ಥಿಗಳು ಭಾಗವಹಿಸಬಹುದಾಗಿದೆ. 18 ರಿಂದ 30 ವರ್ಷ ಒಳಗಿರಬೇಕು.

ಅಸಿಸ್ಟಂಟ್ ಬ್ರಾಂಚ್ ಮ್ಯಾನೇಜರ್ 05 ಹುದೆಗಳು ಖಾಲಿ ಇದ್ದು ಹುದ್ದೆಗೆ ಅರ್ಹತೆ ಯಾವುದೇ ಪದವಿ. ಪುರುಷ, ಮಹಿಳಾ ಅಭ್ಯರ್ಥಿಗಳು ಭಾಗವಹಿಸಬಹುದಾಗಿದೆ. ಯಾದಗಿರಿ, ಕಲಬುರಗಿ, ರಾಯಚೂರು ಜಿಲ್ಲೆಯಾದ್ಯಂತ ಉದ್ಯೋಗ ಸ್ಥಳವಾಗಿದೆ. 21 ರಿಂದ 34 ವರ್ಷ. ಒಳಗಿರಬೇಕು, ಬೈಕ್ ಮತ್ತು ಡಿ.ಎಲ್. ಕಡ್ಡಾಯ. ಮತ್ತು ಅವಕಾಶ ವಂಚಿತ ನಿರುದ್ಯೋಗಿ ಅಭ್ಯರ್ಥಿಗಳು ನೇರ ಸಂದರ್ಶನಕ್ಕೆ ಹಾಜರಾಗಲು ತಿಳಿಸಲಾಗಿದೆ.

ಜಾಹೀರಾತಿಗಾಗಿ ಇಂದೇ ಸಂಪರ್ಕಿಸಿ:9449732000

